ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಸಂಪುಟ: 21, ಸಂಚಿಕೆ: 264, ಪುಟಗಳು: 8, ಮಂಗಳವಾರ, 2 ಜುಲೈ 2024 RNI NO. KARKAN/2002/08054
epaper: www.sanjemugilu.com
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3



ವೇಣು ಸಾರಥ್ಯದಲ್ಲಿ...




### ಸುಭಾಷಿತ

ಒಂದು ಲಿಲ್ಲಿಯಾಗಲಿ ಅಥವಾ ಗುಲಾಬಿಯಾಗಲಿ ಎಂದಿಗೂ ನಟಿಸುವುದಿಲ್ಲ. ತನ್ನ ಮೂಲಗುಣಕ್ಕೆ ತಕ್ಕಂತೆ ಇರುವುದೇ ಅವರ ಸೌಂದರ್ಯದ ಗುಟ್ಟು.

। ಜಿಡ್ಡು ಕೃಷ್ಣಮೂರ್ತಿ

### ಪಂಚಾಂಗ

(ಮಂಗಳವಾರ 2, ಜುಲೈ-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ಗ್ರೀಷ್ಮ ಋತು,
- ಜೇಷ್ಠ ಮಾಸ, ಕೃಷ್ಣ ಪಕ್ಷ,
- ಮಂಗಳವಾರ, ಏಕಾದಶಿ, ಕೃತಿಕಾ,
- ರಾಹುಕಾಲ : 3:39 ರಿಂದ 5:15
- ಗುಳಿಕಕಾಲ : 12:27 ರಿಂದ 2:03
- ಯಮಗಂಡಕಾಲ : 9:15 ರಿಂದ 10:51

## ಸಂಕ್ಷಿಪ್ತ ಸುದ್ದಿ

### ಕಲಬುರಗಿ ಜಿಲ್ಲಾ ಕೋರ್ಟ್ ಆವರಣದಲ್ಲಿ ಹಲ್ಲೆ



**ಕಲಬುರಗಿ:** ಸಿನಿಮೀಯ ಶೈಲಿಯಲ್ಲಿ ಬೆನ್ನತ್ತಿ ಬಂದು ಕಲಬುರಗಿ ಜಿಲ್ಲಾ ಕೋರ್ಟ್ ಆವರಣದಲ್ಲೇ ವ್ಯಕ್ತಿಯ ಮೇಲೆ ಮಾರಾಕಾಸ್ತ್ರಗಳಿಂದ ಹಲ್ಲೆ ಮಾಡಲಾಗಿದೆ. ಧೀರಜ್ ಹಲ್ಲೆಗೊಳಗಾದ ವ್ಯಕ್ತಿ. ಪ್ರಶಾಂತ್ ಪಾಟೀಲ್ (20), ವೀರೇಶ್ ಪಾಟೀಲ್ (19), ರಾಮು ಪಾಟೀಲ್ (38) ಹಲ್ಲೆ ಮಾಡಿದ ಆರೋಪಿಗಳು. ತಲ್ವಾರ್ ದಾಳಿಯಿಂದ ಧೀರಜ್‌ಗೆ ಗಾಯವಾಗಿದ್ದು, ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಹಲ್ಲೆ ಮಾಡುತ್ತಿದ್ದ ವೇಳೆ ಕೋರ್ಟ್ ಆವರಣದಲ್ಲಿದ್ದ ಸಾರ್ವಜನಿಕರು ಮತ್ತು ವಕೀಲರು ಆರೋಪಿಗಳನ್ನು ತಡೆದಿದ್ದಾರೆ. ಬಳಿಕ ಪೊಲೀಸರಿಗೆ ಒಪ್ಪಿಸಿದ್ದಾರೆ. ಪುಟ 2

### ಆತ್ಮಹತ್ಯೆಗೆ ಶರಣಾದ ಕಾನ್‌ಸ್ಟೇಬಲ್ ಮೃತದೇಹ ಪತ್ತೆ ಮಾಡಿದ್ದೇ ರೋಚಕ

**ಬೆಂಗಳೂರು:** ಇಲ್ಲಿನ ಮಡಿವಾಳ ಪೊಲೀಸ್ ಕಾನ್‌ಸ್ಟೇಬಲ್ ಆತ್ಮಹತ್ಯೆ ಪ್ರಕರಣದಲ್ಲಿ ಶಿವರಾಜ್ ಮೃತದೇಹ ಪತ್ತೆ ಮಾಡಿದ್ದೇ ರೋಚಕವಾಗಿದೆ.



ಶಿವರಾಜ್ ಮೃತದೇಹ ಪತ್ತೆ ಮಾಡೋಕೆ ಬರೋಬ್ಬರಿ 250 ಸಿಸಿಟಿವಿಯನ್ನು ಮಡಿವಾಳ ಪೊಲೀಸರು ಪರಿಶೀಲನೆ ಮಾಡಿದ್ದಾರೆ.ಸುಬ್ರಮಣ್ಯಪುರ ಪೊಲೀಸರು ಹಾಗೂ ಮಡಿವಾಳ ಪೊಲೀಸರಿಂದ ಶಿವರಾಜ್‌ಗಾಗಿ ಹುಡುಕಾಟ ನಡೆದಿತ್ತು. ಆದರೆ ಮಡಿವಾಳ ಪೊಲೀಸ್ ಸಿಬ್ಬಂದಿಯಾದ ಹಿನ್ನೆಲೆ ಇನ್ಸ್‌ಸ್ಪೆಕ್ಟರ್ ಸೂಚನೆ ಮೇರೆಗೆ ಮಡಿವಾಳ ಪೊಲೀಸರೇ ಹುಡುಕಾಟ ಪುಟ 2

## ಕರ್ನಾಟಕದ ರಸ್ತೆ ಅಭಿವೃದ್ಧಿಗಾಗಿ 8 ಸಾವಿರ ಕೋಟಿ ರೂ. ಮಂಜೂರು

**ಬೆಂಗಳೂರು:** ಕರ್ನಾಟಕದಲ್ಲಿ ರಸ್ತೆ ಅಭಿವೃದ್ಧಿ ಮತ್ತು ಹೊಸ ರಸ್ತೆಗಳ ನಿರ್ಮಾಣಕ್ಕಾಗಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ



2024-25ರ ಅವಧಿಗೆ 8,021 ಕೋಟಿ ರೂ. ಅನುದಾನ ಮಂಜೂರು ಮಾಡಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ಈ ಬಗ್ಗೆ ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಸಂದೇಶ ಪ್ರಕಟಿಸುವ ಮೂಲಕ ಅವರು ಮಾಹಿತಿ ನೀಡಿದ್ದಾರೆ. ಈಗ ಕೂಡಲೇ ವಿಸ್ತೃತ ಯೋಜನಾ ವರದಿ (ಡಿಪಿಆರ್) ಸಿದ್ಧಪಡಿಸಿ ಟೆಂಡರ್ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ ಕಾಮಗಾರಿಗಳಿಗೆ ಚಾಲನೆ ನೀಡುವ ಜವಾಬ್ದಾರಿ ರಾಜ್ಯ ಸರ್ಕಾರದ ಮೇಲೆ ಇದೆ ಎಂದೂ ಅವರು ಹೇಳಿದ್ದಾರೆ. ಪುಟ 2



## ಧಾರಾಕಾರ ಮಳೆಗೆ ಗಂಗಾವಳಿ ನದಿ ಸೇತುವೆ ಮುಳುಗಡೆ: ಆತಂಕ

**ಕಾರವಾರ:** ಮೈದುಂಬಿ ಹರಿಯುತ್ತಿರುವ ಗಂಗಾವಳಿ ನದಿ, ಅದರ ನೀರಿನಲ್ಲಿ ಮುಳುಗಡೆ ಗೊಂಡಿರುವ ಸೇತುವೆ. ಅದೇ ಸೇತುವೆ ಮೂಲಕ ಸಂಚರಿಸುತ್ತಿರುವ ಜನರು. ಈ ದೃಶ್ಯ ಕಂಡು ಬಂದಿದ್ದು ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರ ತಾಲೂಕಿನ ಇಡಗುಂದಿ ಗ್ರಾಮಪಂಚಾಯತಿ ವ್ಯಾಪ್ತಿಯಲ್ಲಿ. ಕಳೆದ ಮೂರು ವರ್ಷಗಳ ಹಿಂದೆ ಗ್ರಾಮಸ್ಥರ ಒತ್ತಾಯದ ಮೇರೆಗೆ ನಿರ್ಮಿಸಿರುವ ಸೇತುವೆ ಸದ್ಯ ಮುಳುಗುಡೆಯಾಗಿದ್ದು ಐದಕ್ಕೂ ಹೆಚ್ಚು ಗ್ರಾಮಗಳ ಜನರು ಪ್ರಾಣ ಭಯದಲ್ಲೇ ಸಂಚರಿಸುವಂತಾಗಿದೆ. ಪುಟ 2



# ರಾಹುಲ್ ಭಾಷಣಕ್ಕೆ ಕತ್ತರಿ

## ವಿವಾದಾತ್ಮಕ ಮಾತುಗಳನ್ನು ಕಲಾಪದಿಂದ ತೆಗೆಯಲು ಸ್ಪೀಕರ್ ಸೂಚನೆ

**ನವದೆಹಲಿ:** ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಬಿಜೆಪಿ ಹಾಗೂ ಆರ್‌ಎಸ್‌ಎಸ್ ಬಗ್ಗೆ ವಿವಾದಾತ್ಮಕ ಮಾತುಗಳನ್ನಾಡಿರುವ ಕಾರಣ ಅವರ ಭಾಷಣವನ್ನು ಕಲಾಪದಿಂದ ತೆಗೆಯುವಂತೆ ಸ್ಪೀಕರ್ ಓಂ ಬಿರ್ಲಾ ಸೂಚನೆ ನೀಡಿದ್ದಾರೆ. ಲೋಕಸಭೆ ಸಚಿವಾಲಯದ ಪತ್ರಿಕಾ ಮತ್ತು ಸಾರ್ವಜನಿಕ ಸಂಪರ್ಕ ಶಾಖೆಯ ಜಂಟಿ ನಿರ್ದೇಶಕ ಬೈಕುಂಠನಾಥ ಮಹಾಪಾತ್ರ ಅವರು ಪತ್ರವೊಂದನ್ನು ಹೊರಡಿಸಿ ಈ ಕುರಿತು ಮಾಹಿತಿ ನೀಡಿದ್ದಾರೆ.

ರಾಯ್ ಬರೇಲಿ ಸಂಸದ ರಾಹುಲ್ ಗಾಂಧಿ ಲೋಕಸಭೆಯಲ್ಲಿ ತಮ್ಮ ಅಭಿಪ್ರಾಯಗಳನ್ನು ಮಂಡಿಸಿದರು. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಭಾಷಣದ ಮೇಲಿನ ಚರ್ಚೆಯಲ್ಲಿ ಅವರು ಭಾಗವಹಿಸಿದ್ದರು. ಈ ವೇಳೆ ಅವರು ಇಂತಹ ಹಲವು ವಿಷಯಗಳನ್ನು ಹೇಳಿದ್ದು ಆಡಳಿತ ಪಕ್ಷ ಅದರಲ್ಲೂ ಬಿಜೆಪಿ ತೀವ್ರ ಆಕ್ಷೇಪ ವ್ಯಕ್ತಪಡಿಸಿದೆ.

ಎರಡು ಬಾರಿ ಪ್ರಧಾನಿ ಮೋದಿ ತಮ್ಮ ಆಸನದಿಂದ ಎದ್ದು ಉತ್ತರಿಸಬೇಕಾಯಿತು. ಸುಮಾರು ಎರಡೂವರೆ ಗಂಟೆಗಳ ಕಾಲ ನಡೆದ ರಾಹುಲ್ ಭಾಷಣಕ್ಕೂ ಎನ್ ಡಿಎ ನಾಯಕರು ಆಕ್ಷೇಪ ವ್ಯಕ್ತಪಡಿಸಿದರು. ಸ್ಪೀಕರ್ ಓಂ ಬಿರ್ಲಾ ಅವರೇ ಎಚ್ಚರಿಕೆಯಿಂದ ಮಾತನಾಡುವಂತೆ ಒತ್ತಾಯಿಸಿದ್ದರು. ಹಿಂದೂಗಳ ಕುರಿತ ಅವರ ಹೇಳಿಕೆ ಸೇರಿದಂತೆ ಭಾಷಣದ ಕೆಲವು ಭಾಗಗಳನ್ನು ಈಗ ಸದನದ ಕಲಾಪದಿಂದ ತೆಗೆದುಹಾಕಲಾಗಿದೆ. ರಾಹುಲ್ ಗಾಂಧಿ ಅವರ ವಿವಾದಾತ್ಮಕ ಭಾಷಣದ ಕೆಲವು ಸಾಲುಗಳಿಗೆ ಆಕ್ಷೇಪ ವ್ಯಕ್ತಪಡಿಸಿರುವ ಬಿಜೆಪಿ ನಾಯಕರು ಅವರ ಕ್ಷಮೆಯಾಚನೆಗೆ ಒತ್ತಾಯಿಸಿದ್ದಾರೆ. ಪುಟ 2



### ಪ್ರತಿ ಜಿಲ್ಲೆಯಲ್ಲಿ ವಿಶೇಷ ಫ್ಯಾಕ್ಟ್ –ಚೆಕ್ ಘಟಕ

## ಸುಳ್ಳು ಸುದ್ದಿ ನಿಯಂತ್ರಣದ ಬಗ್ಗೆ ಸಿಎಂ ಸಿದ್ದರಾಮಯ್ಯ ಹೇಳಿದ್ದಿಷ್ಟು

**ಬೆಂಗಳೂರು:** ಸುಳ್ಳು ಸುದ್ದಿಗಳು ಮತ್ತು ತಪ್ಪು ಮಾಹಿತಿಗಳನ್ನು ಎದುರಿಸಲು ಕರ್ನಾಟಕ ಸರ್ಕಾರ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ವಿಶೇಷ ಫ್ಯಾಕ್ಟ್-ಚೆಕ್ ಘಟಕಗಳನ್ನು ಸ್ಥಾಪಿಸಿದೆ. ವಿಶೇಷವಾಗಿ ಸಾಮಾಜಿಕ ಮಾಧ್ಯಮಗಳಲ್ಲಿ ಬರುವ ಫೇಕ್ ನ್ಯೂಸ್ ಗಳ ಬಗ್ಗೆ ಈ ಘಟಕಗಳು ಗಮನಹರಿಸಲಿವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ವಾರ್ತಾ ಇಲಾಖೆ ಸಹಯೋಗದಲ್ಲಿ ಬೆಂಗಳೂರು



ಪ್ರೆಸ್ ಕ್ಲಬ್ ಸಮವಾರ ಆಯೋಜಿಸಿದ್ದ ಪತ್ರಿಕಾ ದಿನಾಚರಣೆಯಲ್ಲಿ ಅವರು ಮಾತನಾಡಿದ್ದಾರೆ.

ಇಡೀ ಸಮಾಜ, ಅದರಲ್ಲಿಯೂ ವಿಶೇಷವಾಗಿ ಮಾಧ್ಯಮಗಳು ಸುಳ್ಳು ಸುದ್ದಿಗಳನ್ನು ಪರಿಶೀಲಿಸುವ ಮತ್ತು ನಿಭಾಯಿಸುವ ಬಗ್ಗೆ ಹೆಚ್ಚು ಜಾಗರೂಕರಾಗಿರಬೇಕು ಎಂದು ಅವರು ಹೇಳಿದ್ದಾರೆ. ಸಾಮಾಜಿಕ ಜಾಲತಾಣಗಳ ಮೂಲಕ ಸುಳ್ಳು ಸುದ್ದಿ ಹರಡುವುದು ಅಪಾಯಕಾರಿ ಎಂದಿರುವ ಸಿದ್ದರಾಮಯ್ಯ, ಪುಟ 2

### ಕಾಯುವಂತೆ ಮಾಡಿದ್ದಕ್ಕೆ ಪೊಲೀಸರಿಗೆ ಬೈದು ವಿವಾದ ಸೃಷ್ಟಿಸಿದ

## ಸಚಿವರ ಪತ್ನಿ

**ಆಂಧ್ರಪ್ರದೇಶ:** 30 ನಿಮಿಷಗಳ ಕಾಲ ಕಾಯಿಸಿದ್ದಕ್ಕೆ ಆಂಧ್ರಪ್ರದೇಶದ ಸಚಿವ ಮಂಡಿಪಲ್ಲಿ ರಾಮಪ್ರಸಾದ್ ರೆಡ್ಡಿಪತ್ನಿ ಹರಿತಾ ನಡು ರಸ್ತೆಯಲ್ಲೇ ನಿಲ್ಲಿಸಿ ಸಬ್ ಇನ್ ಸ್ಪೆಕ್ಟರ್‌ಗೆ ಬೈದಿರುವ ವಿಡಿಯೋ ಈಗ ಎಲ್ಲೆಡೆ ವೈರಲ್ ಆಗುತ್ತಿದೆ. ಅವರು ಕಾರ್ಯಕ್ರಮವೊಂದಕ್ಕೆ ತೆರಳಬೇಕಿತ್ತು, ಪ್ಯಾಸೆಂಜರ್ ಸೀಟ್ ನಲ್ಲಿ ಕುಳಿತು ತಾನು 30 ನಿಮಿಷಗಳಿಂದ ಕಾಯುತ್ತಿದ್ದೇನೆ ನೀವು ಏಕೆ ತಡವಾಗಿ ಬಂದಿದ್ದು ಎಂದು ಕೇಳುತ್ತಾ ಕ್ಲಾಸ್ ತೆಗೆದುಕೊಂಡಿದ್ದರು.

ಪೊಲೀಸ್ ಅಧಿಕಾರಿಗೆ ನೂರಾರು ಪ್ರಶ್ನೆಗಳ ಸುರಿಮಳೆಯನ್ನೇ ಗೈದಿದ್ದಾರೆ,



ಅವರು ನಡವಳಿಕೆ ಬಗ್ಗೆ ಅಸಮಾಧಾನವನ್ನು ವ್ಯಕ್ತಪಡಿಸಿದ್ದರು. ಇನ್ನೂ ನಿಮಗೆ ಬೆಳಗಾಗಿರಲಿಲ್ಲವೇ , ನೀವು ಮದುವೆ ಮನೆಗೆ ಬಂದಿದ್ದಾ ಅಥವಾ ಕೆಲಸ ಮಾಡೋಕೆ ಬಂದಿರೋದ, ನಿಮಗಾಗಿ ಅರ್ಧ ಗಂಟೆ ಕಾಯಬೇಕಾಯಿತು, ಪುಟ 2

### ಉದ್ಯಮಿ ವಿಜಯ್ ಮಲ್ಯ ವಿರುದ್ಧ ಜಾಮೀನು ರಹಿತ ಬಂಧನ

## ವಾರೆಂಟ್

**ನವದೆಹಲಿ:** ಉದ್ಯಮಿ ವಿಜಯ್ ಮಲ್ಯ ವಿರುದ್ಧ ಮುಂಬೈ ಸಿಬಿಐ ವಿಶೇಷ ನ್ಯಾಯಾಲಯ ಜಾಮೀನು ರಹಿತ ಬಂಧನ ವಾರೆಂಟ್ ಜಾರಿ ಮಾಡಿದೆ.



ಬ್ಯಾಂಕ್‌ಗೆ ಸಾಲ ಮರು ಪಾವತಿಸದ ಹಿನ್ನೆಲೆ ವಾರೆಂಟ್ ಜಾರಿ ಮಾಡಲಾಗಿದೆ. ವಿಜಯ್ ಮಲ್ಯ ಇಂಡಿಯನ್ ಓವರ್ ಸೀಸ್ ಬ್ಯಾಂಕ್‌ನಿಂದ ಲೋನ್ ಪಡೆದಿದ್ದು, ಸಾಲ ಮರುಪಾವತಿ ಮಾಡಿಲ್ಲ. ಮಲ್ಯ 2007-2012ರ ಅವಧಿಯಲ್ಲಿ 180 ಕೋಟಿ ರೂ. ಸಾಲ ಪಡೆದಿದ್ದರು.

ಪ್ರಕರಣದಲ್ಲಿ ಮಲ್ಯ ಸೇರಿ ಹತ್ತು ಮಂದಿಯ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಇದೀಗ ವಿಜಯ್ ಮಲ್ಯಗೆ ಜಾಮೀನು ರಹಿತ ವಾರೆಂಟ್ ಜಾರಿ ಮಾಡಿದ್ದು, ಬಾಕಿ ಉಳಿದ ಆರೋಪಿಗಳಿಗೆ ಸಮನ್ಸ್ ಜಾರಿ ಮಾಡಲಾಗಿದೆ.

### ಓರ್ವ ಸಚಿವ, ಓರ್ವ ಶಾಸಕನಿಗೆ ಶೀಘ್ರವೇ

## ಶೋಕಾಸ್ ನೋಟಿಸ್

**ಬೆಂಗಳೂರು:** ರಾಜ್ಯ ಕಾಂಗ್ರೆಸ್‌ನಲ್ಲಿ ಶತಾಯಗತಾಯ ಶಿಸ್ತು ಕ್ರಮದ ಚಾಟಿ ಬೀಸಲೇ ಬೇಕು ಎಂಬ ತೀರ್ಮಾನಕ್ಕೆ ಕಾಂಗ್ರೆಸ್ ನಾಯಕರು ಬಂದಿದ್ದಾರೆ. ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಎರಡು ಬಣದಲ್ಲಿ ಒಬ್ಬೊಬ್ಬರ ಟಾರ್ಗೆಟ್ ಮಾಡಿ ನೋಟಿಸ್ ನೀಡುವುದು ಬಹುತೇಕ ಫಿಕ್ಸ್ ಎನ್ನಲಾಗಿದೆ.



ಸಿದ್ದರಾಮಯ್ಯ ಬಣದಲ್ಲಿ ಸಚಿವರೊಬ್ಬಗೆ ಮತ್ತು ಡಿಕೆಶಿ ಬಣದ ಶಾಸಕರೊಬ್ಬರಿಗೆ ಶೋಕಾಸ್ ನೋಟಿಸ್ ಫಿಕ್ಸ್ ಎನ್ನಲಾಗುತ್ತಿದೆ. ವಾರದೊಳಗೆ ಇಬ್ಬರಿಗೂ ನೋಟಿಸ್ ಕಳುಹಿಸುವ ಸಾಧ್ಯತೆಯಿದೆ.

ಕಾಂಗ್ರೆಸ್ ಅಂತರಿಕ ಭಿನ್ನಾಭಿಪ್ರಾಯಕ್ಕೆ ಮದ್ದು ಅರೆಯಲು ಶೀಘ್ರ ಶಾಸಕಾಂಗ ಪಕ್ಷದ ಸಭೆ ಕರೆಯಲು ಎಐಸಿಸಿಯಿಂದಲೇ ಸೂಚನೆ ಬಂದಿದೆ. ಜುಲೈ ಎರಡನೇ ವಾರದಲ್ಲಿ ಶಾಸಕಾಂಗ ಪಕ್ಷದ ಸಭೆ ನಡೆಯುವ ಸಾಧ್ಯತೆಯಿದ್ದು ಎಐಸಿಸಿ ಪ್ರಧಾನ ಕಾರ್ಯದರ್ಶಿ ಭಾಗವಹಿಸಲು ನಿರ್ಧರಿಸಿದ್ದಾರೆ ಎನ್ನಲಾಗಿದೆ.

ಹೈಕಮಾಂಡ್ ಸಂದೇಶವನ್ನು ಎಐಸಿಸಿ ನಾಯಕರ ಮೂಲಕವೇ ಶಾಸಕರು ಹಾಗೂ ಸಚಿವರಿಗೆ ಹೇಳಿಸುವುದು ಎಐಸಿಸಿ ಲೆಕ್ಕಾಚಾರ ಎನ್ನಲಾಗಿದೆ. ಅಧಿವೇಶನಕ್ಕೆ ಮೊದಲೇ ಬೆಂಗಳೂರಿನಲ್ಲಿ ಶಾಸಕಾಂಗ ಪಕ್ಷದ ಸಭೆ ಕರೆದು ಸಚಿವ ಶಾಸಕರಿಗೆ ಶಿಸ್ತಿನ ಪಾಠ ಹೇಳಲು ಎಐಸಿಸಿ ತೀರ್ಮಾನಿಸಲಾಗಿದೆ ಎನ್ನಲಾಗಿದೆ.

### ಯಾದಗಿರಿ ಜಿಲ್ಲಾಸ್ಪತ್ರೆಯಲ್ಲಿ ಸ್ಕ್ಯಾನಿಂಗ್ ಮಷಿನ್ ಸಮಸ್ಯೆ

## ರೋಗಿಗಳ ಪರದಾಟ

**ಯಾದಗಿರಿ:** ಕಳೆದ ಒಂದು ವಾರದಿಂದ ಯಾದಗಿರಿ ಜಿಲ್ಲಾಸ್ಪತ್ರೆಯ ಸ್ಕ್ಯಾನಿಂಗ್ ಮಷಿನ್ ಬಂದ್ ಆಗಿದ್ದು ರೋಗಿಗಳು ಪರದಾಡುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಯಾದಗಿರಿ ನಗರದ ತಾಯಿ ಮಕ್ಕಳ ಆಸ್ಪತ್ರೆ ಹೆಸರಿಗೆ ಮಾತ್ರ ತಾಯಿ ಮಕ್ಕಳ ಆಸ್ಪತ್ರೆಯಾಗಿದೆ. ಆದ್ರೆ ಇಲ್ಲಿ ಇನ್ನು ಕೂಡ ಜಿಲ್ಲಾಸ್ಪತ್ರೆಯನ್ನ ನಡೆಸಲಾಗುತ್ತಿದೆ. ಜಿಲ್ಲಾಸ್ಪತ್ರೆಗೆ ಹೊಸ ಕಟ್ಟಡ ಆದರೂ ಸಹ ಹಳೆ ಆಸ್ಪತ್ರೆಯ ಹಳೆ ಕಟ್ಟಡದಲ್ಲೇ ಚಿಕಿತ್ಸೆ ನಡೆಯುತ್ತಿದೆ. ಅದರಲ್ಲೂ ಪ್ರಮುಖವಾಗಿ ಅಲ್ಟ್ರಾಸೌಂಡ್ ಹಾಗೂ ಸಿಟಿ ಸ್ಕ್ಯಾನ್ ಇಲ್ಲೇ ಮಾಡಲಾಗುತ್ತಿದೆ. ರೋಗಿಗಳಿಗೆ ವೈದ್ಯರು ಸ್ಕ್ಯಾನಿಂಗ್ ಮಾಡಿಸುವಂತೆ ಹೇಳಿದ್ರೆ, ರೋಗಿಗಳು ನೇರವಾಗಿ ನಗರದಿಂದ ಸುಮಾರು ಏಳು ಎಂಟು ಕಿ.ಮೀ ದೂರದಲ್ಲಿರುವ ಹೊಸ ಆಸ್ಪತ್ರೆಗೆ ಹೋಗಿ ಚೀಟಿ ಬರಿಸಿಕೊಂಡು ಬರಬೇಕು ಬಳಿಕವೇ ಇಲ್ಲಿ ಸ್ಕ್ಯಾನಿಂಗ್ ಮಾಡಲಾಗುತ್ತಿದೆ. ಅಲ್ಲಿಂದ ಇಲ್ಲಿಗೆ ಇಲ್ಲಿಂದ ಅಲ್ಲಿಗೆ ಅಲೆಯೋದೆ ರೋಗಿಗಳಿಗೆ ದೊಡ್ಡ ತಲೆ ನೋವಾಗಿದೆ. ಇಷ್ಟೆಲ್ಲ ಆದರೂ ಪರವಾಗಿಲ್ಲ. ಆದ್ರೆ ಇಲ್ಲಿರುವ ಸ್ಕ್ಯಾನಿಂಗ್ ಮಷೀನ್ ಗೆ ದಿನಕ್ಕೊಂದು ಸಮಸ್ಯೆ ಆಗ್ತಾಯಿದೆ.



ಕಳೆದ ಒಂದು ವಾರದ ಹಿಂದೆ ಮೂರು ದಿನಗಳ ಸ್ಕ್ಯಾನಿಂಗ್ ಮಾಡುವ ಸಿಬ್ಬಂದಿ ರಜೆ ಹೋಗಿದ್ರು, ಅಂತ ಹೇಳಲಾಗುತ್ತಿದೆ. ಹೀಗಾಗಿ ಸ್ಕ್ಯಾನಿಂಗ್ ಮಾಡಿಸಿಕೊಳ್ಳುವ ರೋಗಿಗಳ ಸಂಖ್ಯೆ ಹೆಚ್ಚಾಗಿದೆ. ಯಾಕೆಂದ್ರೆ, ಸಮಾನ್ಯವಾಗಿ ಎಲ್ಲವೂ ಚೆನ್ನಾಗಿ ಇರುವಾಗ್ಲೇ ಇಲ್ಲಿಗೆ ಬರುವ ರೋಗಿಗಳು ಮೊದಲ ದಿನ ಚೀಟಿ ಬರೆಸಿಕೊಂಡು ಹೋಗಬೇಕು ಮಾರನೇ ದಿನ ಬಂದು ಸ್ಕ್ಯಾನ್ ಮಾಡಿಸಿಕೊಂಡು ಹೋಗಬೇಕು. ಆದ್ರೆ ಮೂರು ದಿನಗಳ ಕಾಲ ಬಂದ್ ಆಗಿದ್ದಕ್ಕೆ ಜನ ಬಂದು ಬಂದು ವಾಪಸ್ ಹೋಗಿದ್ದಾರೆ. ಪುಟ 2

### ನಕಲಿ ದಾಖಲೆ ಸೃಷ್ಟಿಸಿ ಸ್ಥಿರಾಸ್ತಿ ಮಾರಾಟ ಜಾಲ ಪತ್ತೆ

## 18 ಆರೋಪಿಗಳ ಬಂಧನ

**ವಿಜಯಪುರ:** ಇತ್ತೀಚಿನ ದಿನಗಳಲ್ಲಿ ವಿಜಯಪುರ ಜಿಲ್ಲೆಯಲ್ಲಿ ನಕಲಿ ದಾಖಲೆಗಳನ್ನು ಸೃಷ್ಟಿ ನಾವೇ ಮಾಲೀಕರು ಎಂದು ನಂಬಿಸಿ ಸ್ಥಿರಾಸ್ತಿ ಮಾರಾಟ ಮಾಡಿರುವ ಪ್ರಕರಣಗಳು ಬೆಳಕಿಗೆ ಬಂದಿದ್ದವು. ಈ ಪೈಕಿ ಕೆಲ ಪ್ರಕರಣಗಳಲ್ಲಿ ಮೋಸ ಹೋದವರು ವಿವಿಧ ಪೊಲೀಸ್ ಠಾಣೆಗಳಲ್ಲಿ ದೂರು ದಾಖಲು ಮಾಡಿದ್ದರು. ಇವೆಲ್ಲ ಪ್ರಕರಣಗಳನ್ನು ಗಂಭೀರವಾಗಿ ಪರಿಗಣನೆಗೆ ತೆಗೆದುಕೊಂಡ ಎಸ್ಪಿ ಋಷಿಕೇಷ ಸೋನೆವಣೆ ವಿಶೇಷ ತಂಡಗಳನ್ನು ರಚನೆ ಮಾಡಿ, ಆರೋಪಿಗಳ ಹೆಡೆಮುರಿ ಕಟ್ಟಲು ಮುಂದಾಗಿದ್ದರು. ಪರಿಣಾಮ, ನಕಲಿ ದಾಖಲೆಗಳನ್ನು ಸೃಷ್ಟಿ ಮಾಡಿ ಬೇರೆಯವರ ಸ್ಥಿರಾಸ್ತಿಗಳನ್ನು ತಮ್ಮದೇ ಎಂದು ಮಾರಾಟ ಮಾಡುತ್ತಿದ್ದ 18 ಜನ ಆರೋಪಿಗಳನ್ನು ಅರೆಸ್ಟ್ ಮಾಡಿದ್ದಾರೆ.



ವಿಜಯಪುರ ಜಿಲ್ಲೆಯ ತಿಕೋಟಾ ತಾಲೂಕಿನ ತೋರವಿ ಗ್ರಾಮದ ಸರ್ವೇ ನಂಬರ್ 344/ಬ/1 ಪೈಕಿ 1 ಎಕರೆ 36 ಗುಂಟೆ ಜಮೀನನ್ನು ಕ್ರಯ ಪತ್ರ ಮಾಡಿಕೊಟ್ಟು ಖರೀದಿ ಮಾಡುವವರ ಬಳಿ ಮುಂಗಡವಾಗಿ 25 ಲಕ್ಷ ರೂಪಾಯಿ ಪಡೆದು ಮೋಸ ಮಾಡಿದ್ದರು. ಈ ಹಿನ್ನೆಲೆಯಲ್ಲಿ ತನಿಖೆ ನಡೆಸಿದ ಪೊಲೀಸರು ಚಾಂದಪೀರ ತಂದೆ ಮಹಮ್ಮದಗೌಸ್ ರಮಲಿ, ಮಹಿಬೂಬಸಾಬ ಹಡಗಲಿ, ಸಿಕಂದರ ಗಂಗನಳ್ಳಿ, ದತ್ತು ತಿಕ್ಕುಂಡಿ, ವಾಗೇಶ ಪೋಳ ಎಂಬುವವರನ್ನು ಬಂಧಿಸಿದ್ದಾರೆ. ಪುಟ 2

### ಕಳ್ಳತನ ಮಾಡುವುದನ್ನು ಕಂಡಳೆಂದು ಬಾಲಕಿಯನ್ನು

## ಸುಟ್ಟು ಹಾಕಿದ!

**ಗುರುಗ್ರಾಮ:** ಪಕ್ಕದ ಮನೆಯಲ್ಲಿ ಕಳ್ಳತನ ಮಾಡಲು ಹೋಗಿ ಬಾಲಕನೊಬ್ಬ 9 ವರ್ಷದ ಬಾಲಕಿ ಎದುರು ಸಿಕ್ಕಿಬಿದ್ದಿದ್ದ. ಆಕೆಗೆ ಯಾರ ಬಳಿಯೂ ಈ ವಿಚಾರವನ್ನು ಹೇಳದಂತೆ ಮನವಿ ಮಾಡಿದ್ದ ಆದರೆ ಆಕೆ ಒಪ್ಪದ ಕಾರಣ ಆಕೆಯನ್ನು ಕೊಂದು, ದೇಹವನ್ನು ಸುಟ್ಟು ಹಾಕಿರುವ ಈ ಘಟನೆ ಗುರುಗ್ರಾಮದಲ್ಲಿ ನಡೆದಿದೆ, ಇಲ್ಲಿನ ಹೌಸಿಂಗ್ ಸೊಸೈಟಿಯಲ್ಲಿರುವ ತನ್ನ ಫ್ಲಾಟ್‌ನಲ್ಲಿ ಚಿನ್ನಾಭರಣಗಳನ್ನು ಕದಿಯುತ್ತಿರುವುದನ್ನು ಆಕೆ ನೋಡಿದ್ದಳು.




ಆ ಕಾರಣಕ್ಕೆ ಕತ್ತು ಹಿಸುಕಿ ಆಕೆಯನ್ನು ಕೊಲೆ ಮಾಡಿ, ದೇಹಕ್ಕೆ ಬೆಂಕಿ ಹಚ್ಚಿದ್ದಾನೆ. ಮೃತ ಬಾಲಕಿಯ ಕುಟುಂಬದವರು ಹಾಗೂ ಆರೋಪಿ ಯುವಕನ ಕುಟುಂಬದವರು ಆಪ್ತರಾಗಿದ್ದರು. ಮೃತ ಬಾಲಕಿ 4ನೇ ತರಗತಿ ವಿದ್ಯಾರ್ಥಿನಿಯಾಗಿದ್ದಳು, ಸೋಮವಾರ ಬೆಳಗ್ಗೆ 11 ಗಂಟೆ ಸುಮಾರಿಗೆ ಆತ ಆಕೆಯ ಮನೆಗೆ ಬಂದು ಕಳ್ಳತನ ಮಾಡಿದ್ದ. ಆತ 10ನೇ ತರಗತಿ ವಿದ್ಯಾರ್ಥಿ. ಪುಟ 2

## ರೈತರ ಆರ್ಥಿಕ ಸ್ಥಿತಿಯನ್ನು ಮೇಲೆತ್ತಬೇಕು

**ರಾಮನಾಥಪುರ:** ರೈತರು ಅರ್ಥಿಕ ಸ್ಥಿತಿಗೆ ಬರಲು ತೋಟಗಾರಿಕೆಯಲ್ಲಿ ಸಿಗುವ ಸವಲತ್ತುಗಳನ್ನು ಬಳಸಿಕೊಂಡು ಆರ್ಥಿಕವಾಗಿ ಮುಂದೆ ಬರಲು ಸಾಧ್ಯವಾಗಲಿದೆ ಎಂದು ಮಾಜಿ ಸಚಿವ ಹಾಗೂ ಶಾಸಕ ಎ. ಮಂಜು ತಿಳಿಸಿದರು. ರಾಮನಾಥಪುರ ಹತ್ತಿರವಿರುವ ದೊಡ್ಡಮಗ್ಗೆ ಹೋಬಳಿ ವ್ಯಾಪ್ತಿಯ ತೆಂಗು ಬೆಳೆಗಾರರಿಗೆ ಉಚಿತ ಸಸ್ಯ ಪೋಷಕಾಂಶಗಳು ಮತ್ತು ಸಸ್ಯ ಸಂರಕ್ಷಣಾ ಪರಿಕರಗಳನ್ನು ಬೆಳವಾಡಿ ಮತ್ತು ಅಗ್ರಹಾರ ಗ್ರಾಮದಲ್ಲಿ ನಡೆದ ಕಾರ್ಯಕ್ರಮ ಉದ್ಘಾಟಿಸಿ ಹಾಗೂ ಉಚಿತ ಪೋಷಕಾಂಶ ಮತ್ತು ಸಸ್ಯ ಸಂರಕ್ಷಣಾ ಪರಿಕರಗಳನ್ನು ರೈತರಿಗೆ ವಿತರಿಸಿ ಮಾತನಾಡಿದ ಅವರು ಸದರಿಯೋಜನೆಯನ್ನು ದೊಡ್ಡಮಗ್ಗೆ ಹೋಬಳಿಯ ವ್ಯಾಪ್ತಿಗೆ ತರಲು ಮುಖ್ಯ ಉದ್ದೇಶವೆಂದರೆ, ಇದನ್ನ ರೈತರು ಹೆಚ್ಚಿನದಾಗಿಮಳೆಯಾಶ್ರಿತವಾಗಿ ಬೆಳೆಯನ್ನು ಬೆಳೆಯುತ್ತಿದ್ದ, ರೈತರ ಆರ್ಥಿಕ ಸ್ಥಿತಿಯನ್ನು ಮೇಲೆತ್ತಬೇಕು ಎನ್ನುವ ಸಂದೇಶದಿಂದ ತರಲಾಗಿದೆ. ರೈತರ ಆದಾಯ ದ್ವಿಗುಣ ಗೊಳ್ಳಬೇಕಿದೆ, ರೈತರ ಸದರಿ ಯೋಜನೆಯ ಉದ್ದೇಶವನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ತಿಳಿಸಿದರು. ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಶ್ರೀ ರಾಜೇಶ್ ಅವರು ಮಾತನಾಡಿ, ತೆಂಗು ಅಭಿವೃದ್ಧಿ ಮಂಡಳಿಯ ಸಯೋಗದೊಂದಿಗೆ ಸದರಿ ಯೋಜನೆಯನ್ನು ತೋಟಗಾರಿಕೆ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿದ್ದು, ತೆಂಗಿನ ಬೆಳೆಗಾರರಿಗೆ ತೆಂಗು ತೋಟಗಳ ಫಸಲನ್ನು ಹೆಚ್ಚಿಸುವ ನಿಟ್ಟಿನಲ್ಲಿ ಶಿ ಪೋಷಕಾಂಶಗಳು ಮತ್ತು ಸಸ್ಯ ಸಂರಕ್ಷಣಾ ಪರಿಕರಗಳನ್ನು ರೈತರಿಗೆ ಉಚಿತವಾಗಿ ವಿತರಿಸುತ್ತಿದ್ದು, ಈ ಯೋಜನೆಯ ಲಾಭವನ್ನು ದೊಡ್ಡಮಗ್ಗೆ ಹೋಬಳಿಯ 440ಕ್ಕೂ ಹೆಚ್ಚು ತೆಂಗು ಬೆಳೆಗಾರರು ಪಡಿಯಲ್ಲಿದ್ದಾರೆ ಎಂದು ಮಾಹಿತಿ ತಿಳಿಸಿದರು. ಮಾಜಿ ತಾಲೂಕು ಪಂಚಾಯಿತಿ ಸದಸ್ಯರುಗಳಾದ ಬೆಳವಾಡಿ ನಿಂಗೇಗೌಡರು, ಪರಸನಹಳ್ಳಿ ಪುಟ್ಟರಾಜರವರು, ದೊಡ್ಡಮಗ್ಗೆ ಮಂಜುನಾಥ್ ರವರು, ನಿಲುವಾಗಿಲು ಗೋವಿಂದೇಗೌಡರು, ರೈತ ಸಂಘದ ಯೋಗಣ್ಣ ರವರು, ಕಗತಿಪರ ರೈತರದ ಕಮಲಮ್ಮ ರವರು, ಗ್ರಾಮ ಪಂಚಾಯತಿಯ ಚುನಾಯಿತ ಪ್ರತಿನಿಧಿಗಳು, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಮೋಹನ್ ರವರು, ಕಂದಾಯ ನಿರೀಕ್ಷಕ ರಾಘವೇಂದ್ರರವರು, ಫಲಾನುಭವಿಗಳು ಹಾಗೂ ರೈತರು ಇದ್ದರು.

## ಮಾದರಿ ಯೋಜನೆ ಕಡ್ಡಾಯ

**ರಾಮನಗರ:** ರಾಜ್ಯ ವಕ್ಫ್ ಮಂಡಳಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಯವರ ನಿರ್ದೇಶನದಂತೆ ವಕ್ಫ್ ಕಾಯ್ದೆ 1995 ಹಾಗೂ ಕರ್ನಾಟಕ ವಕ್ಫ್ ನಿಯಮಗಳು 2017ರ ಪ್ರಾವಧಾನಗಳ ಮೇರೆಗೆ ರಾಜ್ಯದ ಎಲ್ಲಾ ವಕ್ಫ್ ಸಂಸ್ಥೆಗಳು ತಮ್ಮ ಸಂಸ್ಥೆಗಳ ಆಡಳಿತಕ್ಕಾಗಿ ಆಡಳಿತದ ಮಾದರಿ ಯೋಜನೆ ಕಡ್ಡಾಯವಾಗಿರುತ್ತದೆ. ಈಗಾಗಲೇ ರಾಮನಗರ ಜಿಲ್ಲೆಯ ಹಲವು ವಕ್ಫ್ ಸಂಸ್ಥೆಗಳು ತಮ್ಮ ಸಂಸ್ಥೆಯ ಆಡಳಿತಕ್ಕಾಗಿ ಅನುಮೋದನೆಯನ್ನು ಪಡೆದಿದ್ದು, ಇನ್ನು ಹಲವು ವಕ್ಫ್ ಸಂಸ್ಥೆಗಳು ಈ ಆಡಳಿತ ಮಾದರಿ ಯೋಜನೆಯನ್ನು ಅಳವಡಿಸಿಕೊಳ್ಳುವುದು ಬಾಕಿ ಇರುತ್ತದೆ. ಅಂತಹ ವಕ್ಫ್ ಸಂಸ್ಥೆಗಳು ಕಾಯ್ದೆ ಹಾಗೂ ನಿಯಮಗಳ ಪ್ರವಾಧಾನಗಳ ಅಡಿಯಲ್ಲಿ ಮಾಡಲ್ ಸ್ಕೀಮ್ ಆಫ್ ಅಡ್ಮಿನಿಸ್ಟ್ರೇಷನ್ (ಫಾರಂ 42) ಅನ್ನು ತಮ್ಮ ಸಂಸ್ಥೆಗಳ ಆಡಳಿತಕ್ಕಾಗಿ ಅಳವಡಿಸಿಕೊಂಡು ಬೆಂಗಳೂರಿನ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಅನುಮೋದನೆ ಪಡೆಯಲು ವಕ್ಫ್ ಅಧಿಕಾರಿಗಳು, ನಗರದ ಕಂದಾಯ ಭವನ ಕಟ್ಟಡದಲ್ಲಿರುವ ಜಿಲ್ಲಾ ವಕ್ಫ್ ಕಚೇರಿಗೆ ಸೂಕ್ತ ದಾಖಲೆಗಳೊಂದಿಗೆ 15 ದಿನಗಳೊಳಗೆ ತಪ್ಪದೇ ಪ್ರಸ್ತಾವನೆ ಸಲ್ಲಿಸಬೇಕು. ಪ್ರಸ್ತಾವನೆ ಸಲ್ಲಿಸಿದ ವಕ್ಫ್ ಸಂಸ್ಥೆಗಳ ಪದಾಧಿಕಾರಿಗಳ ವಿರುದ್ಧ ವಕ್ಫ್ ಕಾಯ್ದೆ ಹಾಗೂ ನಿಯಮಗಳ ಅಡಿಯಲ್ಲಿ ಸೂಕ್ತ ಕ್ರಮ ಕೈಗೊಳ್ಳಲು ಕರ್ನಾಟಕ ರಾಜ್ಯ ವಕ್ಫ್ ಮಂಡಳಿಗೆ ವರದಿ ಮಾಡಲಾಗುವುದು ಎಂದು ಜಿಲ್ಲಾ ವಕ್ಫ್ ಕಚೇರಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಾರ್ತಾಧಿಕಾರಿ ಸುರೇಶಗೆ ಕನ್ನಡಿಗರ ಕಲ್ಯಾಣ ಅಭಿವೃದ್ಧಿ ಸಂಘ ಸನ್ಮಾನ

**ಬೀದರ:** ಇತ್ತಿಚೆಗೆ ಕಲಬುರಗಿ ವಿಶ್ವವಿದ್ಯಾಲಯದಿಂದ ಡಾಕ್ಟರೇಟ್ ಪದವಿ ಪಡೆದ ನಿಮಿತ್ಯವಾಗಿ ಬೀದರ ಜಿಲ್ಲೆಯ ಸಹಾಯಕ ನಿರ್ದೇಶಕರಾದ ಜಿ. ಸುರೇಶ. ಅವರಿಗೆ ಹೈದರಾಬಾದ್ ಕನ್ನಡಿಗರ ಕಲ್ಯಾಣ ಅಭಿವೃದ್ಧಿ ಸಂಘದ ಅಧ್ಯಕ್ಷ ಹಾಗೂ ಪತ್ರಕರ್ತರ ಧರ್ಮೇಂದ್ರ ಪೂಜಾರಿ ಬಗ್ದೂರಿಯವರು ಸನ್ಮಾನ ಮಾಡಿ ಗೌರವಿಸಿದರು. ಇಂದು ವಾರ್ತಾ ಇಲಾಖೆಯ ಕಛೇರಿ ಯಲ್ಲಿ, ಭೇಟಿಯಾಗಿ ಮಾತುಕತೆ ನಡೆಸಿದರು. ಸ್ಥಳೀಯ ಪತ್ರಿಕೆ ಬಗ್ಗೆ ಹೆಮ್ಮೆ ಕೆಲಸ ಮಾಡಿರುವುದನ್ನು ಗುರುತಿಸಿದರು. ತಮ್ಮ ಪ್ರಬಂಧ ಮಂಡಿಸಿ ಹೆಮ್ಮೆಯ ಕೆಲಸ ಮಾಡಿದಿರಿ. ಹೀಗೆ ನಿಮ್ಮ ಸೇವೆ ನಿರಂತರವಾಗಿ ಸಾಗಲಿ ಎಂದು ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಶ್ರೀನಿವಾಸ ತೇಲಂಗ. ಭೀಮರಾವ ಬೀದರಕರ ಉಪಸ್ಥಿತರಿದ್ದರು.

## ಹಾಸ್ಟೆಲ್ ಪ್ರವೇಶಕ್ಕೆ ಅರ್ಜಿ ಆಹ್ವಾನ

**ರಾಮನಗರ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ (ಪಿ.ಯು.ಸಿ ಮತ್ತು ಪಿಯು ಸಮಾನಾಂತರ ವಿದ್ಯಾರ್ಥಿಗಳಿಗೆ ಮಾತ್ರ) ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪ.ಜಾ/ಪ.ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2024-25 ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ 0850770004 ಮತ್ತು 8050770005 ನ್ನು ಸಂಪರ್ಕಿಸಬಹುದು.

## ಮಹಿಳೆ ಪತ್ತೆಗೆ ಮನವಿ

**ರಾಮನಗರ:** ಕುಂಬಾಪುರ ಕಾಲೋನಿಯ ನಿವಾಸಿ ನವ್ಯಾ (22 ವರ್ಷ) ಎಂಬ ಮಹಿಳೆ ಕಾಣೆಯಾಗಿದ್ದಾರೆ ಎಂದು ಪೊಲೀಸ್ ಠಾಣೆಗೆ ದೂರು ದಾಖಲಾಗಿದೆ. ಚಹರೆಯ ವಿವರ:- ಕೋಲುಮುಖ, ಎಣ್ಣೆಗೆಂಪು ಮೈಬಣ್ಣ, ಸಾಧಾರಣ ಮೈಕಟ್ಟು, ಇಡಗೈನ ಮುಂಗೈ ಬಳಿ ಅವ್ವ ಎಂದು ಕನ್ನಡದಲ್ಲಿ ಹಚ್ಚೆ ಗುರುತು ಇರುತ್ತದೆ. ಇವರು ಕಾಣೆಯಾಗುವಾಗ ನೀಲಿ ಹಾಗೂ ಹೂ ಚಿತ್ರವಿದ್ದ ಟಾಪ್ ಹಾಗೂ ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾರೆ. ಇವರು ಕಂಡು ಬಂದರೆ ಆರಕ್ಷಕ ನಿರೀಕ್ಷಕರು, ರಾಮನಗರ (ಗ್ರಾ) ಪೊಲೀಸ್ ಠಾಣೆ ಸಂಪರ್ಕಿಸುವಂತೆ ಕೋರಲಾಗಿದೆ.

# ಜಿಲ್ಲಾಸ್ಪತ್ರೆ ಶಸ್ತ್ರಚಿಕಿತ್ಸಕ ಡಾ.ವಿಜಯಕುಮಾರ್‌ಗೆ ಬೀಳ್ಕೊಡುಗೆ



**ಕೋಲಾರ:** ಜಿಲ್ಲಾ ಎಸ್‌ಎನ್‌ಆರ್ ಆಸ್ಪತ್ರೆಯ ಜಿಲ್ಲಾ ಶಸ್ತ್ರ ಚಿಕಿತ್ಸಕರಾಗಿ ಸೇವೆ ಸಲ್ಲಿಸುತ್ತಿದ್ದ ಡಾ.ಎಸ್.ಎನ್. ವಿಜಯಕುಮಾರ್ ಅವರನ್ನು ಆರೋಗ್ಯ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಆತ್ಮೀಯವಾಗಿ ಸನ್ಮಾನಿಸಿ ಬೀಳ್ಕೊಟ್ಟರು.

ಈ ಸಂದರ್ಭದಲ್ಲಿ ಮಾತನಾಡಿದ ವಿಜಯಕುಮಾರ್, ತಮ್ಮ ಸೇವಾ ಅವಧಿಯಲ್ಲಿ ಉತ್ತಮ ಕೆಲಸ ಮಾಡಿದ ಆತ್ಮತೃಪ್ತಿ ಇದೆ, ನನ್ನ ಕರ್ತವ್ಯ ನಿರ್ವಹಣೆಗೆ ಜಿಲ್ಲಾಧಿಕಾರಿಗಳು, ಜಿಪಂ ಸಿಇಒ ಸೇರಿದಂತೆ ಆರೋಗ್ಯ ಇಲಾಖೆಯ ಅಧಿಕಾರಿಗಳು ವೈದ್ಯರು, ಶುಶ್ರೂಷಕಿಯರು,ಸಿಬ್ಬಂದಿ ಎಲ್ಲರೂ ಸಹಕಾರ ನೀಡಿದ್ದು ಅವರಿಗೆ ಧನ್ಯವಾದ ಸಲ್ಲಿಸುವುದಾಗಿ ತಿಳಿಸಿದರು.

ಆರೋಗ್ಯ ಇಲಾಖೆ ಪ್ರಯೋಗಶಾಲಾ ತಾಂತ್ರಿಕರ ಸಂಘದ ನಾರಾಯಣಪ್ಪ ಮಾತನಾಡಿ, ಆರೋಗ್ಯ ಇಲಾಖೆ ಹಾಗೂ ಜಿಲ್ಲಾಸ್ಪತ್ರೆಯಲ್ಲಿ ವಿವಿಧಹುದ್ದೆಗಳಲ್ಲಿ ಸೇವೆ ಸಲ್ಲಿಸಿ ಇತರರಿಗೆ ಮಾದರಿಯಾಗಿದ್ದ ವಿಜಯಕುಮಾರ್ ಅವರ ನಿವೃತ್ತಿ ಜೀವನ ಸುಖಕರವಾಗಿರಲಿ ಎಂದು ಹಾರೈಸಿದರು.

ಜಿಲ್ಲಾ ಆಸ್ಪತ್ರೆಯಲ್ಲಿ ಜಿಲ್ಲಾ ಶಸ್ತ್ರ ಚಿಕಿತ್ಸಕರು ಹಾಗು ಪ್ಯಾರಾ ಮೆಡಿಕಲ್ ಕಾಲೇಜಿನ ಪ್ರಾಂಶು ಪಾಲರ ಹುದ್ದೆಯಲ್ಲಿ ಕಾರ್ಯ ನಿರ್ವಹಿಸಿ ಇದೀಗ ನಿವೃತ್ತರಾಗಿರುವ ವಿಜಯಕುಮಾರ್ ಅವರು, ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲ್ಲೂಕಿನ ಶೆಟ್ಟಿಹಳ್ಳಿಯಲ್ಲಿ ವಿಮಲಮ್ಮ ನಾರಾಯಣನ್ ದಂಪತಿಗಳ ಮಗನಾಗಿ ಜನಿಸಿದ ಇವರು ತನ್ನ 1981ರಿಂದ 1987 ವೈದ್ಯಕೀಯ ಪದವಿ ಬಳ್ಳಾರಿ ಸರ್ಕಾರಿ ಮೆಡಿಕಲ್ ಕಾಲೇಜಿನಲ್ಲಿ ಮುಗಿಸಿ ನಂತರ ಮೈಸೂರು

ವೈದ್ಯಕೀಯ ಕಾಲೇಜಿನಲ್ಲಿ ಮೂಳೆ ತಜ್ಞರಾಗಿ ಸ್ನಾತಕೋತ್ತರ ಪದವಿ ಮುಗಿಸಿದ್ದಾರೆ ಎಂದು ತಿಳಿಸಿದರು.

1991ರಲ್ಲಿ ಮುಳಬಾಗಿಲು ಸಾರ್ವಜನಿಕ ಆಸ್ಪತ್ರೆಯಲ್ಲಿ ಮೊದಲು ವೈದ್ಯರಾಗಿ ಸೇರಿ ಅಲ್ಲಿ ಕರ್ತವ್ಯ ನಿರ್ವಹಿಸಿ, ನಂತರ ಅಲ್ಲಿಂದ ತಾಯಲೂರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕೆಲಸ, ನಂತರ ಮುಳಬಾಗಿಲು ಸಾರ್ವಜನಿಕ ಆಸ್ಪತ್ರೆಯಲ್ಲಿ ಕರ್ತವ್ಯ ನಿರ್ವಹಿಸಿದ್ದು, ಇದಾದ ನಂತರ ಯಲ್ದೂರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕೆಲಸ ಮಾಡಿದ್ದಾರೆ.

ಇದಾದ ನಂತರ ಜಿಲ್ಲಾ ಕ್ಷಯರೋಗ ನಿವಾರಣಾ ಅಧಿಕಾರಿಯಾಗಿ ಸೇವೆ ಸಲ್ಲಿಸಿದ ವಿಜಯಕುಮಾರ್, ಕೀಲು ಮತ್ತು ಮೂಳೆ ತಜ್ಞರಾಗಿ ಜಿಲ್ಲಾ ಆಸ್ಪತ್ರೆಯಲ್ಲಿ ಕರ್ತವ್ಯ ಮುಗಿಸಿ ನಂತರ ಜಿಲ್ಲಾ ಆರೋಗ್ಯಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾಗಿ ಸೇವೆ ಸಲ್ಲಿಸಿದರು.ನಂತರ 2022ರಲ್ಲಿ ಜಿಲ್ಲಾಆಸ್ಪತ್ರೆ ಜಿಲ್ಲಾ ಶಸ್ತ್ರ ಚಿಕಿತ್ಸಕರು ಹಾಗು ಪ್ಯಾರಾ ಮೆಡಿಕಲ್ ಕಾಲೇಜಿನ ಪ್ರಾಂಶು ಪಾಲರ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸಿ ಇದೀಗ ಸೇವೆಯಿಂದ ನಿವೃತ್ತರಾಗಿದ್ದಾರೆ.

ಸದಾ ಜನಸ್ನೇಹಿಯಾಗಿ ರೋಗಿಗಳೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದ ಡಾ.ವಿಜಯಕುಮಾರ್ ಅವರ ನಿವೃತ್ತಿ ಜೀವನ ಸುಖಕರವಾಗಿರಲಿ, ನಿವೃತ್ತಿ ನಂತರವೂ ರೋಗಿಗಳಿಗೆ ಅವರ ಸೇವೆ ಸಿಗಲಿ ಎಂದು ಪ್ರಾರ್ಥಿಸಲಾಯಿತು.

ಈ ಸಂದರ್ಭದಲ್ಲಿ ಆಸ್ಪತ್ರೆಯ ವೈದ್ಯರು, ಸಿಬ್ಬಂದಿ, ಶುಶ್ರೂಷಕಿಯರು ಸೇರಿದಂತೆ ಹಲವಾರು ಮಂದಿ ಹಾಜರಿದ್ದರು.



## ಗಮನ ಸೆಳೆದ ಕೆಂಪೇಗೌಡರ ಪಾತ್ರದಾರಿ ಕೊತ್ನಳ್ಳಿಮಹೇಶ್

**ಬೇಲೂರಿನಲ್ಲಿ ನಡೆದ ನಾಡಪ್ರಭು ಕೆಂಪೇಗೌಡರ ಜಯಂತಿಯಲ್ಲಿ ಎಲ್ಲರ ಗಮನ ಸೆಳೆದ ಕೆಂಪೇಗೌಡರ ವೇಷಧಾರಿ ಪತ್ರಕರ್ತ ಕೊತ್ನಳ್ಳಿಮಹೇಶಗೌಡ. ಮೆರವಣಿಗೆಯಲ್ಲಿ ಶ್ರೀಶಂಭುನಾಥಸ್ವಾಮೀಜಿ ರಥದ ಬಳಿ ಕಸಾಪ ಜಿಲ್ಲಾಧ್ಯಕ್ಷ ಪ್ರೋ.ಡಾ.ಮಲ್ಲೇಶಗೌಡ ಇದ್ದಾರೆ.**

### ಶ್ರೀಶಂಭುನಾಥಸ್ವಾಮೀಜಿ ಅಭಿಮತ

# ಮನಸ್ಸನ್ನು ಹಿಡಿತದಲ್ಲಿಟ್ಟುಕೊಳ್ಳಿ



**ಬೇಲೂರು:** ಮನಸ್ಸನ್ನು ಹಿಡಿತದಲ್ಲಿ ಇಟ್ಟುಕೊಳ್ಳದೆ ಹರಿಬಿಟ್ಟರೆ ಅನರ್ಥ ಘಟನೆಗಳಿಗೆ ಕಾರಣವಾಗಲಿದೆ ಎಂದು ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀಶಂಭುನಾಥಮಹಾಸ್ವಾಮಿ ಹೇಳಿದರು.

ಇಲ್ಲಿ ಕೆಂಪೇಗೌಡ ಸೇವಾಸಮಿತಿ, ತಾ.ಒಕ್ಕಲಿಗರ ಸಂಘ, ತಾ.ಒಕ್ಕಲಿಗರ ಯುವ ವೇದಿಕೆ, ಕೆಂಪೇಗೌಡರ ಯುವ ವೇದಿಕೆ, ಮಹಿಳಾ ಒಕ್ಕಲಿಗರ ಸಂಘದಿಂದ ಏರ್ಪಡಿಸಿದ್ದ ಕೆಂಪೇಗೌಡ ಜಯಂತಿಯನ್ನು ಉದ್ಘಾಟಿಸಿ ಆಶೀರ್ವಚನ ನೀಡಿ ಮಾತನಾಡಿ, ಮನಸ್ಸು ಹಾವು ಇದ್ದಂತೆ ದೇಹ ಬುಟ್ಟಿ ಇದ್ದಂತೆ ಇದನ್ನು ಅರ್ಥ ಮಾಡಿಕೊಳ್ಳಬೇಕಿದೆ. ನನ್ನ ಉಸಿರುವ ಇರುವ ತನಕ ನಿಮ್ಮ ಉಸಿರಿನ ಜೊತೆಯಲ್ಲೆ ಇರುತ್ತೇನೆಂದು ಸಮುದಾಯಕ್ಕೆ ಭರವಸೆ ನೀಡಿದ ಸ್ವಾಮೀಜಿ, ಕೆಂಪೇಗೌಡರು ಸೇರಿದಂತೆ ಧಾರ್ಶನಿಕ ವ್ಯಕ್ತಿಗಳು ಜಾತಿ, ಧರ್ಮ ಪ್ರತ್ಯೇಕಿಸದೆ ಮನುಕುಲಕ್ಕೆ ಒಳ್ಳೆಯದಾಗಲಿ ಎಂದು ಬೀಜ ಬಿತ್ತಿ ಹೋಗಿದ್ದಾರೆ. ಅಂತಹವ ನೆನಪು ನಮ್ಮ ಕರ್ತವ್ಯವಾಗಿದೆ ಎಂದ ಸ್ವಾಮೀಜಿ, ಶ್ರೀಬಾಲಗಂಗಾಧರನಾಥ ಸ್ವಾಮೀಜಿ ಅವರ ಸಮಾಜಮುಖಿ ಕಾರ್ಯವನ್ನು ಸ್ಮರಿಸಿಕೊಂಡರು.

ಶಾಸಕ ಹೆಚ್.ಕೆ.ಸುರೇಶ್ ಮಾತನಾಡಿ, ಬೇಲೂರಿನಲ್ಲಿ ಎಲ್ಲಾ ಸಮುದಾಯದ ಜಯಂತಿಯನ್ನು ಎಲ್ಲರೂ ಒಡಗೂಡಿ ಆಚರಿಸುವ ಪದ್ಧತಿ ವಿಶೇಷವಾಗಿದೆ. ಭಾರತದಲ್ಲಿ ಕರ್ನಾಟಕದ ಸಂಸ್ಕಾರ, ಸಂಸ್ಕೃತಿಗೆ ವಿಶೇಷತೆ ಇದೆ. ಸದೃಢ ಸಮಾಜ ಕಟ್ಟುವಲ್ಲಿ ಬಸವಣ್ಣ, ಕೆಂಪೇಗೌಡರಂತ ಮಹಾನೀಯರು ಕೆಲಸ ಮಾಡಿದ್ದಾರೆ. ಸಮುದಾಯದ ಕೆಲಸ ಯಶಸ್ವಿಯಾಗಬೇಕಾದರೆ ಮಾತೆಯರ ಜವಾಬ್ದಾರಿ ಹೆಚ್ಚಿರುತ್ತದೆ. ಜಿಲ್ಲೆಯ ಮಣ್ಣಿನ ಮಗ ಹೆಚ್.ಡಿ.ದೇವೇಗೌಡರು ಪ್ರಧಾನಿ ಆಗಿದ್ದೂ ಒಂದು ಸಾಧನೆಯಾಗಿದ್ದು ಹೆಮ್ಮೆಯ ಸಂಗತಿ ಎಂದು ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲಾಧ್ಯಕ್ಷ ಪ್ರೋ. ಡಾ.ಮಲ್ಲೇಶಗೌಡ ಮಾತನಾಡಿ, ಜಾಗತಿಕ ಇತಿಹಾಸ ಸೇರಿದ ವಿಜಯನಗರ ಸಂಸ್ಥಾನಕ್ಕೆ ಕೆಂಪೇಗೌಡರು ಅತ್ಯಾಪ್ತರಾಗಿದ್ದರು. ವಿಜಯನಗರ ಅರಸರನ್ನು ಸಾಮಂತರಾಜರು ಕೈಬಿಟ್ಟರೂ ಕೆಂಪೇಗೌಡರು ಅವರೊಟ್ಟಿಗಿದ್ದವರು. ಕೆಂಪೇಗೌಡರ ಬದುಕಿನ ಇತಿಹಾಸ ಬೆಳಕಿಗೆ ತರುವ ಕೆಲಸ ಆಗಬೇಕಿದೆ. ರಣಬೈರೇಗೌಡರ ಪುತ್ರರಾದ ಕೆಂಪೇಗೌಡರು ಹಂಪೆಯ ಮಾದರಿಯಲ್ಲಿ 6 ಜನ ಸಹೋದರರೊಂದಿಗೆ ಬೆಂಗಳೂರು ನಿರ್ಮಾಣಕ್ಕೆ ಆಲೋಚಿಸಿದವರು. ಅಮೇರಿಕ ದೇಶದ ಅಧ್ಯಕ್ಷರು ಬೆಂಗಳೂರಿನ ವಿಜ್ಞಾನಿಗಳಂತವರು ನಮಗೆ ಬೇಕಿದೆ ಎನ್ನುವಷ್ಟರ ಮಟ್ಟಿಗೆ ನಾವಿಂದು ಬೆಳೆದಿದ್ದೇವೆ, ಆದರೆ ಕೆಂಪೇಗೌಡರ ಆಲೋಚನೆಯಂತೆ ಇದ್ದ ಬೆಂಗಳೂರಿನ ಕೆರೆಗಳನ್ನು ಅಭಿವೃದ್ಧಿ ಹೆಸರಿನಲ್ಲಿ ಕೆಂಪೇಗೌಡರ ಮೂಲ ಕಲ್ಪನೆಯನ್ನೇ ನುಂಗಿ ನೀರು ಕುಡಿದಿದ್ದೇವೆಂದು ಬೇಸರ ವ್ಯಕ್ತಪಡಿಸಿದರು. ಮಕ್ಕಳು ಸಂಸ್ಕಾರದಿಂದ ದೂರವಾಗುತ್ತಿದ್ದರೆ ಅದಕ್ಕೆ ತಾಯಂದಿರ ನಿರ್ಲಕ್ಷ್ಯ ಕಾರಣ ಎಂದು ಅಭಿಪ್ರಾಯಪಟ್ಟರು.

ಇದೆ ವೇಳೆ ಪ್ರಗತಿಪರ ರೈತರು, ರಾಷ್ಟ್ರೀಯ, ಅಂತರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿದ ಹಾಗೂ ವಿವಿಧ ತರಗತಿಗಳಲ್ಲಿ ಅತಿ ಹೆಚ್ಚು ಅಂಕಪಡೆದ ವಿದ್ಯಾರ್ಥಿ ಪೋಷಕರನ್ನು, ಸ್ವಾಮೀಜಿ, ಶಾಸಕರನ್ನು ಅಭಿನಂದಿಸಲಾಯಿತು. ಜಯಂತಿ ಅಂಗವಾಗಿ ಏರ್ಪಡಿಸಿದ್ದ ರಕ್ತದಾನ ಶಿಬಿರದಲ್ಲಿ 22 ಜನ ರಕ್ತದಾನ ಮಾಡಿದರು. ಶ್ರೀಬಾಲಗಂಗಾಧರನಾಥ್ ಭಾವಚಿತ್ರಕ್ಕೆಜ ಪುಷ್ಪಾರ್ಚನೆ ನೆರವೇರಿಸಲಾಯಿತು. ಪ್ರತಿ ವರ್ಷದಂತೆ ಈ ವರ್ಷವೂ ಪತ್ರಕರ್ತ ಮಹೇಶಗೌಡ ಅವರು ನಾಡಪ್ರಭು ಕೆಂಪೇಗೌಡರ ವೇಷಧಾರಿಯಾಗಿ ಎಲ್ಲರ ಗಮನ ಸೆಳೆದರು. ಬಿಜಿವಿಎಸ್ ಕಾಲೇಜು ವಿದ್ಯಾರ್ಥಿಗಳು ನೃತ್ಯ ಪ್ರದರ್ಶನ, ನಾಡಗೀತೆ ನಡೆಸಿಕೊಟ್ಟರು. ವಿಜಯಕುಮಾರ್, ರವಿಕುಮಾರ್ ಹಾಗೂ ಪುಟ್ಟಸ್ವಾಮಿಗೌಡ ನಿರೂಪಣೆ, ಆರ್.ಎಸ್. ಮಹೇಶ್ ಸ್ವಾಗತ ಮಾಡಿದರು.

# ಕೆಂಪೇಗೌಡರ ಜಯಂತಿ: ಕುಣಿದು ಹರ್ಷಿಸಿದ ಅಭಿಮಾನಿಗಳು

**ಬೇಲೂರು:** ಇಲ್ಲಿ ನಡೆದ ನಾಡಪ್ರಭು ಕೆಂಪೇಗೌಡರ ಜಯಂತಿ ಅಂಗವಾಗಿ ಪಟ್ಟಣದ ಯಗಚಿ ಸೇತುವೆ ಬಳಿಯಿಂದ ಶ್ರೀಶಂಭುನಾಥಸ್ವಾಮೀಜಿಯನ್ನು ಕೆಂಪೇಗೌಡರ ಭಾವಚಿತ್ರದೊಂದಿಗೆ ಮೆರವಣಿಗೆಯಲ್ಲಿ ಕರೆತರಲಾಯಿತು. ಯಗಚಿ ಸೇತುವೆ ಬಳಿ ಇರುವ ಶ್ರೀಬಾಲಗಂಗಾಧರನಾಥ ಸ್ವಾಮೀಜಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿದ ನಂತರ ವಿವಿಧ ಸಾಂಸ್ಕೃತಿಕ ತಂಡದೊಂದಿಗೆ ಹೊರಟ ಮೆರವಣಿಗೆಯಲ್ಲಿ ಬಸವೇಶ್ವರ ವೃತ್ತದಲ್ಲಿ ಬಸವೇಶ್ವರರು ಹಾಗೂ ಕೆಂಪೇಗೌಡರ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಯಿತು. ಮೆರವಣಿಗೆಯಲ್ಲಿ ಕುದುರೆಏರಿ ಕುಳಿತಿದ್ದ ನಾಡಪ್ರಭು ಕೆಂಪೇಗೌಡರ ಪಾತ್ರದಾರಿ ಕೊತ್ನಹಳ್ಳಿ ಮಹೇಶಗೌಡರು ಎಲ್ಲರ ಮೆಚ್ಚುಗೆ ಗಳಿಸಿದರು. ಮೆರವಣಿಗೆಯಲ್ಲಿ ಜಾತಿ, ಪಕ್ಷ ಬೇದವಿಲ್ಲದೆ ಪ್ರಮುಖರು ಭಾಗವಹಿಸಿ ಕುಣಿದು ಹರ್ಷ ವ್ಯಕ್ತಪಡಿಸಿದರು. ಮೆರವಣಿಗೆಯಲ್ಲಿ ಶಾಸಕ ಹೆಚ್.ಕೆ.ಸುರೇಶ್ ಒಕ್ಕಲಿಗ ಸಮುದಾಯದ ವಿವಿಧ ಘಟಕಗಳ ಅಧ್ಯಕ್ಷ, ಪದಾಧಿಕಾರಿಗಳು ಇತರರು ಇದ್ದರು.



## ವಿದ್ಯಾರ್ಥಿನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

**ರಾಮನಗರ:** ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪ.ಜಾ/ಪ.ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2024-25 ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಜುಲೈ 10ರೊಳಗೆ ಅರ್ಜಿ ಸಲ್ಲಿಸಬೇಕು. ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯ ಪ್ರವೇಶಕ್ಕಾಗಿ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ಹೆಚ್ಚಿನ ಮಾಹಿತಿಗೆ ದೂ.ಸಂಖ್ಯೆ: 0850770004 ಅಥವಾ 8050770005 ಅನ್ನು ಸಂಪರ್ಕಿಸುವಂತೆ ರಾಮನಗರ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೂವತ್ತು ದಿನಗಳ ಅಂತರದಲ್ಲಿ 2.24 ಕೋಟಿ ರೂ ಅಧಿಕ ಆದಾಯ ತಂದ ಮಹದೇಶ್ವರ ಬೆಟ್ಟ

**ಚಾಮರಾಜನಗರ :** ಮೂವತ್ತು ದಿನಗಳ ಅಂತರದಲ್ಲಿ ಎರಡು ಕೋಟಿ ಇಪ್ಪತ್ತನಾಲ್ಕು ಲಕ್ಷ ಮೂವತ್ತಾರು ಸಾವಿರದ ಮುನ್ನೂರು ಅರವತ್ಮೂರು ರೂಪಾಯಿಗಳ ಕಾಣಿಕೆ ಸಂಗ್ರಹದೊಂದಿಗೆ ಬೃಹತರ್ ಮೊತ್ತದ ಆದಾಯ ಬಂದಿರುವ ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಮಲೆ ಮಹದೇಶ್ವರ ಬೆಟ್ಟ ಶ್ರೀಮಂತ ದೇವಾಲಯದ ಸಾಗಿನೆಡೆಗೆ ಸಾಗಿದೆ.



ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಶ್ರೀ ಮಲೆ ಮಹದೇಶ್ವರ ಬೆಟ್ಟದ ಶ್ರೀ ಮಲೈ ಮಹದೇಶ್ವರ ಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದಲ್ಲಿ ಸಾಲೂರು ಬೃಹನ್ಮಠಾಧ್ಯಕ್ಷ ಶ್ರೀ ಶಾಂತಮಲ್ಲಿಕಾರ್ಜುನಸ್ವಾಮಿ ಗಳ ದಿವ್ಯಸಾನಿದ್ಯದಲ್ಲಿ, ಶ್ರೀ ಮಲೆ ಮಹದೇಶ್ವರ ಸ್ವಾಮಿ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ರಘು, ಎ. ಈ, ರವರ ನೇತೃತ್ವದಲ್ಲಿ ಹುಂಡಿ ಎಣಿಕೆ ಕಾರ್ಯ ನಡೆದಿದ್ದು, ಹುಂಡಿಯಲ್ಲಿ ಎರಡು ಕೋಟಿ ಇಪ್ಪತ್ತು ಲಕ್ಷದ ತೊಂಭತ್ತೇಳು ಸಾವಿರದ ಐನೂರ ಮೂವತ್ಮೂರು ರೂಗಳು ನಗದು ಹಾಗೂ ಇ-ಹುಂಡಿಯಲ್ಲಿ ಮೂರು ಲಕ್ಷದ ಮೂವತ್ತೆಂಟು ಸಾವಿರದ ಎಂಟು ನೂರು ಮೂವತ್ತು ರೂ ಸೇರಿ ಎರಡು ಕೋಟಿ ಇಪ್ಪತ್ತನಾಲ್ಕು ಲಕ್ಷ ಮೂವತ್ತಾರು ಸಾವಿರದ ಮುನ್ನೂರು ಅರವತ್ಮೂರು ರೂಪಾಯಿಗಳ ಕಾಣಿಕೆ ಸಂಗ್ರಹವಾಗಿದೆ.

ಕಾಣಿಕೆಯೊಂದಿಗೆ 106 ಗ್ರಾಂ. ಚಿನ್ನ , ಎರಡು ಕೆಜಿ ನೂರು ಗ್ರಾಂ ಬೆಳ್ಳಿ ಆಭರಣಗಳು ಹುಂಡಿಯಲ್ಲಿ ದೊರೆತಿದೆ. ಹಾಗೂ ಆರು ವಿದೇಶಿ ನೋಟುಗಳಲ್ಲಿ ಮೂರು ಡಾಲರ್, ಅರಬ್, ನೇಪಾಳ ಹಾಗೂ ಉಮೇನ್ ದೇಶದ ತಲಾ ಒಂದೊಂದು ನೋಟು ಸಂಗ್ರಹವಾಗಿದೆ. ಅದೂ ಅಲ್ಲದೆ ಎರಡು ಸಾವಿರ ಮುಖ ಬೆಲೆಯ 19 ನೋಟುಗಳು ಸಹ ಹುಂಡಿಯಲ್ಲಿ ಕಾಣಿಕೆಯಾಗಿ ಭಕ್ತರು ಹಾಕಿದ್ದಾರೆ.

ಹುಂಡಿ ಎಣಿಕೆ ಕಾರ್ಯದಲ್ಲಿ ಪ್ರಾಧಿಕಾರದ ಉಪ ಕಾರ್ಯದರ್ಶಿ ಚಂದ್ರಶೇಖರ.ಜಿ.ಎಲ್, ಚಾಮರಾಜನಗರ ಜಿಲ್ಲಾಡಳಿತ ಕಛೇರಿಯ ಕು. ಮಧುಶ್ರೀ ಹಾಗೂ ಪ್ರಾಧಿಕಾರದ ಸಿಬ್ಬಂದಿಗಳು, ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಹಾಗೂ ಬ್ಯಾಂಕ್ ಆಫ್ ಬರೋಡ ವ್ಯವಸ್ಥಾಪಕರು, ಸಿಬ್ಬಂದಿಗಳು ಹಾಜರಿದ್ದರು.

# ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ಅರ್ಜಿ

**ಚಾಮರಾಜನಗರ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಚಾಮರಾಜನಗರ ತಾಲೂಕಿನಲ್ಲಿ ನಿರ್ವಹಣೆಯಾಗುತ್ತಿರುವ ಮೆಟ್ರಿಕ್ ನಂತರದ ಬಾಲಕ ಹಾಗೂ ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ 2024-25ನೇ ಸಾಲಿಗೆ ಪ್ರವೇಶ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಪಿ.ಯು.ಸಿ ಮತ್ತು ಪಿ.ಯು.ಸಿ ಸಮಾನಾಂತರ ಕೋರ್ಸಿನಲ್ಲಿ ವ್ಯಾಸಾಂಗ ಮಾಡುತ್ತಿರುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಸೇರಿದ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಅರ್ಜಿ ಸಲ್ಲಿಸಬಹುದು. ಚಾಮರಾಜನಗರ ಪಟ್ಟಣದ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ, ವೃತ್ತಿಪರ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ, ಮರಿಯಾಲದಹುಂಡಿಯ ವೃತ್ತಿಪರ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ, ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ, ಸಾರ್ವಜನಿಕ ಮಾದರಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ, ಚಾಮರಾಜನಗರ ತಾಲೂಕಿನ ಕುದೇರಿನಲ್ಲಿರುವ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ, ಹರವೆಯಲ್ಲಿರುವ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ, ಹೊಸ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ಪಡೆಯಬಹುದು. ತಾಲ್ಲೂಕು ಮಟ್ಟದ ಆಯ್ಕೆ ಸಮಿತಿಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಉಚಿತ ಊಟ ಮತ್ತು ವಸತಿ ಹಾಗೂ ಇತರೆ ಸೌಲಭ್ಯಗಳನ್ನು ನೀಡಲಾಗುತ್ತದೆ. ವಿದ್ಯಾರ್ಥಿನಿಲಯಗಳು ಇರುವ ಸ್ಥಳಗಳ ಕಾಲೇಜುಗಳಿಂದ 5 ಕಿಲೋ ಮೀಟರ್‌ಗಿಂತ ದೂರದ ಸ್ಥಳಗಳಿಂದ ಬರುವ ವಿದ್ಯಾರ್ಥಿಗಳಿಗೆ ಮಾತ್ರ ಪ್ರವೇಶ ಕಲ್ಪಿಸಲಾಗುವುದು. ಪ್ರವರ್ಗ-1, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಸೇರಿದ ವಿದ್ಯಾರ್ಥಿ ಕುಟುಂಬದ ವಾರ್ಷಿಕ ಆದಾಯ ಮಿತಿ 2.5 ಲಕ್ಷ ರೂ ಹಾಗೂ ಪ್ರವರ್ಗ-2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ ವರ್ಗಗಳಿಗೆ ಕುಟುಂಬದ ವಾರ್ಷಿಕ ಆದಾಯ ಮಿತಿ 1 ಲಕ್ಷ ರೂ ಒಳಗಿರಬೇಕು. ವಿದ್ಯಾರ್ಥಿನಿಲಯದಲ್ಲಿ ಪ್ರವರ್ಗವಾರು ತೆರವಾದ ಸ್ಥಾನಗಳಿಗೆ ಮಾತ್ರ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ವಿದ್ಯಾರ್ಥಿಗಳು ವೆಬ್‌ಸೈಟ್ https://shp.karnataka.gov.in/bcwd ಸಂಪರ್ಕಿಸಿ ಜುಲೈ 20ರೊಳಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ವಿವರಗಳಿಗೆ ಚಾಮರಾಜನಗರ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಸಂಪರ್ಕಿಸುವಂತೆ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗೈರಾದವರಿಗೆ ಶೋಕಾಸ್ ನೋಟಿಸ್ ಜಾರಿ

**ರಾಮನಗರ:** ಆರೋಗ್ಯ ಕ್ಷೇತ್ರಕ್ಕೆ ಸಂಬಂಧಿಸಿದ ಸಭೆಗಳಲ್ಲಿ ಗಂಭೀರ ವಿಷಯಗಳು ಚರ್ಚೆಯಾಗುವ ಕಾರಣ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಇಂದು ನಡೆದ ತ್ರೈಮಾಸಿಕ ಜಿಲ್ಲಾ ಸಮನ್ವಯ ಸಮಿತಿ ಸಭೆಗೆ ಗೈರು ಹಾಜರಾದ ಅಧಿಕಾರಿಗಳಿಗೆ ಶೋಕಸ್ ನೋಟಿಸ್ ನೀಡಿ, ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಶಿವಾನಂದಮೂರ್ತಿ ಅವರು ಎಚ್ಚರಿಕೆ ನೀಡಿದರು.

ಅವರು ಜೂ.28ರ ಶುಕ್ರವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿರುವ ಅಪರ ಜಿಲ್ಲಾಧಿಕಾರಿಗಳ ಕೊಠಡಿಯಲ್ಲಿ ಆಯೋಜಿಸಲಾಗಿದ್ದ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ತ್ರೈಮಾಸಿಕ ಸಮನ್ವಯ ಸಮಿತಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ತಹಶೀಲ್ದಾರರು, ತಾಲ್ಲೂಕು ಪಂಚಾಯತ್ ಕಾರ್ಯ ನಿರ್ವಣಾಧಿಕಾರಿಗಳು, ಅಬಕಾರಿ ಇಲಾಖೆ, ಕೆ.ಎಸ್. ಆರ್.ಟಿ.ಸಿ, ನಗರ-ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರು, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಆಹಾರ ಮತ್ತು ಗುಣಮಟ್ಟದ ಅಂಕಿತಾ ಅಧಿಕಾರಿ, ಕಾನೂನು ಮಾಪನ ಇಲಾಖೆ, ಕಾರ್ಮಿಕ ಇಲಾಖೆ, ಶಿಶು ಅಭಿವೃದ್ಧಿ, ಪರಿಸರ ಮಾಲಿನ್ಯ ಅಧಿಕಾರಿ, ಪ್ರವಾಸೋದ್ಯಮ ಇಲಾಖೆ, ಸಮಾಜ ಕಲ್ಯಾಣ ಇಲಾಖೆಯ ಮುಖ್ಯಸ್ಥರು ಸಭೆಗೆ ಹಾಜರಾಗಬೇಕು ಆದರೆ ಈ ಅಧಿಕಾರಿಗಳು ಗೈರು ಹಾಜರಾದ ಕಾರಣ ಸಭೆಯಲ್ಲಿ ಗಂಭೀರ ಚರ್ಚೆಗೆ ಅವಕಾಶವಾಗಿರುವುದಿಲ್ಲ ಆದಕಾರಣ ಇವರೆಲ್ಲರಿಗೂ ತಮ್ಮ ಸಹಿಯುಳ್ಳ ಶೋಕಾಸ್ ನೋಟಿಸ್ ಜಾರಿ ಮಾಡುವಂತೆ ಸಂಬಂಧಿಸಿದವರಿಗೆ ಸೂಚನೆ ನೀಡಿದರು.

ಈ ಸಭೆಯನ್ನು ಇದೇ ಜುಲೈ 8ಕ್ಕೆ ಮುಂದೂಡಿದ್ದು, ಅಷ್ಟರೊಳಗೆ ತಾಲ್ಲೂಕು ಮಟ್ಟದಲ್ಲಿ ಮಾಡಬೇಕಾದ ಸಭೆಗಳನ್ನು ಪೂರ್ಣಗೊಳಿಸುವಂತೆ ಆರೋಗ್ಯ ಅಧಿಕಾರಿಗಳಿಗೆ ತಿಳಿಸಿದರು.

ಹಿಂದಿನ ಜಿಲ್ಲಾ ಸಮನ್ವಯ ಸಮಿತಿ ಅನುಪಾಲನ ವರದಿ ನೀಡುವುದು ಹಾಗೂ ಶಾಲಾ ವಲಯದ 100 ಮೀಟರ್ ವ್ಯಾಪ್ತಿಯಲ್ಲಿ ತಂಬಾಕು ಮುಕ್ತ, ಮಾರಾಟ ನಿಷೇಧಕ್ಕೆ ಸಂಬಂಧಿಸಿದಂತೆ ಬಾಕಿ ಉಳಿದ ಪ್ರಕರಣಗಳಿಗೆ 2024-25 ನೇ ಸಾಲಿನ ಕೋಟ್ಪಾ ಕಾರ್ಯಚರಣೆ ನೀಡುವ ಗುರಿಯನ್ನು ಅನುಷ್ಠಾನಗೊಳಿಸಲು ತಾಲ್ಲೂಕು ತನಿಖಾಧಿಕಾರಿಗಳ ಕಾರ್ಯಚರಣೆ ನಡೆಸಿರುವ ಬಗ್ಗೆ ಅಗತ್ಯ ವರದಿ ನೀಡುವಂತೆ ಸಭೆಯಲ್ಲಿ ತಿಳಿಸಿದರು.

ಆರೋಗ್ಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳನ್ನು ಚುನಾವಣೆಯ ಯಾವುದೇ ಕೆಲಸಕಾರ್ಯಗಳಿಗೆ ನಿಯೋಜನೆ ಮಾಡುವುದಿಲ್ಲ ಆದಕಾರಣ ಅವರು ಕಾಲಕಾಲಕ್ಕೆ ತಮ್ಮ ವ್ಯಾಪ್ತಿಯಲ್ಲಿ ನಿರ್ವಹಿಸಬೇಕಾದ ಜವಾಬ್ದಾರಿಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸುವಂತೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಡಾ. ನಿರಂಜನ್, ಜೆ. ಆರ್.ಸಿ.ಎಚ್. ಅಧಿಕಾರಿ ಡಾ.ರಾಜು, ಜಿಲ್ಲಾ ಸರ್ವೇಕ್ಷಣಾಧಿಕಾರಿ ಅಧಿಕಾರಿ ಕಿರಣ್ ಶಂಕರ್, ಚನ್ನಪಟ್ಟಣದ ತಾಲ್ಲೂಕು ಅರೋಗ್ಯ ಆಧಿಕಾರಿ ಡಾ. ರಾಜು ಕೆ. ಮಾಗಡಿಯ ಆರೋಗ್ಯ ಆಧಿಕಾರಿ ಡಾ. ರಾಮಚಂದ್ರ.ಟಿ ಹಾಗೂ ಇತರರು ಉಪಸ್ಥಿತರಿದ್ದರು.

### ಎರಡು ಅಧಿವೇಶನದ ಪರೀಕ್ಷೆಗೆ 520 ಮಂದಿ ಗೈರು-ಕೇಂದ್ರಗಳಿಗೆ ಡಿಸಿ ಭೇಟಿ

# ಕೋಲಾರ ಜಿಲ್ಲೆಯ 14 ಕೇಂದ್ರಗಳಲ್ಲಿ ಶಿಕ್ಷಕರ ಅರ್ಹತಾ ಪರೀಕ್ಷೆ

**ಕೋಲಾರ:** ನಗರದ 14 ಕೇಂದ್ರಗಳಲ್ಲಿ ಭಾನುವಾರ ಯಾವುದೇ ಗೊಂದಲವಿಲ್ಲದೇ ಸುಗಮವಾಗಿ ನಡೆದ ಶಿಕ್ಷಕರ ಅರ್ಹತಾ ಪರೀಕ್ಷೆಯ ಎರಡು ಅಧಿವೇಶನಗಳಿಗೆ ಒಟ್ಟು 520 ಮಂದಿ ಗೈರಾಗಿದ್ದು ಕೇಂದ್ರಗಳಿಗೆ ಜಿಲ್ಲಾಧಿಕಾರಿ ಅಕ್ರಂ ಪಾಷಾ ಭೇಟಿ ನೀಡಿ ಪರಿಶೀಲಿಸಿದರು.

ನಗರದ ಎಲ್ಲಾ 14 ಕೇಂದ್ರಗಳಲ್ಲೂ ಪರೀಕ್ಷೆ ನಡೆದಿದ್ದು, ಬೆಳಗ್ಗೆ ನಡೆದ ಮೊದಲ ಅಧಿವೇಶನದ ಪರೀಕ್ಷೆಯ ಪತ್ರಿಕೆ-1ಕ್ಕೆ ನೋಂದಾಯಿಸಿದ್ದ 2141 ಮಂದಿ ಪೈಕಿ 1891 ಮಂದಿ ಹಾಜರಾಗಿ 251 ಮಂದಿ ಗೈರಾಗಿದ್ದಾರೆ ಎಂದು ಡಿಡಿಪಿಐ ಕೃಷ್ಣಮೂರ್ತಿ ತಿಳಿಸಿದ್ದಾರೆ.

ಮಧ್ಯಾಹ್ನ ನಡೆದ 2ನೇ ಅಧಿವೇಶನದ ಪತ್ರಿಕೆ-2ಕ್ಕೆ ನೋಂದಾಯಿಸಿದ್ದ 3394 ಮಂದಿ ಪೈಕಿ 3125 ಮಂದಿ ಹಾಜರಾಗಿದ್ದು, 269 ಮಂದಿ ಗೈರಾಗುವ ಮೂಲಕ ಎರಡೂ ಅಧಿವೇಶನಗಳಿಗೂ ಸೇರಿ ಒಟ್ಟು 520 ಅಭ್ಯರ್ಥಿಗಳು ಗೈರಾದಂತಾಗಿದೆ.

ಕೈಕೊಟ್ಟ ವಿದ್ಯುತ್ ಜನರೇಟರ್



ಸೌಲಭ್ಯ: ಜಿಲ್ಲಾಧಿಕಾರಿಗಳು ಹಾಗೂ ಜಿಪಂ ಸಿಇಒ ಮಾರ್ಗದರ್ಶನದಲ್ಲಿ ಯಾವುದೇ ಅವ್ಯವಹಾರ,ಗೊಂದಲಗಳಿಗೆ ಅವಕಾಶವಿಲ್ಲದಂತೆ ನಡೆದ ಪರೀಕ್ಷೆಯಲ್ಲಿ ಎಲ್ಲಾ ಕೇಂದ್ರಗಳಲ್ಲೂ ಸಿಸಿ ಕ್ಯಾಮರಾ ವ್ಯವಸ್ಥೆ ಮಾಡಲಾಗಿತ್ತು ಮತ್ತು ವೆಬ್ ಕಾಸ್ಟಿಂಗ್‌ಗೂ ಕ್ರಮವಹಿಸಿದ್ದು, ಇಂದು ತುರ್ತು ದುರಸ್ಥಿ ಕಾರ್ಯದಿಂದಾಗಿ ಕರೆಂಟ್ ಕೈಕೊಟ್ಟ ಕಾರಣ ಕೇಂದ್ರಗಳಲ್ಲಿ ಜನರೇಟರ್ ವ್ಯವಸ್ಥೆ ಕಲ್ಪಿಸಲಾಗಿತ್ತು. ಕೋಲಾರ ನಗರದ ಒಟ್ಟು 14 ಕೇಂದ್ರಗಳಲ್ಲಿ ಪರೀಕ್ಷೆ ನಡೆಯುತ್ತಿದ್ದು, ಬೆಳಗಿನ ಅಧಿವೇಶನ 9-30ರಿಂದ 12ರವರೆಗೂ ಪತ್ರಿಕೆ-1ರ ಪರೀಕ್ಷೆ 9 ಕೇಂದ್ರಗಳಲ್ಲಿ ಹಾಗೂ ಮಧ್ಯಾಹ್ನ 2 ರಿಂದ 4-30 ರವರೆಗೂ ಪತ್ರಿಕೆ-2ರ ಪರೀಕ್ಷೆ 14 ಕೇಂದ್ರಗಳಲ್ಲಿ ನಡೆಯಿತು.

## 144ನೇ ಸೆಕ್ಷನ್ ನಿಷೇದಾಜ್ಞೆ ಜಾರಿ

**ಯಾವುದೇ ಸಮಸ್ಯೆ ಎದುರಾಗದಂತೆ ಪರೀಕ್ಷಾ ಕೇಂದ್ರಗಳ ಸುತ್ತ 200 ಮೀ.ವ್ಯಾಪ್ತಿಯಲ್ಲಿ 144 ನೇ ಸೆಕ್ಷನ್ ಅನ್ವಯ ನಿಷೇದಾಜ್ಞೆ ಜಾರಿ ಮಾಡಲಗಿತ್ತು. ಪರೀಕ್ಷೆ ನಡೆಯುವ ಸಂದರ್ಭದಲ್ಲಿ ಈ 200 ಮೀ ವ್ಯಾಪ್ತಿಯಲ್ಲಿನ ಎಲ್ಲಾ ಜೆರಾಕ್ಸ್ ಅಂಗಡಿಗಳನ್ನು ಬೆಳಗ್ಗೆ 8-30 ರಿಂದ ಸಂಜೆ 4-30 ರವರೆಗೂ ಮುಚ್ಚಿಸಿದ್ದು, 14 ಪರೀಕ್ಷಾ ಕೇಂದ್ರಗಳಿಗೂ ಪೊಲೀಸ್ ಬಂದೋಬಸ್ತ್ ಒದಗಿಸಲಾಗಿತ್ತು. ಗೌಪ್ಯ ಸಾಮಗ್ರಿಗಳನ್ನು ಖಜಾನೆಯಲ್ಲಿ ಸಂರಕ್ಷಿಸಲು ಜಿಲ್ಲಾಧಿಕಾರಿಗಳೇ ರಚಿಸಿದ್ದ ತ್ರಿಸದಸ್ಯ ಸಮಿತಿ ಪರೀಕ್ಷಾ ಕೇಂದ್ರಗಳಿಗೆ ಪ್ರಶ್ನೆಪತ್ರಿಕೆಯನ್ನು ಪೊಲೀಸ್ ಬಂದೋಬಸ್ತ್‌ನಲ್ಲಿ ತಲುಪಿಸುವ ಕಾರ್ಯ ನಡೆಸಿದ್ದು, ಸಮಿತಿಯಲ್ಲಿ ಅಪರ ಜಿಲ್ಲಾಧಿಕಾರಿ ಎಸ್.ಎಂ.ಮಂಗಳಾ, ಜಿಲ್ಲಾ ಖಜಾನಾಧಿಕಾರಿ ಮಹೇಂದ್ರ, ಡಿಡಿಪಿಐ ಕೃಷ್ಣಮೂರ್ತಿ ಇದ್ದರು. ಪರೀಕ್ಷಾ ಉಸ್ತುವಾರಿಯನ್ನು ಡಿಡಿಪಿಐ,ಪರೀಕ್ಷಾ ನೋಡಲ್ ಅಧಿಕಾರಿ ಕೃಷ್ಣಪ್ಪ ವಹಿಸಿದ್ದು, ಡಯಟ್ ಪ್ರಾಂಶುಪಾಲ ವೀಕ್ಷಕರಾಗಿ ಕಾರ್ಯನಿರ್ವಹಿಸಿದರು. ಒಟ್ಟಾರೆ ಪರೀಕ್ಷೆ ಸುಗಮವಾಗಿ ನಡೆದಿದ್ದು, ಇದಕ್ಕೆ ಕಾರಣರಾದ ಜಿಲ್ಲಾಧಿಕಾರಿಗಳು, ಜಿಪಂ ಸಿಇಒ, ಎಲ್ಲಾ ಕೇಂದ್ರಗಳ ಮುಖ್ಯ ಅಧೀಕ್ಷಕರು, ಸಿಬ್ಬಂದಿಗೆ ಡಿಡಿಪಿಐ ಕೃಷ್ಣಮೂರ್ತಿ ಧನ್ಯವಾದ ಸಲ್ಲಿಸಿದ್ದಾರೆ.**



**ಕಾರ ಹಬ್ಬ** ತಿಪಟೂರು ತಾಲೂಕಿನ ದಸರಿಘಟ್ಟದ ಚೌಡೇಶ್ವರಿ ದೇವಾಲಯದಲ್ಲಿ ಕಾರ ಹಬ್ಬದ ಪ್ರಯುಕ್ತ ಚೌಡೇಶ್ವರಿ ದೇವಿಗೆ ವಿಶೇಷ ಪೂಜೆ ಸಲ್ಲಿಸಿ ಉತ್ಸವವನ್ನು ನೆರವೇರಿಸಲಾಯಿತು. ಮಠದ ಚಂದ್ರಶೇಖರನಾಥ ಸ್ವಾಮೀಜಿ, ಪೂಜೆ ಸಲ್ಲಿಸಿದರು.

# ಡಾ.ಬಿ.ಸಿ.ರಾಯ್ ಆದರ್ಶ ಬೆಳೆಸಿಕೊಳ್ಳಬೇಕು

**ತುಮಕೂರು:** ವೈದ್ಯಕೀಯ ಕ್ಷೇತ್ರದಲ್ಲಿ ಅಪಾರ ಸಾಧನೆ ಮಾಡಿ ಭಾರತರತ್ನ ಪ್ರಶಸ್ತಿ ಪಡೆದ ಡಾ.ಭಿದಾನ್ ಚಂದ್ರರಾಯ್ ಅವರನ್ನು ಇಂದಿನ ವೈದ್ಯರು ಆದರ್ಶವಾಗಿಟ್ಟುಕೊಂಡು ಸೇವೆ ಮಾಡಬೇಕು, ಉತ್ತಮ ಆರೋಗ್ಯ ಸೇವೆಗಳ ಜನಸಾಮಾನ್ಯರಿಗೆ ದೊರಕುವಂತೆ ಸೇವೆ ನಿರ್ವಹಿಸಬೇಕು. ಭಾರತದಲ್ಲಿ ರಾಷ್ಟ್ರೀಯ ವೈದ್ಯರ ದಿನವನ್ನು ಪ್ರತಿ ವರ್ಷ ಜುಲೈ 1 ರಂದು ಹುಟ್ಟಿದ ದಿನ ಮತ್ತು ಮರಣ ಹೊಂದಿದ ದಿನಾಂಕವನ್ನು ಆಚರಿಸಲಾಗುತ್ತದೆ. ಸಾರ್ವಜನಿಕ ಆರೋಗ್ಯ ತುಂಬಾ ಬೆಳೆಯ ಬೇಕಿದೆ. ಇತ್ತೀಚಿನ ದಿನಗಳಲ್ಲಿ ವೈದ್ಯಕೀಯ ಶಿಕ್ಷಣ ಅದ್ಭುತವಾಗಿದೆ ಎಂದು ಕರ್ನಾಟಕದ ಮಾಜಿ ಉಪಕುಲಪತಿಗಳ ವೇದಿಕೆ (ಎಫ್.ವಿ.ಸಿ.ಕೆ) ಬೆಂಗಳೂರಿನ ಅಧ್ಯಕ್ಷರಾದ ಡಾ.ಎಸ್.ಚಂದ್ರಶೇಖರ್ ಶೆಟ್ಟಿರವರು ತಿಳಿಸಿದರು.

ನಗರದ ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಆಸ್ಪತ್ರೆಯ ವತಿಯಿಂದ ಜುಲೈ 1 ರಂದು ಸೋಮವಾರ ಬೆಳಿಗ್ಗೆ 11 ಗಂಟೆಗೆ ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯದ ಆವರಣದಲ್ಲಿ ಅಡಿಟೋರಿಯಂ ಸಭಾಂಗಣದಲ್ಲಿ ರಾಷ್ಟ್ರೀಯ ವೈದ್ಯರ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ ಹಿರಿಯರಾದ ಡಾ.ಬಿ.ಸಿ.ರಾಯ್‌ರವರು ಹಾಕಿಕೊಟ್ಟ ಮಾರ್ಗದರ್ಶನ, ಜೀವನ ಶೈಲಿ, ಸಮಾಜದ ರಾಜಕೀಯವಾಗಿ ಮತ್ತು ಆರೋಗ್ಯ ಕ್ಷೇತ್ರದಲ್ಲಿ ನೀಡಿದ ಗಣನೀಯ ಸೇವೆಗಳನ್ನು ಸ್ಮರಿಸುವುದು ಅದೇ ದಾರಿಯಲ್ಲಿ ನಮ್ಮ ವೈದ್ಯರು ಮತ್ತು ವೈದ್ಯಕೇತರ ಸಿಬ್ಬಂದಿಗಳು ಕೆಲಸ ನಿರ್ವಹಿಸುವುದು ಹೆಚ್ಚು ಸೂಕ್ತವಾಗಿರುತ್ತದೆ.



ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶ್ರೀದೇವಿ ವೈದ್ಯಕೀಯ ನಿರ್ದೇಶಕರಾದ ಡಾ. ರಮಣ್ ಎಂ. ಹುಲಿನಾಯ್ಕರ್‌ರವರು ಮಾತನಾಡುತ್ತಾ ಪ್ರತಿ ವರ್ಷವೂ ಭಾರತ ಸರ್ಕಾರ ಡಾ.ಬಿ.ಸಿ.ರಾಯ್ ರವರ ಹೆಸರಿನಲ್ಲಿ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ. ಡಾ.ಬಿ.ಸಿ.ರಾಯ್ ರವರ ಬದುಕು ಮತ್ತು ಅವರು ಅನುಸರಿಸಿದ ಮಾರ್ಗಗಳು ವೈದ್ಯರಿಗೆ ದಾರಿದೀಪವಾಗಬೇಕು, ಇಂತಹ ನಿಸ್ವಾರ್ಥ ಸಾಧಕರು ಹಾಕಿಕೊಟ್ಟ ಮಾರ್ಗಗಳನ್ನು ನಾವುಗಳೆಲ್ಲ ನಡೆಯುವುದೇ ಡಾ.ಬಿ.ಸಿ.ರಾಯ್‌ರವರ ಅವರಂತಹ ಮಹಾಚೇತನ ನಾವು ಸಲ್ಲಿಸುವ ಅತ್ಯುತ್ತಮ ಗೌರವಿಸಬೇಕು ಎಂದು ತಿಳಿಸಿದರು.

# ಅತಿಥಿ ಉಪನ್ಯಾಸಕ ಹುದ್ದೆಗಳಿಗೆ ಅರ್ಜಿ ಆಹ್ವಾನ

**ಮೈಸೂರು:** ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ ಮೈಸೂರು ಹಾಗೂ ಡಾ. ಗಂಗೂಬಾಯಿ ಹಾನಗಲ್ ಹುಬ್ಬಳ್ಳಿ ಕೇಂದ್ರದಲ್ಲಿ ಎಂ.ಪಿ.ಎ ಬ್ಯಾಚುಲರ್ ಆಫ್ ಪರ್ಫಾರ್ಮಿಂಗ್ ಆರ್ಟ್ಸ್, ಸ್ನಾತಕೋತ್ತರ ಪದವಿ ಮಾಸ್ಟರ್ ಆಫ್ ಆರ್ಟ್ಸ್ (ಒಕಂ) ವಿಭಾಗಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಯು.ಜಿ.ಸಿ ನಿಯಮಾವಳಿಗಳ ಅನ್ವಯ ಅರ್ಹತೆ ಹೊಂದಿರುವವರು ನೃತ್ಯ, ಭರತನಾಟ್ಯ ಕಥಕ್, ಹಿಂದೂಸ್ಥಾನಿ, ಮತ್ತು ಕರ್ನಾಟಕ ಸಂಗೀತ, ನಾಟಕ, ವೀಣೆ. ಮೃದಂಗ, ತಬಲ, ಕನ್ನಡ, ಸಂಸ್ಕೃತ ಮತ್ತು ವಿಷಯಗಳಿಗೆ ಸಂಬಂಧಿಸಿದಂತೆ ನೆಟ್/ಕೆ-ಸೆಟ್ ಉತ್ತೀರ್ಣರಾಗಿರಬೇಕು.

ಭರ್ತಿ ಮಾಡಿದ ಅರ್ಜಿಗಳನ್ನು ಜುಲೈ 15 ರೊಳಗೆ ಸಲ್ಲಿಸಬಹುದಾಗಿದ್ದು, ವಿಶ್ವವಿದ್ಯಾಲಯದ ಅಧೀಕೃತ ವೆಬ್ಸೈಟ್ https://musicuniversity.ac.in ನಲ್ಲಿ ಪಡೆಯಬಹುದು.

ಅರ್ಜಿ ಹಾಗೂ ಇನ್ನಿತರ ವಿವರಗಳನ್ನು ವಿಶ್ವವಿದ್ಯಾಲಯದ ವೆಬ್ ಸೈಟ್ ಮೂಲಕ ಡೌನ್ ಲೋಡ್ ಮಾಡಿಕೊಂಡು ಅರ್ಜಿಯನ್ನು ಸಲ್ಲಿಸಬಹುದು. ಭರ್ತಿ ಮಾಡಿದ ಅರ್ಜಿಗಳೊಂದಿಗೆ ಸಾಮಾನ್ಯ ವರ್ಗ-ರೂ.500 ಹಾಗೂ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1 (ಪ್ರಮಾಣ ಪತ್ರದೊಂದಿಗೆ,) ಅಭ್ಯರ್ಥಿಗಳು ರೂ.250 ಗಳನ್ನು ವಿಶ್ವವಿದ್ಯಾಲಯವು ಮೈಸೂರಿನ ಕೃಷ್ಣಮೂರ್ತಿ ಪುರಂ ಶಾಖೆಯ ಸ್ಟೇಟ್ ಬ್ಯಾಂಕ್ ಆಪ್ ಇಂಡಿಯಾದಲ್ಲಿ ಹಣಕಾಸು ಅಧಿಕಾರಿ ಇವರ ಪದನಾಮವನ್ನು ಹೊಂದಿರುವ ಉಳಿತಾಯ ಖಾತೆ ಸಂಖ್ಯೆ:64097891316 (IFSC CODE:SBIN0040056) ಚಲನ್ ಅಥವಾ ಯಾವುದೆ ರಾಷ್ಟ್ರೀಕೃತ ಬ್ಯಾಂಕುಗಳಿಂದ ಮೈಸೂರಿನ ಕೆ.ಎಸ್.ಜಿ.ಹೆಚ್ ಸಂಗೀತ ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಹಣಕಾಸು ಅಧಿಕಾರಿಗಳ ಹೆಸರಿನಲ್ಲಿ ಮೇಲಿನ ಬ್ಯಾಂಕಿಗೆ ಸಂದಾಯವಾಗುವಂತೆ ಡಿ.ಡಿ ಯನ್ನು ಪಡೆದು ಲಗತ್ತಿಸಬಹುದಾಗಿದೆ. ಅರ್ಹ ಅಭ್ಯರ್ಥಿಗಳು ತಮ್ಮ ಎಲ್ಲಾ ಶೈಕ್ಷಣಿಕ ಅರ್ಹತೆ, ಅನುಭವದ ವಿವರಗಳು ಮತ್ತು ದೃಢೀಕೃತ ದಾಖಲೆಗಳೊಂದಿಗೆ ನಿಗದಿತ ಅವಧಿಯೊಳಗೆ ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಕಲೆಗಳ ವಿಶ್ವವಿದ್ಯಾಲಯದ ಕುಲಸಚಿವರಿಗೆ ಅರ್ಜಿಗಳನ್ನು ಕಳುಹಿಸಬೇಕು. ಹೆಚ್ಚಿನ ಮಾಹಿತಿಗಾಗಿ ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಕಲೆಗಳ ವಿಶ್ವವಿದ್ಯಾಲಯದ ದೂ.ಸಂ: 0821-2332703 ಅನ್ನು ಸಂಪರ್ಕಿಸಬಹುದು ಎಂದು ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಕಲೆಗಳ ವಿಶ್ವವಿದ್ಯಾಲಯದ ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಾಸ್ಟೆಲ್‌ಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಮಂಡ್ಯ:** ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ (ಪಿಯುಸಿ ಮತ್ತು ಪಿಯು ಸಮನಾಂತರ ಕೋರ್ಸಿನ ವಿದ್ಯಾರ್ಥಿಗಳಿಗೆ) ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪ/ಜಾ/ಪ.ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2024-25ನೇ ಸಾಲಿಗೆ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ವಿದ್ಯಾರ್ಥಿಗಳು ಜುಲೈ 20 ರೊಳಗೆ ಅರ್ಜಿಯನ್ನು https://shp.karnataka.gov.in/bcwd ವೆಬ್ ಸೈಟ್ ಮೂಲಕ ಸಲ್ಲಿಸತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 8050770004 ಮತ್ತು 8050770005 ನ್ನು ಸಂಪರ್ಕಿಸಬಹುದು.

### ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ್ ಸೂಚನೆ

# ರೈತರ ಕೆಲಸಗಳಿಗೆ ಆದ್ಯತೆ ನೀಡಿ

**ಬೆಂಗಳೂರು ಗ್ರಾಮಾಂತರ:** ರೈತರಿಗೆ ಸಂಬಂಧಿಸಿದ ಕಂದಾಯ ಇಲಾಖೆಯ ಕೆಲಸ ಕಾರ್ಯಗಳಿಗೆ ಪ್ರಥಮ ಆದ್ಯತೆಯನ್ನು ನೀಡಿ, ಶೀಘ್ರವಾಗಿ ಬಗೆಹರಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ಎನ್. ಶಿವಶಂಕರ್ ಅವರು ಹೇಳಿದರು.

ದೇವನಹಳ್ಳಿ ತಾಲ್ಲೂಕಿನ ಬೀರಸಂದ್ರ, ಗ್ರಾಮದ ಜಿಲ್ಲಾಡಳಿತ ಭವನದಲ್ಲಿರುವ ಸಮ್ಮೇಳನ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ಕಂದಾಯ ಇಲಾಖಾ ನೌಕರರ ಸಂಘ, ಕರ್ನಾಟಕ ರಾಜ್ಯ ಸರ್ಕಾರಿ ಗ್ರಾಮ ಆಡಳಿತ ಅಧಿಕಾರಿಗಳ ಸಂಘ ಮತ್ತು ಕರ್ನಾಟಕ ರಾಜ್ಯ ಕಂದಾಯ ಇಲಾಖಾ ಗ್ರಾಮ ಸಹಾಯಕ ಸಂಘದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ, 2024 ನೇ ಸಾಲಿನ ಕಂದಾಯ ದಿನಾಚರಣೆ ಮತ್ತು ಕಂದಾಯ ಕಾರ್ಯಾಗಾರ ಕಾರ್ಯಕ್ರಮವನ್ನು ಉದ್ಘಾಟಿಸಿ, ಅವರು ಮಾತನಾಡಿದರು.

ಕಂದಾಯ ಇಲಾಖೆಯೂ ಎಲ್ಲ ಇಲಾಖೆಗಳ ಮಾತೃ ಆಗಿ ಕೆಲಸವನ್ನು ನಿರ್ವಹಣೆ ಮಾಡುತ್ತಿದೆ. ಜಿಲ್ಲೆಯ ಕಂದಾಯ ಇಲಾಖೆಯ ಪ್ರಗತಿಗೆ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಉತ್ತಮ ರೀತಿಯಲ್ಲಿ ಕಾರ್ಯ ನಿರ್ವಹಣೆ ಮಾಡುತ್ತಿದ್ದಿರಿ. ತಾವುಗಳು ಕಛೇರಿ ಕೆಲಸದ ಜತೆಯಲ್ಲಿ ತಮ್ಮ ಆರೋಗ್ಯದ ಕಡೆಗೂ ಹೆಚ್ಚಿನ ಗಮನ ವಹಿಸಿ, ಆಗಾಗ್ಗೆ ಆರೋಗ್ಯ ತಪಾಸಣೆಯನ್ನು ಮಾಡಿಸಿಕೊಳ್ಳಬೇಕೆಂದು ಸಲಹೆ ನೀಡಿದರು.

ಕಂದಾಯ ಅಧಿಕಾರಿಗಳು ಅಧಿಕಾರದಲ್ಲಿ ಇದ್ದೇನೆ ಅಂತಾ ಅಧಿಕಾರ ಚಲಾಯಿಸುವುದು ಬೇಡ.



ಜನರಿಗೆ ಅಗತ್ಯ ಸೇವೆಯನ್ನು ಸಕಾಲದಲ್ಲಿ ನೀಡುವ ಮೂಲಕ ಸರ್ಕಾರಿ ಕೆಲಸದಲ್ಲಿದ್ದೇನೆ ಎನ್ನುವ ತೃಪ್ತಿ ಪಡಬೇಕು. ನಿಮ್ಮ ಸಮಸ್ಯೆ ಹಾಗೂ ಕುಂದುಕೊರತೆಗಳ ಮನವಿಯನ್ನು ಸರ್ಕಾರದ ಗಮನಕ್ಕೆ ತರುತ್ತೇನೆ ಈಗಾಗಲೇ ಗ್ರಾಮ ಲೆಕ್ಕಾಧಿಕಾರಿಗಳ ಕೆಲಸಕ್ಕೆ ಅಗತ್ಯ ಸವಲತ್ತುಗಳನ್ನು ವಿತರಿಸಲು ಸರ್ಕಾರ ಮಟ್ಟದಲ್ಲಿ ಚರ್ಚೆಯಾಗಿದೆ ಎಂದರು.

ಈ ಸಂದರ್ಭದಲ್ಲಿ ಕಂದಾಯ ಇಲಾಖೆಯ ನೌಕರರ ಸಂಘದ ಜಿಲ್ಲಾಧ್ಯಕ್ಷ ಸುದೀಪ್.ಡಿ ಮಾತನಾಡಿ, ಕಂದಾಯ ಇಲಾಖೆಯ ಕಛೇರಿ ಕೆಲಸಕ್ಕೆ ಅಗತ್ಯ ಸೌಕರ್ಯಗಳನ್ನು ಒದಗಿಸಿಕೊಡುವಂತೆ ಜಿಲ್ಲಾಧಿಕಾರಿಗಳಿಗೆ ಕಂದಾಯ ಇಲಾಖೆ ನೌಕರರ ಪರ ಮನವಿ ಮಾಡಿಕೊಂಡರು.

ಇದಕ್ಕೂ ಮುನ್ನ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಕಂದಾಯ ಇಲಾಖಾ ಕಛೇರಿಯಲ್ಲಿ ಸೇವೆ ಸಲ್ಲಿಸಿ, ಸೇವಾ ನಿವೃತ್ತಿಯಾದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಸನ್ಮಾನಿಸುವ ಮೂಲಕ ಬೀಳ್ಕೊಡಲಾಯಿತು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಅಮರೇಶ್.ಹೆಚ್, ಉಪವಿಭಾಗಾಧಿಕಾರಿ ಶ್ರೀನಿವಾಸ್, ದೊಡ್ಡಬಳ್ಳಾಪುರ ತಹಸೀಲ್ದಾರ್ ವಿದ್ಯಾವಿಭಾ ರಾಥೋಡ್, ಹೊಸಕೋಟೆ ತಹಶೀಲ್ದಾರ್ ವಿಜಯಕುಮಾರ್, ನೆಲಮಂಗಲ ತಹಶೀಲ್ದಾರ್ ಅಮೃತ ಅತ್ರೇಶ್ ಹೆಚ್.ಆರ್, ಗ್ರಾಮ ಆಡಳಿತ ಅಧಿಕಾರಿಗಳ ಸಂಘದ ಜಿಲ್ಲಾಧ್ಯಕ್ಷ ರಘುಪತಿ ಬಿ.ಸಿ, ಗ್ರಾಮ ಸಹಾಯಕರ ಸಂಘದ ಜಿಲ್ಲಾಧ್ಯಕ್ಷ ವೆಂಕಟೇಶ್ ಎಂ. ಸೇರಿದಂತೆ ಜಿಲ್ಲೆಯ ಕಂದಾಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಜನ ಸ್ಪಂದನ ಕಾರ್ಯಕ್ರಮವನ್ನು ಸದುಪಯೋಗ ಪಡಿಸಿಕೊಳ್ಳಿ

**ಮಂಡ್ಯ:** ಜನ ಸಾಮಾನ್ಯರ ಸಮಸ್ಯೆಗಳನ್ನು ಸ್ಥಳೀಯ ಮಟ್ಟದಲ್ಲಿ ಬಗೆಹರಿಸಲು ಸರ್ಕಾರವು ಇಂದು ಜನಸ್ಪಂದನ ಕಾರ್ಯಕ್ರಮವನ್ನು ಸ್ಥಳೀಯ ಮಟ್ಟದಲ್ಲಿ ಆಯೋಜಿಸುತ್ತಿದ್ದು, ಸಾರ್ವಜನಿಕರು ಸದುಪಯೋಗ ಪಡಿಸಿಕೊಳ್ಳಿ ಎಂದು ಮದ್ದೂರು ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ.ಎಮ್.ಉದಯ್ ಅವರು ತಿಳಿಸಿದರು. ಅವರು ಇಂದು ಮದ್ದೂರು ತಾಲೂಕಿನ ಭಾರತೀನಗರ ಬಾಲಾಜಿ ಸಮುದಾಯ ಭವನದಲ್ಲಿ ನಡೆದ ಜನ ಸ್ಪಂದನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಸಾರ್ವಜನಿಕರು ತಮ್ಮ ಸಮಸ್ಯೆಗಳಿಂದಾಗಿ ನೂರಾರು ಸಂಖ್ಯೆಯಲ್ಲಿ ಅರ್ಜಿಗಳನ್ನು ಹಿಡಿದು ನಾಡ ಕಛೇರಿ ಹಾಗೂ ತಾಲ್ಲೂಕು ಕಚೇರಿಗಳಿಗೆ ಅಲೆಯುತ್ತಿದ್ದಾರೆ. ಇದನ್ನು ತಪ್ಪಿಸುವ ಸಲುವಾಗಿ ಜನಸ್ಪಂದನ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದರು.

ರೈತರಿಗೆ ಪಶು ಸಂಗೋಪನೆ, ತೋಟಗಾರಿಕೆ, ಕೃಷಿ, ರೇಷ್ಮೆ ಸೇರಿದಂತೆ ಇನ್ನಿತರೆ ಇಲಾಖೆಗಳಲ್ಲಿ ಸರ್ಕಾರ ಸೌಲಭ್ಯಗಳನ್ನು ಒದಗಿಸುತ್ತದೆ. ಅಧಿಕಾರಿಗಳು ರೈತರಿಗೆ ಮಾಹಿತಿ ನೀಡಿ ಸೌಲಭ್ಯವನ್ನು ಪಾರದರ್ಶಕವಾಗಿ ಒದಗಿಸಿ ಎಂದು ತಿಳಿಸಿದರು.






ತಿಪಟೂರು ತಾಲ್ಲೂಕಿನ ಕೋಟನಾಯಕನಹಳ್ಳಿಯ ರುದ್ರಮುನಿ ಸ್ವಾಮೀಜಿ ಇಂಟರ್ನ್ಯಾ?ನಲ್ ಪಬ್ಲಿಕ್ ಸ್ಕೂಲ್ ಹಾಗೂ ಕ್ರೋಮ್ ಪಿ.ಯು ಕಾಲೇಜಿನಲ್ಲಿ ರಾಷ್ಟ್ರೀಯ ವೈದ್ಯ ದಿನಾಚರಣೆಯನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ಎಸ್.ಎಸ್ ಆಸ್ಪತ್ರೆಯ ವೈದ್ಯೆ ಗಂಗಾಮಣಿ ಸುದರ್ಶನ ಅವರನ್ನು ಸಂಸ್ಥೆಯ ಅಧ್ಯಕ್ಷ ಕಂಚಾಘಟ್ಟ ಷಡಕ್ಷರ ಮಠದ ರುದ್ರಮುನಿ ಸ್ವಾಮೀಜಿ ಸನ್ಮಾನಿಸಿದರು.

# ಮಾನ್ಯ ಮುಖ್ಯಮಂತ್ರಿಗಳ ಚಿನ್ನದ ಪದಕ ವಿಜೇತ: ಗೃಹರಕ್ಷಕದಳಕ್ಕೆ ಕೀರ್ತಿ

**ಮಂಡ್ಯ:** ಮಂಡ್ಯ ಜಿಲ್ಲಾ ಗೃಹರಕ್ಷಕದಳ, ಮಂಡ್ಯ ಘಟಕದಲ್ಲಿ ಸಾಫ್ಟ್ ಆಫೀಸರ್ (ಪಬ್ಲಿಸಿಟಿ) ಆಗಿ ಸೇವೆ ಸಲ್ಲಿಸುತ್ತಿರುವ ಸಿ. ಶ್ರೀನಿವಾಸಯ್ಯ ಅವರಿಗೆ 2023 ನೇ ಸಾಲಿನ ಕರ್ನಾಟಕ ಘನ ಸರ್ಕಾರದ ಆದೇಶದಂತೆ ಜೂನ್ 11 ರಂದು ಮಾನ್ಯ ಮುಖ್ಯಮಂತ್ರಿಗಳ ಚಿನ್ನದ ಪದಕ ಪ್ರಧಾನವಾಗಿರುತ್ತದೆ. ಮಂಡ್ಯ ಜಿಲ್ಲಾ ಗೃಹರಕ್ಷಕದಳದ ವತಿಯಿಂದ ಅಧಿಕಾರಿಗಳಾದ ಡಿ. ವಿನೋದ್ ಖನ್ನಾ ಕಮಾಂಡೆಂಟ್ ಹಾಗೂ ಪುರುಷೋತ್ತಮ್ ರಾವ್ ಎ ಡೆಪ್ಯೂಟಿ ಕಮಾಂಡೆಂಟ್, ಬೋಧಕ ವರ್ಗದವರು ಮತ್ತು ಕಚೇರಿಯ ಸಿಬ್ಬಂದಿವರ್ಗದವರು, ಗೃಹರಕ್ಷಕ ಅಧಿಕಾರಿಗಳು ಹಾಗೂ ಗೃಹರಕ್ಷಕರು ಪದಕ ಪುರಸ್ಕೃತರನ್ನು ಪ್ರಶಂಸಿಸಿರುತ್ತಾರೆ ಎಂದು ಮಂಡ್ಯ ಜಿಲ್ಲಾ ಗೃಹರಕ್ಷಕದಳದ ಸಮಾದೇಷ್ಟರು ತಿಳಿಸಿದ್ದಾರೆ.



## ಬೆಳೆ ವಿಮೆ ಯೋಜನೆಯಡಿ: ರೈತರು ನೋಂದಣಿ ಮಾಡಿಸಿಕೊಳ್ಳಿ

**ಕೋಲಾರ:** ಮುಂಗಾರು ಹಂಗಾಮಿನ ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆ ವ್ಯಾಪ್ತಿಗೆ ಕೋಲಾರ ಜಿಲ್ಲೆಯ ಅಧೀನದ ಎಲ್ಲಾ ತಾಲ್ಲೂಕುಗಳಾದ ಬಂಗಾರಪೇಟೆ, ಕೆ.ಜಿ.ಎಫ್. ಕೋಲಾರ, ಮಾಲೂರು, ಮುಳಬಾಗಿಲು ಮತ್ತು ಶ್ರೀನಿವಾಸಪುರ ತಾಲ್ಲೂಕುಗಳನ್ನು ಒಳಪಡಿಸಲಾಗಿದೆ. ಕೋಲಾರ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಯಡಿ ಮಾವು ಬೆಳೆಗೆ ಪ್ರತಿ ಹೇಕ್ಟರ್ ವಿಮಾ ಮೊತ್ತ ರೂ. 80000/-ಗಳಾಗಿದ್ದು, ಶೇ.5ರಷ್ಟು ರೈತರು ಪಾವತಿಸಬೇಕಾದ ವಿಮಾಕಂತಿನ ಮೊತ್ತ ರೂ. 4000/-ಗಳಾಗಿರುತ್ತದೆ. ಜಿಲ್ಲೆಯಲ್ಲಿ ಬೆಳೆ ಸಾಲಪಡೆದ ರೈತರು ಹಾಗೂ ಸಾಲಪಡೆಯದ ರೈತರು ನೊಂದಣಿ ಮಾಡಿಕೊಳ್ಳಬಹುದಾಗಿದ್ದು, ಆಯಾ ತಾಲ್ಲೂಕಿಗೆ ಸಂಬಂಧಪಟ್ಟ ವಿಮೆ ಮಾಡಿಸಲು ಇಚ್ಚಿಸುವ ರೈತರು ನಿಗಧಿತ ಅರ್ಜಿಯೊಂದಿಗೆ ಪಹಣಿ, ಬ್ಯಾಂಕ್ ಖಾತೆ ಪಾಸ್ ಪುಸ್ತಕ, ಆಧಾರ ಕಾರ್ಡ್ ನಕಲು ಪತ್ರಗಳನ್ನು ಮತ್ತು ಸ್ವಯಂ ಘೋಷಿತ ಬೆಳೆ ವಿವರಗಳನ್ನು ಲಗತ್ತಿಸಿ ತಾವು ಖಾತೆ ಹೊಂದಿರುವ ಯಾವುದಾದರೂ ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಅಥವಾ ಗ್ರಾಮಪಂಚಾಯತ್ ಮಟ್ಟದಲ್ಲಿರುವ ಗ್ರಾಮ ಓನ್ ಕೇಂದ್ರಗಳಲ್ಲಿ ಅಥವಾ ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ಖಿಘಃಆಖು ವಿಮೆ ಯೋಜನೆಯಡಿ ಜುಲೈ 31 ರೊಳಗೆ ನೋಂದಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಬಂಗಾರಪೇಟೆ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ದೂ: 9448949104, ಕೋಲಾರ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ದೂ: 9964749681, ಹಿರಿಯ ಮಾಲೂರು ಸಹಾಯಕ ತೋಟಗಾರಿಕೆ ನಿರ್ದೇಶಕರ ದೂ: 9448955801. ಮುಳಬಾಗಿಲು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ದೂ: 8073334003. ಶ್ರೀನಿವಾಸಪುರ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ದೂ: 9008059912 ಯನ್ನು ಸಂಬಂಧಪಟ್ಟ ತಾಲ್ಲೂಕು ತೋಟಗಾರಿಕೆ ಕಛೇರಿಗಳಿಗೆ ಹಾಗೂ ಹೋಬಳಿ ಮಟ್ಟದ ತೋಟಗಾರಿಕೆ ಅಧಿಕಾರಿಗಳನ್ನು ಸಂಪರ್ಕಿಸಬಹುದೆಯೆಂದು ತೋಟಗಾರಿಕೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಕೋಲಾರ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್-ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳಲ್ಲಿ ಪಿಯುಸಿ ಮತ್ತು ಪಿಯುಸಿ ಸಮಾನಾಂತರ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ ಪ್ರವಶೇಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, ಪ್ರವರ್ಗ-2 ಹಾಗೂ ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ವಿದ್ಯಾರ್ಥಿಯ ಪೋಷಕರ ಪ್ರವರ್ಗ-1 ಎಸ್.ಸಿ. ಮತ್ತು ಎಸ್.ಟಿ ರೂ.2.50ಲಕ್ಷ ಹಾಗೂ ಪ್ರವರ್ಗ-2ಎ, 2ಬಿ, 3ಎ, 3ಬಿ, ಹಿಂದುಳಿದ ವರ್ಗ ಹಾಗೂ ಇತರೆ ರೂ.1.00 ಲಕ್ಷ ವಾರ್ಷಿಕ ಆದಾಯದ ಮಿತಿಯಿರಬೇಕು. ತಾಲ್ಲೂಕುವಾರು ವಿದಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿ ನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆ ವೆಬ್ ಸೈಟ್ https://bcwd.karnataka.gov.inನಲ್ಲಿ ನೋಡಬಹುದು. ಅರ್ಜಿಯನ್ನು ವಿದ್ಯಾರ್ಥಿಗಳು https://shp.karnataka.gov.in/bcwd ಅನ್ನು ಆನ್‌ಲೈನ್‌ನಲ್ಲಿ ಜುಲೈ 20 ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.com ಇ-ಮೇಲ್ ಮುಖಾಂತರ ಅಥವಾ ಜಿಲ್ಲಾ, ಸಂಬಂಧಿಸಿದ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು, ಇವರನ್ನು ಅಗತ್ಯ ದಾಖಲೆಗಳೊಂದಿಗೆ ಕಛೇರಿ ಕೆಲಸದ ವೇಳೆಯಲ್ಲಿ ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ ಕೇಂದ್ರ ಕಛೇರಿ ಸಹಾಯವಾಣಿ ಸಂ: 8050770004, 8050770005 ಮತ್ತು ಜಿಲ್ಲಾ ಕಛೇರಿ-08152-222336 ಯನ್ನು ಸಂಪರ್ಕಿಸಬಹುದುಯೆಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಕೋಲಾರ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್-ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳಲ್ಲಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, ಪ್ರವರ್ಗ-2 ಹಾಗೂ ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ವಿದ್ಯಾರ್ಥಿಯ ಪೋಷಕರ ಪ್ರವರ್ಗ-1 ಎಸ್.ಸಿ. ಮತ್ತು ಎಸ್.ಟಿ ರೂ.1.00ಲಕ್ಷ ಹಾಗೂ ಪ್ರವರ್ಗ-2ಎ, 2ಬಿ, 3ಎ, 3ಬಿ, ಹಿಂದುಳಿದ ವರ್ಗ ಹಾಗೂ ಇತರೆ ರೂ.4,45,600/-ಲಕ್ಷ ವಾರ್ಷಿಕ ಆದಾಯದ ಮಿತಿಯಿರಬೇಕು. ತಾಲ್ಲೂಕುವಾರು ವಿದಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿ ನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆ ವೆಬ್ ಸೈಟ್ https://bcwd.karnataka.gov.in ನಲ್ಲಿ ನೋಡಬಹುದು. ಅರ್ಜಿಯನ್ನು ವಿದ್ಯಾರ್ಥಿಗಳು https://shp.karnataka.gov.in/bcwdಅನ್ನು ಆನ್‌ಲೈನ್‌ನಲ್ಲಿ ಜುಲೈ 10 ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.com ಇ-ಮೇಲ್ ಮುಖಾಂತರ ಅಥವಾ ಜಿಲ್ಲಾ, ಸಂಬಂಧಿಸಿದ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು, ಇವರನ್ನು ಅಗತ್ಯ ದಾಖಲೆಗಳೊಂದಿಗೆ ಕಛೇರಿ ಕೆಲಸದ ವೇಳೆಯಲ್ಲಿ ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ ಕೇಂದ್ರ ಕಛೇರಿ ಸಹಾಯವಾಣಿ ಸಂ: 8050770004, 8050770005 ಮತ್ತು ಜಿಲ್ಲಾ ಕಛೇರಿ-08152-222336 ಯನ್ನು ಸಂಪರ್ಕಿಸಬಹುದುಯೆಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಹಾಯಧನಕ್ಕೆ ಅರ್ಜಿ ಆಹ್ವಾನ

**ಕೋಲಾರ:** ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ 6500 ಘ.ಮೀ ಸಾಮಾರ್ಥ್ಯದ ಸಮುದಾಯ ಕೃಷಿಹೊಂಡ, ಸಾಮಾನ್ಯ ವರ್ಗದ ರೈತರಿಗೆ 2000 ಘ.ಮೀ ವಿಸ್ತೀರ್ಣದ ನೆರಳು ಪರದೆ ಮನೆ ಘಟಕ, ಪರಿಶಿಷ್ಟ ಪಂಗಡದ ರೈತರಿಗೆ 1200 ಘ.ಮೀ ಸಾಮಾರ್ಥ್ಯದ ಒಂದು ವೈಯಕ್ತಿಕ ಕೃಷಿಹೊಂಡ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ ಪ್ಯಾಕ್‌ಹೌಸ್ ಒಂದು ಘಟಕವಿರುತ್ತದೆ. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಪರಿಶಿಷ್ಟ ಜಾತಿ ರೈತರಿಗೆ 6500 ಘ.ಮೀ ಸಾಮಾರ್ಥ್ಯದ ಒಂದು ವೈಯಕ್ತಿಕ ಕೃಷಿಹೊಂಡ, ಪರಿಶಿಷ್ಟ ಪಂಗಡದ ರೈತರಿಗೆ 2500 ಘ.ಮೀ ಸಾಮರ್ಥ್ಯದ ಒಂದು ವೈಯಕ್ತಿಕ ಕೃಷಿಹೊಂಡ ಹಾಗೂ 3 ರಿಂದ 5ಎಚ್‌ಪಿ ವರೆಗಿನ ಸೋಲಾರ್ ಪಂಪ್‌ಸೆಟ್ ಅಳವಡಿಕೆಗೆ 3 ಘಟಕಕ್ಕೆ ಸಹಾಯಧನ ಲಭ್ಯವಿದ್ದು, ಆಸಕ್ತ ರೈತರು ಅರ್ಜಿಯೊಂದಿಗೆ ಪ್ರಸಕ್ತ ಸಾಲಿನ ಪಹಣಿ (ಆರ್.ಟಿ.ಸಿ), ಆಧಾರ್‌ಕಾರ್ಡ್ ಜೆರಾಕ್ಸ್ ಪ್ರತಿ, ಬ್ಯಾಂಕ್ ಪಾಸ್ ಪುಸ್ತಕ ಜೆರಾಕ್ಸ್ ಪ್ರತಿ, ಪ.ಪಂಗಡ ಮತ್ತು ಪ.ಜಾತಿ ರೈತರು ಆಗಿದ್ದಲ್ಲಿ ಆರ್‌ಡಿ ಸಂಖ್ಯೆಯ ಜಾತಿ ಪ್ರಮಾಣ ಪತ್ರದೊಂದಿಗೆ ಜುಲೈ 08 ರೊಳಗೆ ಸಲ್ಲಸಬಹುದುಯೆಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಹಿರಂಗ ಹರಾಜು

**ಕೋಲಾರ:** ಕೋಲಾರ ತಾಲ್ಲೂಕು ಕ್ಯಾಲನೂರು ಗ್ರಾಮ ಪಂಚಾಯತಿ ಹಾಗೂ ಗ್ರಾಮದ ಶುದ್ಧ ಕುಡಿಯುವ ನೀರಿನ ಘಟಕ ಪಶು ಆಸ್ಪತ್ರೆ ಬಳಿ 08 ಮರಗಳು ಮತ್ತು ಸಂತೆ ಮೈದಾನ ಅಂಗಡಿ ಮಳಿಗೆ ಬಳಿ 01 ಮರ ತೆಗೆಯಲು ಜುಲೈ 08 ರಂದು ಬೆಳಿಗ್ಗೆ 11.00 ಗಂಟೆಗೆ ಬಹಿರಂಗ ಹರಾಜುನ್ನು ನಿಗಧಿಪಡಿಸಲಾಗಿದೆಯೆಂದು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಳೆ ಶ್ರೀ ಜಗದ್ಗುರು ರಂಭಾಪುರೀಶ ನಿವಾಸದ ಉದ್ಘಾಟನೆ

**ಶಿವಮೊಗ್ಗ:** ಶಿವಮೊಗ್ಗ ನಗರಕ್ಕೆ ಸಮೀಪದ ಹರಕೆರೆ ಗ್ರಾಮದ ಶಂಕರ ಕಣ್ಣಿನ ಆಸ್ಪತ್ರೆ ಪಕ್ಕದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಶ್ರೀ ಜಗದ್ಗುರು ರಂಭಾಪುರೀಶ ನಿವಾಸದ ಉದ್ಘಾಟನಾ ಸಮಾರಂಭ ಜುಲೈ 3ರಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಜರುಗಲಿದೆ ಎಂದು ಶ್ರೀ ಜಗದ್ಗುರು ರಂಭಾಪುರೀಶ ನಿವಾಸ ಕಟ್ಟಡ ನಿರ್ಮಾಣ ಸಮಿತಿ ಪ್ರಧಾನ ಕಾರ್ಯದರ್ಶಿ ಎಸ್.ಎಸ್. ಜ್ಯೋತಿಪ್ರಕಾಶ ಇಂದು ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾ ಗೋಷ್ಠಿಯಲ್ಲಿ ತಿಳಿಸಿದರು.

ಜುಲೈ 3 ರ ಬೆಳಿಗ್ಗೆ 11 ಗಂಟೆಗೆ ಮಾಜಿ ಮುಖ್ಯ ಮಂತ್ರಿ ಬಿ.ಎಸ್ .ಯಡಿಯೂರಪ್ಪ ನೂತನ ಕಟ್ಟಡವನ್ನು ಉದ್ಘಾಟಿಸುವರು. ಸಮಾರಂಭವನ್ನು ಸಂಸದ ಬಿ.ವೈ.ರಾಘವೇಂದ್ರ ಜ್ಯೋತಿ ಪ್ರಜ್ವಲನದ ಮೂಲಕ ಉದ್ಘಾಟಿಸುವರು. ಅಖಿಲ ಭಾರತ ವೀರಶೈವ ಶಿವಾಚಾರ್ಯ ಸಂಸ್ಥೆ(ರಿ)ಯ ಗೌರವಾಧ್ಯಕ್ಷರಾದ ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸುವರು. ಅಧ್ಯಕ್ಷರಾದ ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಸಮ್ಮುಖ ವಹಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಉಪ ಮುಖ್ಯ ಮಂತ್ರಿ ಕೆ.ಎಸ್.ಈಶ್ವರಪ್ಪ, ಶಾಸಕ ಎಸ್.ಎನ್.ಚನ್ನಬಸಪ್ಪ, ವಿಧಾನ ಪರಿಷತ್ ಸದಸ್ಯರಾದ ಡಾ|| ಧನಂಜಯ ಸರ್ಜಿ ಹಾಗೂ ಡಿ.ಎಸ್.ಅರುಣ, ಮಾಜಿ ವಿಧಾನ ಪರಿಷತ್ ಸದಸ್ಯ ಎಸ್. ರುದ್ರೇಗೌಡ, ಮಾಜಿ ಶಾಸಕರಾದ ಹೆಚ್.ಎಂ.ಚಂದ್ರಶೇಖರಪ್ಪ,




ಆಯನೂರು ಮಂಜುನಾಥ್, ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ.ಎಸ್.ಷಡಾಕ್ಷರಿ, ಶ್ರೀ ಬ.ವೀ.ಲಿಂ.ಸೇವಾ ಸಮಾಜದ ಗೌರವ ಕಾರ್ಯದರ್ಶಿ ಎಸ್.ಪಿ.ದಿನೇಶ್, ಅ.ಭಾ. ವೀ.ಲಿಂ.ಮಹಾಸಭಾ ಜಿಲ್ಲಾ ಘಟಕದ ಅಧ್ಯಕ್ಷ ರುದ್ರಮುನಿ ಎಸ್.ಸಜ್ಜನ, ಪ್ರಧಾನ ಕಾರ್ಯದರ್ಶಿ ಮಹೇಶ್ ಮೂರ್ತಿ ಸಿ., ನಿರ್ಮಿತಿ ಕೇಂದ್ರದ ಯೋಜನ ವ್ಯವಸ್ಥಾಪಕ ನಾಗರಾಜ್ ಕೆ., ಶ್ರೀಮತಿ ಪಾರ್ವತಮ್ಮ ಪಂಚಾಕ್ಷರಯ್ಯ, ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷ ಎಸ್.ಎಸ್. ಜ್ಯೋತಿಪ್ರಕಾಶ, ವೀರಶೈವ ಸಮಾಜದ ಧುರೀಣ ಎನ್.ಜೆ.ರಾಜಶೇಖರ್, ಹೆಚ್.ವಿ.ಮರುಳೇಶ ಭಾಗವಹಿಸುವರು. ಶ್ರೀ ಜಗದ್ಗುರು ರಂಭಾಪುರೀಶ ನಿವಾಸ ಕಟ್ಟಡ ನಿರ್ಮಾಣ ಸಮಿತಿಯ ಎಲ್ಲ ಪದಾಧಿಕಾರಿಗಳು ಸಮಾರಂಭದಲ್ಲಿ ಉಪಸ್ಥಿತರಿರುವರು.

ಮಳಲಿ ಡಾ.ನಾಗಭೂಷಣ ಶಿವಾಚಾರ್ಯರು, ಬಿಳಕಿ ರಾಚೋಟೇಶ್ವರ ಶಿವಾಚಾರ್ಯರು, ಕಡೆನಂದಿಹಳ್ಳಿ ರೇವಣಸಿದ್ದೇಶ್ವರ ಶಿವಾಚಾರ್ಯರು, ಹಣ್ಣೆಮಠದ ಮರುಳಸಿದ್ಧ ಪಂಡಿತಾರಾಧ್ಯ ಶಿವಾಚಾರ್ಯರು, ಹುಣಸಘಟ್ಟದ ಗುರುಮೂರ್ತಿ ಶಿವಾಚಾರ್ಯರು, ಬೀರೂರು ರುದ್ರಮುನಿ ಶಿವಾಚಾರ್ಯರು, ತಾವರೆಕೆರೆ ಡಾ.ಅಭಿನವ ಸಿದ್ಧಲಿಂಗ ಶಿವಾಚಾರ್ಯರು, ಚನ್ನಗಿರಿ ಡಾ|| ಕೇದಾರ ಶಿವಶಾಂತವೀರ ಶಿವಾಚಾರ್ಯರು, ನಂದಿಪುರದ ನಂದೀಶ್ವರ ಶಿವಾಚಾರ್ಯರು, ರಟ್ಟಿಹಳ್ಳಿ ವಿಶ್ವೇಶ್ವರ ದೇವರು ನುಡಿನಮನ ಸಲ್ಲಿಸುವರು. ಇದೇ ಸಂದರ್ಭದಲ್ಲಿ ಭೂ ದಾನಿಗಳಾದ ಟಿ.ವಿ.ಈಶ್ವರಯ್ಯ ಸಹೋದರರು ಸೇರಿದಂತೆ ಗಣ್ಯರಿಗೆ ಮತ್ತು ದಾನಿಗಳಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಅಶೀರ್ವದಿಸುವರು. ಕಾರ್ಯಕ್ರಮದ ಪೂರ್ವಭಾವಿಯಾಗಿ ಜುಲೈ 2ರಂದು ಶಿವಮೊಗ್ಗದ ವೇ.ವಿರೂಪಾಕ್ಷಯ್ಯ ಶಾಸ್ತ್ರಿಗಳು ಮತ್ತು ಸಂಗಡಿಗರ ವೈದಿಕತ್ವದಲ್ಲಿ ನೂತನ ಕಟ್ಟಡದ ವಾಸ್ತು ಶಾಂತಿ ಪೂಜಾ ಜರುಗುತ್ತದೆ. ಸಮಸ್ತ ಜನತೆ ಹೆಚ್ಚಿನ ಪ್ರಮಾಣದಲ್ಲಿ ಪಾಲ್ಗೊಳ್ಳಬೇಕು ಎಂದು ಅವರು ತಿಳಿಸಿದರು. ಪತ್ರಿಕಾ ಗೋಷ್ಠಿಯಲ್ಲಿ ಬಿಳಕಿ ರಾಚೋಟೇಶ್ವರ ಶಿವಾಚಾರ್ಯ ಸ್ವಾಮಿಗಳು, ಮಳಲಿ ಡಾ. ನಾಗಭೂಷಣ ಶಿವಾಚಾರ್ಯ ಸ್ವಾಮಿಗಳು, ಹೆಚ್.ವಿ.ಮರುಳೇಶ್, ಶಾಂತಾ ಆನಂದ, ಟಿ.ವಿ.ಶಿವಕುಮಾರ್, ಟಿ.ವಿ.ಶಿವಲಿಂಗಯ್ಯ, ಶ್ರೀ ಜಗದ್ಗುರು ರಂಭಾಪುರಿ ಪೀಠದ ವಾರ್ತಾ ಸಂಯೋಜನಾಧಿಕಾರಿ ಸಿ.ಎಚ್ .ಬಾಳನಗೌಡ್ರ, ಇನ್ನಿತರರು ಇದ್ದರು.

# ಸಂಜೆ ಟಿಪ್ಸ್



## ಆರೋಹನ್ ಪ್ರಿವಿಲೇಜ್ ಲೋನ್ ವಿತರಣೆ

ಆರೋಹನ್ ಫೈನಾನ್ಷಿಯಲ್ ಸರ್ವೀಸಸ್, ಆರ್‌ಬಿಐ ನಿಯಂತ್ರಣದ ಎನ್‌ಬಿಎಫ್‌ಸಿ ಎಮ್‌ಎಫ್‌ಐ, ಇತ್ತೀಚೆಗೆ ಬೆಂಗಳೂರು ನಗರದಲ್ಲಿ ವಲಯ ಕಚೇರಿಯನ್ನು ಸ್ಥಾಪಿಸುವ ಮೂಲಕ ದಕ್ಷಿಣ ಭಾರತದಲ್ಲಿ ತನ್ನ ವ್ಯವಹಾರವನ್ನು ವಿಸ್ತರಿಸಿದೆ. ಕಂಪನಿಯು ಮೈಸೂರಿನಲ್ಲಿ ಆಧಾರಿತ ಗ್ರಾಹಕರಿಗೆ 59,000 ರೂಪಾಯಿಗಳ ಮೊತ್ತದ ಮೊದಲ ಆರೋಹನ್ ಪ್ರಿವಿಲೇಜ್ ಲೋನ್ ಅನ್ನು ವಿತರಿಸಿದೆ. ಇದು ಸುವರ್ಣ ಪ್ರಮಾಣದ ಮೈಕ್ರೋಫೈನಾನ್ಸ್ ಗ್ರಾಹಕರಿಗಾಗಿ ಉದ್ಯಮದ ಮೊದಲ ಪ್ರಸ್ತಾಪವಾಗಿದೆ.

ಆರೋಹನ್ ಪ್ರಿವಿಲೇಜ್ ಡಿಜಿಟಲ್ ಲೆಂಡಿಂಗ್ ಆರೋಹನ್ನ ಹೊಸತಾದ ನವೀನತೆಯ ಒತ್ತಡ ಮತ್ತು 2028ರೊಳಗೆ 28 ಮಿಲಿಯನ್ ಜನರ ಜೀವನವನ್ನು ಪ್ರಭಾವಿತಗೊಳಿಸುವ ಮಹಾತ್ವಾಕಾಂಕ್ಷೆಯ ದೃಷ್ಟಿಕೋಣದ ಸಾಕ್ಷಿಯಾಗಿದೆ. ಸಮಯಕ್ಕೆ ಸರಿಯಾಗಿ ಪಾವತಿಸಿದ ದಾಖಲೆ ಹೊಂದಿರುವ ಗ್ರಾಹಕರಿಗೆ ಈ ಸೇವೆ ವಿಶೇಷವಾಗಿ ತಯಾರಿಸಲಾಗಿದೆ, ಇದರಿಂದಲೇ ಅವರಿಗೆ ತಕ್ಷಣದ ಮತ್ತು ಸುಲಭವಾದ ಹಣಕಾಸು ಸಹಾಯವನ್ನು ಒದಗಿಸುತ್ತದೆ. ಆರೋಹನ್ ಪ್ರಿವಿಲೇಜ್ ದಕ್ಷಿಣ ಭಾರತದಲ್ಲಿ ಮೊದಲ ಬಾರಿ ಮೈಸೂರಿನ ಶಾಖೆಯಲ್ಲಿ 59,000 ರೂಪಾಯಿಗಳ ಮೊತ್ತವನ್ನು ವಿತರಿಸುವ ಮೂಲಕ ತನ್ನ ಮೊದಲ ವಿತರಣೆಯನ್ನು ದಾಖಲಿಸಿದೆ.

ನಮ್ಮ ದೇಶವು ದಕ್ಷಿಣಭಾರತವನ್ನು ಒಳಗೊಂಡ ಗ್ರಾಮೀಣ ಮತ್ತು ಅರೆನಗರ ಪ್ರದೇಶಗಳ ಪರಿಶ್ರಮಿ ಉದ್ಯಮಿಗಳಿಂದ ತುಂಬಿದೆ, ಇವರದು ದೇಶದ ನಿರ್ಮಾಣಕ್ಕೆ ದೊಡ್ಡ ಕೊಡುಗೆ. ನಾವು ಅವರನ್ನು ಯಶಸ್ಸಿನ ಪಥದಲಿ ಬೆಂಬಲಿಸಲು ಪ್ರಮುಖ ಪಾತ್ರ ವಹಿಸಬಲ್ಲೆವೆಂದು ನಾವು ನಂಬಿದ್ದೇವೆ'' ಎಂದು ಆರೋಹನ್ ಫೈನಾನ್ಷಿಯಲ್ ಸರ್ವೀಸಸ್ ಲಿಮಿಟೆಡ್ನ ವ್ಯವಸ್ಥಾಪಕ ನಿರ್ದೇಶಕ ಮನುಜ್ ನಂಬಿಯಾರ್ ಹೇಳಿದರು.

## ಬಿಸ್ಕತ್ತು ಬೋಂಡಾ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಕಡಲೆಹಿಟ್ಟು - 1 ಕಪ್, ಬಿಸ್ಕತ್ತು - 1 ಪ್ಯಾಕೆಟ್, ಕೊತ್ತಂಬರಿ - 2 ಚಮಚ, ಮೆಣಸಿನ ಪುಡಿ - 1 ಟೀ ಚಮಚ, ಅರಿಶಿನ ಪುಡಿ - 1/4 ಟೀ ಚಮಚ, ಕರಿಬೇವು - 1 ಚಮಚ, ಅಡಿಗೆ ಸೋಡಾ - 1/4 ಟೀ ಚಮಚ, ಅಡುಗೆ ತುಪ್ಪ, ರುಚಿಗೆ ಉಪ್ಪು.

### ಮಾಡುವ ವಿಧಾನ

ಒಂದು ಪಾತ್ರೆಯಲ್ಲಿ ಕಡಲೆಹಿಟ್ಟನ್ನು ತೆಗೆದುಕೊಂಡು ಸೋಡಾ ಪುಡಿ, ಧನಿಯಾ ಪುಡಿ, ಅರಿಶಿನ, ಖಾರದಪುಡಿ ಮತ್ತು ಉಪ್ಪು ಸೇರಿಸಿ ಚೆನ್ನಾಗಿ ಮಿಶ್ರಣ ಮಾಡಿ. ಮೊದಲು ನೀರು ಸೇರಿಸದೆ ಚೆನ್ನಾಗಿ ಮಿಶ್ರಣ ಮಾಡಿ. ನಂತರ ಸ್ವಲ್ಪ ನೀರು ಸೇರಿಸಿ ಮಿಶ್ರಣ ಮಾಡಿ. ಈ ಹಿಟ್ಟು ಸ್ವಲ್ಪ ದಪ್ಪವಾಗಿರಬೇಕು. ಹಿಟ್ಟು ದೋಸೆ ಹಿಟ್ಟಿನ ಹದಕ್ಕಿರಲಿ. ನಂತರ ಒಂದು ಪಾತ್ರೆಯಲ್ಲಿ ಎಣ್ಣೆ ಹಾಕಿ ಒಲೆಯ ಮೇಲೆ ಇಡಿ. ಬಳಿಕ ಬಿಸ್ಕತ್ತುಗಳನ್ನು ಎರಡೂ ಬದಿಗಳಲ್ಲಿ ಹಿಟ್ಟಿನಲ್ಲಿ ಅದ್ದಿ, ಅದನ್ನು ಎಣ್ಣೆಯಲ್ಲಿ ಕರಿಯಿರಿ. ಬಿಸ್ಕತ್ತು ಎರಡೂ ಬದಿಗಳಲ್ಲಿ ಗೋಲ್ಡನ್ ಆಗುವವರೆಗೆ ಕಾಯಿಸಿ. ನಿಮ್ಮ ನೆಚ್ಚಿನ ಬಿಸ್ಕೆಟ್ ಬೋಂಡಾ ನಿಮ್ಮ ಮುಂದೆ ಸಿದ್ಧ.

## ತಣ್ಣೀರು, ಬಿಸಿನೀರನ್ನು ಒಟ್ಟಿಗೆ ಕುಡಿಯಬಾರದು ಗೊತ್ತಾ?



### ಹೆಲ್ತ್ ಟಿಪ್ಸ್

ಫ್ರಿಡ್ಜ್‌ನಿಂದ ನೀರು ತೆಗೆದಾಗ ಮತ್ತು ಅದು ತುಂಬಾ ತಂಪಾಗಿರುವಾಗ, ಅನೇಕ ಜನರು ಅದಕ್ಕೆ ಬಿಸಿನೀರನ್ನು ಸೇರಿಸುತ್ತಾರೆ. ಇನ್ನೂ ಕೆಲವರು ಕೆಲವರು ಬಿಸಿ ನೀರಿಗೆ ತಣ್ಣೀರು ಸೇರಿಸಿ ಕುಡಿಯುವುದನ್ನು ಕೂಡ ಕಾಣಬಹುದಾಗಿದೆ. ಆದರೆ ಆರೋಗ್ಯ ತಜ್ಞರು ಇದನ್ನು ಆರೋಗ್ಯಕ್ಕೆ ಸೂಕ್ತವೆಂದು ಪರಿಗಣಿಸುವುದಿಲ್ಲ.

ತಜ್ಞನರ ಪ್ರಕಾರ ಯಾರೂ ಬಿಸಿ ಮತ್ತು ತಣ್ಣೀರನ್ನು ಒಟ್ಟಿಗೆ ಕುಡಿಯಬಾರದು. ತಣ್ಣೀರು ಜೀರ್ಣಿಸಿಕೊಳ್ಳಲು ಸಾಧ್ಯವಾಗುವುದಿಲ್ಲ. ಬಿಸಿ ನೀರು ಭಾರವಾಗಿರುತ್ತದೆ, ಬಿಸಿನೀರು ಹಗುರವಾಗಿರುತ್ತದೆ, ಎರಡೂ ಒಟ್ಟಿಗೆ ಸೇರಿದಾಗ ಅಜೀರ್ಣ ಸಮಸ್ಯೆಯಾಗಬಹುದು ಅಂತ ಹೇಳಿದ್ದಾರೆ.

ನೀವು ಬಿಸಿ ಮತ್ತು ತಣ್ಣೀರನ್ನು ಏಕೆ ಬೆರೆಸಬಾರದು: ಅಲ್ಲದೆ, ಬಿಸಿನೀರು ಬ್ಯಾಕ್ಟೀರಿಯಾವನ್ನು ಹೊಂದಿರುವುದಿಲ್ಲ, ಅದರಿಂದ ತಣ್ಣೀರು ಕಲುಷಿತವಾಗಬಹುದು, ಆದ್ದರಿಂದ ಎರಡನ್ನೂ ಬೆರೆಸುವುದು ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ.

ಬಿಸಿನೀರು ವಾತ ಮತ್ತು ಕಫವನ್ನು ಶಾಂತಗೊಳಿಸುತ್ತದೆ ಮತ್ತು ತಣ್ಣೀರು ಎರಡನ್ನೂ ಹೆಚ್ಚಿಸುತ್ತದೆ. ಬಿಸಿ ಮತ್ತು ತಣ್ಣನೆಯ ನೀರನ್ನು ಬೆರೆಸುವುದರಿಂದ ಜೀರ್ಣಕ್ರಿಯೆ ದುರ್ಬಲಗೊಳ್ಳುತ್ತದೆ, ಉಬ್ಬರಕ್ಕೆ ಕಾರಣವಾಗುತ್ತದೆ ಮತ್ತು ಪೋಷಕಾಂಶಗಳ ಹೀರಿಕೊಳ್ಳುವಿಕೆಗೆ ಅಡ್ಡಿಯಾಗುತ್ತದೆ. ಬೆಚ್ಚಗಿನ ನೀರು ರಕ್ತನಾಳಗಳನ್ನು ಹಿಗ್ಗಿಸುತ್ತದೆ ಮತ್ತು ಶುದ್ಧೀಕರಿಸುತ್ತದೆ, ಆದರೆ ತಣ್ಣೀರು ಅವುಗಳನ್ನು ಸಂಕುಚಿತಗೊಳಿಸುತ್ತದೆ. ಆದ್ದರಿಂದ ತಣ್ಣೀರು ಮತ್ತು ಬಿಸಿ ನೀರನ್ನು ಬೆರೆಸುವುದು ಸರಿಯಲ್ಲ ಎನ್ನಲಾಗಿದೆ.

## 'ಕಪ್ಪುಕಲೆ' ಸಮಸ್ಯೆಗೆ ಇಲ್ಲಿದೆ ಪರಿಹಾರ

### ಬ್ಯೂಟಿ ಟಿಪ್ಸ್

ಕಾಡುವ ಚರ್ಮದ ಸಮಸ್ಯೆ ಎಂದರೆ ಅದು ಹೈಪರ್ ಪಿಗ್ನೆಂಟೇಶನ್ ಅಥವಾ ಮೆಲಾಸ್ಮಾ. ಹೆಣ್ಣು ಗಂಡೆನ್ನದೆ ಕಾಡುವ ಇದು ಬಹುತೇಕರ ಸಾಮಾನ್ಯ ಸಮಸ್ಯೆ.

ಚರ್ಮದ ಮೇಲೆ ಅಲ್ಲಲ್ಲಿ ಗಾಢವಾದ ಪ್ಯಾಚ್, ಕಪ್ಪು ಕಲೆಗಳು ಮೂಡುವುದೇ ಈ ಸಮಸ್ಯೆ. ಇದು ಹೇಳಿಕೊಳ್ಳುವಂಥ ಸಮಸ್ಯೆ ಅಲ್ಲವಾದರೂ, ಚರ್ಮದ ಸೌಂದರ್ಯ ಸಮಸ್ಯೆಯಾಗಿರುವುದರಿಂದ ಹಲವರನ್ನು ಮಾನಸಿಕವಾಗಿಯೂ ಬಾಧಿಸುತ್ತದೆ. ಮುಖ್ಯವಾಗಿ ಹೆಣ್ಣುಮಕ್ಕಳು ತಮ್ಮ ಚರ್ಮದ ಕಾಂತಿ ಮಾಯವಾಗಿ ಮುಖದ ಮೇಲೆ ಹೀಗೆ ಕಪ್ಪನೆಯ ಪ್ಯಾಚ್ಗಳು ಮೂಡಿದ್ದನ್ನು ಮತ್ತೆ ಇಲ್ಲವಾಗಿಸುವುದು ಹೇಗೆ ಎಂಬ ಸುಳಿಯಲ್ಲಿ ಸಿಲುಕಿ ಒದ್ದಾಡುತ್ತಾರೆ. ಚರ್ಮದಲ್ಲಿ ಮೆಲನಿನ್ ಉತ್ಪಾದನೆ ಹೆಚ್ಚಾಗುವುದರಿಂದ ಹೀಗಾಗುತ್ತದೆ. ಸೂರ್ಯನ ಹಾನಿಕಾರಕ ಯುವಿ ಕಿರಣಗಳಿಂದ ನಮ್ಮ ಚರ್ಮವನ್ನು ರಕ್ಷಿಸಿಕೊಳ್ಳಲು ದಿನವೂ ಸನ್‌ಸ್ಕ್ರೀನ್ ಹಚ್ಚಿ. ಇದು ಮೆಲನಿನ್ ಉತ್ಪಾದನೆಯನ್ನು ಹೆಚ್ಚದಂತೆ ನೋಡಿಕೊಳ್ಳುತ್ತದೆ. ಪರಿಣಾಮವಾಗಿ ಹೈಪರ್‌ಪಿಗ್ಮೆಂಟೇಶನ್ ಹೆಚ್ಚಾಗುವುದಿಲ್ಲ. ಮೆದುವಾದ ಸ್ಕಿನ್ಕೇರ್ ವಸ್ತುಗಳನ್ನು ಬಳಸಿ. ನಿಮ್ಮ ಚರ್ಮದ ಮೇಲೆ ಗಾಢವಾದ, ರಾಸಾಯನಿಕಯುಕ್ತ ತೀಕ್ಷ್ಣ ಕ್ರೀಮ್ಗಳನ್ನು ಬಳಸಬೇಡಿ. ಹಗುರವಾದ, ಮೆದುವಾದ, ನೈಸರ್ಗಿಕ ಗುಣಗಳುಳ್ಳ ವಸ್ತುಗಳ್ನೇ ಬಳಸಿ.

**ಆಂಟಿಆಕ್ಸಿಡೆಂಟ್ ಸೇವಿಸಿ:** ನೀವು ಸೇವಿಸುವ ಆಹಾರದಲ್ಲಿ ಹೇರಳವಾಗಿ ಆಂಟಿ ಆಕ್ಸಿಡೆಂಟ್ಗಳಿರಲಿ. ಮುಖ್ಯವಾಗಿ ವಿಟಮಿನ್ ಸಿ ಆಕ್ಸಿಡೇಟಿವ್ ಒತ್ತಡದಿಂದ ಪಾರು ಮಾಡುತ್ತದೆ. ಹೆಚ್ಚು ನೀರು ಕುಡಿಯುವುದು, ಚರ್ಮಕ್ಕೆ ಸರಿಯಾದ ನೀರು ಪೂರೈಕೆ ಮಾಡುವುದು ಒಳ್ಳೆಯದು. ಇದು ನೈಸರ್ಗಿಕವಾಗಿ ಒಳಗಿನಿಂದಲೇ ಚರ್ಮವನ್ನು ರಿಪೇರಿ ಮಾಡುತ್ತದೆ. ಚರ್ಮಕ್ಕೆ ಹೊಳಪನ್ನು ನೀಡುವ ನಿಯಾಸಿನಮೈಡ್, ಕೋಜಿಕ್ ಆಸಿಡ್, ಲೈಕೋರೈಸ್ ಇತ್ಯಾದಿಗಳಿರುವ ಸೌಂದರ್ಯವರ್ಧಕಗಳನ್ನು ಬಳಸಬಹುದು.



ಇದು ಹೈಪರ್ಪಿಗ್ಮೆಂಟೇಶನ್ ಅನ್ನು ಕಡಿಮೆ ಮಾಡಿ ಚರ್ಮವನ್ನು ನಿಮ್ಮ ಹಳೆಯ ಬಣ್ಣಕ್ಕೆ ತರಲು ಸಹಾಯ ಮಾಡುತ್ತದೆ. ಕಲೆಗಳನ್ನು ಹೋಗಲಾಡಿಸುತ್ತವೆ.

ಆಗಾಗ ಎಕ್ಸ್‌ಫ್ಲಿಯೇಟ್ ಮಾಡಿ. ಅರ್ಥಾತ್, ಒಳ್ಳೆಯ ನೈಸರ್ಗಿಕ ಗುಣಗಳುಳ್ಳ ಸ್ಕಬಿಂಗ್ ಲೋಷನ್ ಬಳಸಿ ವಾರಕ್ಕೆರಡು ಬಾರಿ ಸ್ಕಬ್ ಮಾಡಿ. ಹೈಪರ್ ಪಿಗ್ಮೆಂಟೇಶನ್ಗೆ ಈಗ ಸಾಕಷ್ಟು ಸೌಂದರ್ಯ ಚಿಕಿತ್ಸೆಗಳೂ ಲಭ್ಯವಿವೆ. ಕೆಮಿಕಲ್ ಪೀಲ್, ಲೇಸರ್ ಥೆರಪಿ, ಮೈಕ್ರೋಡರ್ಮಾಬ್ರೇಶನ್ ಇತ್ಯಾದಿಗಳು ಈ ಸಮಸ್ಯೆಯನ್ನು ಸಾಕಷ್ಟು ಕಡಿಮೆ ಮಾಡುತ್ತವೆ. ಒಳ್ಳೆಯ ನುರಿತ ವೈದ್ಯರನ್ನು ಸಂಪರ್ಕಿಸಿ ಇವನ್ನು ಮಾಡಿಸಿಕೊಳ್ಳಬಹುದು.

## ಥ್ರಿಲ್ಲರ್ ಸಿನಿಮಾದಲ್ಲಿ ಕರೀನಾ



ಹನ್ಸಲ್ ಮೆಹ್ತಾ ನಿರ್ದೇಶನದ ಕರೀನಾ ಕಪೂರ್ ಅಭಿನಯದ ಸಿನಿಮಾ 'ದಿ ಬಕಿಂಗ್ಹ್ಯಾಮ್ ಮರ್ಡರ್ಸ್' ಬಿಡುಗಡೆ ದಿನಾಂಕ ಘೋಷಣೆಯಾಗಿದೆ. ಕರೀನಾ ಕಪೂರ್ ಅವರ 'ದಿ ಬಕಿಂಗ್ಹ್ಯಾಮ್ ಮರ್ಡರ್ಸ್' ಬಿಡುಗಡೆ ದಿನಾಂಕ ಘೋಷಣೆಯಾಗಿದ್ದು, ಹನ್ಸಲ್ ಮೆಹ್ತಾ ನಿರ್ದೇಶನದ ಚಿತ್ರ, ಸೆಪ್ಟೆಂಬರ್ 13 ರಂದು ತೆರೆಗೆ ಬರಲಿದೆ.

ಹನ್ಸಲ್ ಮೆಹ್ತಾ ನಿರ್ದೇಶನದ 'ದಿ ಬಕಿಂಗ್ಹ್ಯಾಮ್ ಮರ್ಡರ್ಸ್' ಸಿನಿಮಾದ ಮೂಲಕ ನಟಿ ಕರೀನಾ ಕಪೂರ್ ಸಹ-ನಿರ್ಮಾಪಕಿಯಾಗಿ ಕಾಣಿಸಿಕೊಂಡಿದ್ದು, ಸೆಪ್ಟೆಂಬರ್ 13 ರಂದು ತೆರೆಗೆ ಬರಲಿದೆ.

ಸಿನಿಮಾದ ಕುತೂಹಲಕಾರಿ ಪೋಸ್ಟರ್ ಬಿಡುಗಡೆಯೊಂದಿಗೆ 'ದಿ ಬಕಿಂಗ್ಹ್ಯಾಮ್ ಮರ್ಡರ್ಸ್' ಸಿನಿಮಾದ ರಿಲೀಸ್ ಡೇಟ್ ಅನ್ನು ಅನೌನ್ಸ್ ಮಾಡಿದ್ದಾರೆ. ಸಿನಿಮಾವು ಬಿಡುಗಡೆಗೂ ಮುನ್ನ ತುಂಬಾ ಸದ್ದು ಮಾಡಿತ್ತು. 2023 ರ ಎಂ ಒಂಬಿಖ ಫಿಲ್ಮ್ ಫೆಸ್ಟಿವಲ್ ನಲ್ಲಿ ತೆರೆಕಂಡಿತ್ತು ಅದಲ್ಲದೆ ಲಂಡನ್ ಫಿಲ್ಮ್ ಫೆಸ್ಟಿವಲ್ 2023 ಸಿನಿಮಾ ಬಿಡುಗೊಂಡಿತ್ತು. ಸಿನಿಮಾ ಥ್ರಿಲ್ಲರ್ ಚಿತ್ರವಾಗಿದ್ದು, ವಿಭಿನ್ನವಾದ ಅಜೆಂಡಾಗಳನ್ನು ಹೊತ್ತು ತರಲಿದೆ.

ಹನ್ಸಲ್ ಮೆಹ್ತಾ ನಿರ್ದೇಶನದ 'ದಿ ಬಕಿಂಗ್ಹ್ಯಾಮ್ ಮರ್ಡರ್ಸ್' ದಲ್ಲಿ ಕರೀನಾ ಕಪೂರ್ ಖಾನ್, ಆಶ್ ಟಂಡನ್, ರಣವೀರ್ ಬ್ರಾರ್ ಮತ್ತು ಕೀತ್ ಅಲೆನ್ ಸೇರಿದಂತೆ ಹಲವರು ತಾರಾಗಣದಲ್ಲಿದ್ದಾರೆ ಮತ್ತು ಅಸೀಮ್ ಅರೋರಾ, ಕಶ್ಯಪ್ ಕಪೂರ್ ಮತ್ತು ರಾಘವ್ ರಾಜ್ ಕಕ್ಕರ್ ಬರೆದಿದ್ದು, ಬಾಲಾಜಿ ಟೆಲಿಫಿಲ್ಮ್ಸ್ ಮತ್ತು ಟಿಬಿಎಂ ಫಿಲ್ಮ್ಸ್ ಬ್ಯಾನರ್ ಅಡಿಯಲ್ಲಿ ಕರೀನಾ ಕಪೂರ್ ಖಾನ್ ಸಹ-ನಿರ್ಮಾಪಕಿಯಾಗಿ ಕಾರ್ಯ ನಿರ್ವಹಿಸಿದ್ದಾರೆ. . 'ದಿ ಬಕಿಂಗ್ಹ್ಯಾಮ್ ಮರ್ಡರ್ಸ್' ಸಿನಿಮಾ 13ನೇ ಸೆಪ್ಟೆಂಬರ್ 2024 ರಂದು ಬಿಡುಗಡೆಯಾಗಲಿದೆ.



## ಸಿಹಿಸುದ್ದಿ ಕೊಟ್ಟ ನಟಿ- ಚೊಚ್ಚಲ ಮಗುವಿನ ನಿರೀಕ್ಷೆಯಲ್ಲಿ ಹರ್ಷಿಕಾ ದಂಪತಿ

ಕನ್ನಡದ ಚಿತ್ರರಂಗದ ಸ್ಟಾರ್ ದಂಪತಿ ಕೊಡಗಿನ ಬೆಡಗಿ ಹರ್ಷಿಕಾ ಪೂಣಚ್ಚ ಮತ್ತು ಭುವನ್ ಪೊನ್ನಣ್ಣ ಇದೀಗ ಚೊಚ್ಚಲ ಮಗುವಿನ ನಿರೀಕ್ಷೆಯಲ್ಲಿದ್ದಾರೆ. ಕೊಡವ ಸಂಪ್ರದಾಯದ ಉಡುಗೆಯಲ್ಲೇ ವಿಭಿನ್ನವಾಗಿ ಫೋಟೋಶೂಟ್ ಮಾಡಿಸಿರುವ ದಂಪತಿ ಮಗುವಿನ ಆಗಮನದ ಸುದ್ದಿ ಘೋಷಿಸಿದ್ದಾರೆ. ಇದೇ ಅಕ್ಟೋಬರ್‌ನಲ್ಲಿ ಮಗು ಬರಲಿರುವ ಸಂತಸದಲ್ಲಿದ್ದಾರೆ ಹರ್ಷಿಕಾ ದಂಪತಿ. ಬಹುಕಾಲದ ಸ್ನೇಹಿತರಾಗಿದ್ದ ಭುವನ್ ಮತ್ತು ಹರ್ಷಿಕಾ ಕಳೆದ ವರ್ಷ ಆಗಸ್ಟ್ 24ರಂದು ಕೊಡಗಿನಲ್ಲೇ ಅವರ ಸಂಪ್ರದಾಯದ ಪ್ರಕಾರ ಮದುವೆಯಾಗಿದ್ದರು. ಇದೀಗ ವರ್ಷದೊಳಗೆ ಮಗು ಆಗಮಿಸುವ ಸುದ್ದಿ ಕೊಟ್ಟಿದ್ದಾರೆ.ಕೊಡವ ಸಂಪ್ರದಾಯದ ಹಳ್ಳಿ ಮನೆಯಲ್ಲಿ ಕ್ಲಾಸಿಕ್ ಶೈಲಿಯಲ್ಲಿ ದಂಪತಿ ಫೋಟೋಶೂಟ್ ಮಾಡಿಸಿದ್ದಾರೆ. ಇಡೀ ಕುಟುಂಬ ಅದೇ ಶೈಲಿಯಲ್ಲೇ ಕಂಗೊಳಿಸಿದೆ. ಕಪ್ಪು ಮಿಶ್ರಿತ ಬ್ರೌನ್ ಕಲರ್ ಕೊಡವ ಶೈಲಿಯ ಸೀರೆ ಧರಿಸಿರುವ ಹರ್ಷಿಕಾ ಬೇಬಿ ಬಂಪ್ ಪ್ರದರ್ಶಿಸಿದ್ದಾರೆ. ಇನ್ನು ತಂದೆಯಾಗುತ್ತಿರುವ ಭುವನ್ ಪೊನ್ನಣ್ಣ ಕೊಡವ ಸಂಪ್ರದಾಯದ ಕಪ್ಪು ಕೋಟ್ ಧರಿಸಿ-ತಲೆಗೆ ಪೇಟಾ ಧರಿಸಿ ಕೈಯಲ್ಲಿ ಬಂದೂಕು ಹಿಡಿದು ಗರ್ಭಿಣಿ ಪತ್ನಿ ಜೊತೆ ನಿಂತಿದ್ದಾರೆ.ಮದುವೆ ಬಳಿಕ ಹರ್ಷಿಕಾ ನಟನೆಯಿಂದ ಬ್ರೇಕ್ ಪಡೆದುಕೊಂಡು ಸಂಸಾರದ ಕಡೆ ಗಮನ ಕೊಟ್ಟಿದ್ದಾರೆ. ಮಗು ಜನಿಸಿದ ಬಳಿಕ ಮತ್ತೆ ಚಿತ್ರರಂಗದಲ್ಲಿ ಆ?ಯಕ್ಟೀವ್ ಆಗುವ ನಿರೀಕ್ಷೆಯಲ್ಲಿದ್ದಾರೆ. ಒಂದೇ ಊರು ಒಂದೇ ಸಂಪ್ರದಾಯದಲ್ಲಿ ಬೆಳೆದು ಬಂದವರು ಹರ್ಷಿಕಾ ಹಾಗೂ ಭುವನ್ ದಂಪತಿ. ಸ್ಯಾಂಡಲ್‌ವುಡ್‌ನ ಈ ತಾರಾಜೋಡಿ ಸದ್ಯಕ್ಕೆ ತಮ್ಮ ಜೀವನಕ್ಕೆ ಹೊಸ ಸದಸ್ಯನ ಆಗಮನದ ಖುಷಿಯಲ್ಲಿದೆ.

## ವೀಡಾಲ್ ಬ್ರ್ಯಾಂಡ್ ಅಂಬಾಸಿಡರ್ ಆಗಿ ನೇಮಕಗೊಂಡ ಕ್ರಿಕೆಟ್ ದಂತಕಥೆ ಗಂಗೂಲಿ




ಟೈಡ್ ವಾಟರ್ ಆಯಿಲ್ ಕಂ (ಇಂಡಿಯಾ) ಲಿಮಿಟೆಡ್ ಅಧೀನದ ಭಾರತದ ಪ್ರಮುಖ ಲೂಬ್ರಿಕೆಂಟ್ ಬ್ರಾಂಡ್ಗಳಲ್ಲಿ ಒಂದಾಗಿರುವ ವೀಡಾಲ್ ಕ್ರಿಕೆಟ್ ದಂತಕಥೆ ಸೌರವ್ ಗಂಗೂಲಿ ಅವರನ್ನು ತನ್ನ ಬ್ರಾಂಡ್ ಅಂಬಾಸಿಡರ್ ಆಗಿ ನೇಮಕ ಮಾಡಿದೆ. ಈ ಪಾಲುದಾರಿಕೆಯು ವೀಡಾಲ್ ಕಂಪನಿಯು ತನ್ನ ಬ್ರ್ಯಾಂಡ್ ಅಸ್ತಿತ್ವವನ್ನು ಹೆಚ್ಚಿಸಿಕೊಳ್ಳಲು ಮತ್ತು ಭಾರತದಾದ್ಯಂತ ಇರುವ ತನ್ನ ಮಾರುಕಟ್ಟೆ ಸ್ಥಾನವನ್ನು ಗಟ್ಟಿಗೊಳಿಸಲು ನಡೆಸುತ್ತಿರುವ ಪ್ರಯತ್ನದ ಮಹತ್ವದ ಹೆಜ್ಜೆಯಾಗಿದೆ.

ವೀಡಾಲ್ ಬ್ರ್ಯಾಂಡ್ 70ಕ್ಕೂ ಹೆಚ್ಚು ದೇಶಗಳಲ್ಲಿ ಮಾರುಕಟ್ಟೆ ಹೊಂದಿದ್ದು, ಸುಮಾರು ಶತಮಾನಗಳಷ್ಟು ಹಳೆಯ ಬಹಳ ಶ್ರೀಮಂತ ಪರಂಪರೆಯನ್ನು ಹೊಂದಿದೆ. ವೀಡಾಲ್ ವಿಶ್ವಾದ್ಯಂತ ಇರುವ ವರ್ಕ್ ಶಾಪ್ ನೆಟ್ ವರ್ಕ್ ಗಳಲ್ಲಿ ಗಣನೀಯ ಪ್ರಾಮುಖ್ಯತೆಯನ್ನು ಹೊಂದಿದ್ದು, ಅಂತರರಾಷ್ಟ್ರೀಯ ಮಟ್ಟದಲ್ಲಿ 'ವೃತ್ತಿಪರರ ಆಯ್ಕೆ' (ಪ್ರೊಫೆಷನಲ್ಸ್ ಚಾಯ್ಸ್) ಎಂಬ ಹೆಗ್ಗಳಿಕೆಯನ್ನು ಪಡೆದುಕೊಂಡಿದೆ. ಉದ್ಯಮದಲ್ಲಿ ಗೌರವಾನ್ವಿತ ಮತ್ತು ವಿಶ್ವಾಸಾರ್ಹ ಎಂಬ ಮನ್ನಣೆ ಗಳಿಸಿರುವ ವೀಡಾಲ್ ಸಂಸ್ಥೆಯು ಆಟೋಮೋಟಿವ್ ಆಫ್ಟರ್ ಮಾರ್ಕೆಟ್ (ರಿಟೇಲ್) ಮತ್ತು ಸಾಂಸ್ಥಿಕ (ಇನ್ ಸ್ಟಿಟ್ಯೂಷನಲ್) (ಬಿ2ಬಿ) ಎಂಬ ಎರಡೂ ವಿಭಾಗಗಳಿಗೂ ಲೂಬ್ರಿಕೆಂಟ್ ಗಳ ಸಮಗ್ರ ಶ್ರೇಣಿಯನ್ನು ಒದಗಿಸುತ್ತದೆ. ಪ್ಯಾನ್ ಇಂಡಿಯಾ ಹೆಜ್ಜೆಗುರುತನ್ನು ಹೊಂದಿರುವ ವೀಡಾಲ್ ಭಾರತದ ಅತ್ಯಂತ ಪ್ರಮುಖವಾದ ಲೂಬ್ರಿಕೆಂಟ್ ಬ್ರ್ಯಾಂಡ್ಗಳಲ್ಲಿ ಒಂದಾಗಿದೆ.31ನೇ ಮಾರ್ಚ್ 2024 ರಂತೆ ತನ್ನ ಕಾರ್ಯಾಚರಣೆಗಳಿಂದ 1931 ಕೋಟಿ ರೂ.ಗಳ ಏಕೀಕೃತ ಆದಾಯವನ್ನು ಗಳಿಸಿದೆ.

ವೀಡಾಲ್ ಒಂದು ವಿಶ್ವಾಸಾರ್ಹ ಬ್ರ್ಯಾಂಡ್ ಆಗಿದ್ದು, ಕಂಪನಿಯ ಅತ್ಯುತ್ತಮ ಗುಣಮಟ್ಟದ ಉತ್ಪನ್ನಗಳ ಸಂಗ್ರಹವನ್ನು ಅದರ ಚಾನಲ್ ಪಾಲುದಾರರ ನೆಟ್ವರ್ಕ್ ಗಳ ಮೂಲಕ ದೂರ ದೂರದವರೆಗೆ ವಿತರಿಸಲಾಗುತ್ತದೆ. ಆ ಪಾಲುದಾರರಲ್ಲಿ ಹಲವರು ಕಂಪನಿಯೊಂದಿಗೆ ಎರಡು ತಲೆಮಾರುಗಳಿಂದ ಕೆಲಸದಲ್ಲಿ ತೊಡಗಿಸಿಕೊಂಡಿದ್ದಾರೆ. ಪ್ರಾಮಾಣಿಕತೆ, ಪಾರದರ್ಶಕತೆ ಮತ್ತು ಬಾಳಿಕೆ ಬರುವ ಸಂಬಂಧಗಳು ವೀಡಾಲ್ ಹಾದು ಬಂದ ದಾರಿಯ ವೈಶಿಷ್ಟ್ಯಗಳನ್ನು ತಿಳಿಸುತ್ತವೆ, ಅದನ್ನು ಜಾಹೀರಾತು ಅಡಿಬರಹವಾದ 'ರಖೆ ಸಾಫ್, ದಿಲ್ ಸೆ' ಎಂಬ ಘೋಷವಾಕ್ಯದ ಮೂಲಕ ಸಂಕ್ಷಿಪ್ತವಾಗಿ ತಿಳಿಸಲಾಗಿದೆ.

ಈ ಕುರಿತು ಹುಮ್ಮಸ್ಸಿನಿಂದ ಮಾತನಾಡಿದ ಟೈಡ್ ವಾಟರ್ ಆಯಿಲ್ ಕೋ (ಇಂಡಿಯಾ) ಲಿಮಿಟೆಡ್ನ ವ್ಯವಸ್ಥಾಪಕ ನಿರ್ದೇಶಕ ಶ್ರೀ ಅರಿಜಿತ್ ಬಸು, ಸೌರವ್ ಗಂಗೂಲಿಯಂತಹ ಕ್ರಿಕೆಟ್ ದಿಗ್ಗಜ ನಮ್ಮ ಬ್ರಾಂಡ್ ಅಂಬಾಸಿಡರ್ ಆಗಿ ನಮ್ಮೊಂದಿಗೆ ಸೇರಿರುವುದಕ್ಕೆ ನಾವು ಸಂತೋಷ ಪಡುತ್ತೇವೆ. ನಾವು ಇಂದು ಕಾಣುತ್ತಿರುವ ಭಾರತ ಕ್ರಿಕೆಟ್ ತಂಡದ ಗೆಲುವಿನ ಆಟಿಟ್ಯೂಡ್ ಅನ್ನು ರೂಪಿಸಿರುವುದರ ಹಿಂದೆ ಒಬ್ಬ ದಂತಕಥೆಯ ನಿಜವಾದ ಗುಣಗಳಾದ ಅವರ ನಾಯಕತ್ವ ಗುಣ, ಬದ್ಧತೆ ಮತ್ತು ದೃಢತೆ ಎಲ್ಲವೂ ಕಾರಣವಾಗಿದೆ. ಪ್ರಾಮಾಣಿಕತೆ ಮತ್ತು ಆತ್ಮ ವಿಶ್ವಾಸದ ಮೇಲೆ ಸ್ಥಾಪಿತವಾಗಿರುವ ಬ್ರಾಂಡ್ ಆಗಿರುವ ಸೌರವ್ ಗಂಗೂಲಿ ಅವರು, ವೀಡಾಲ್ ಬಲವಾಗಿ ಪ್ರತಿಧ್ವನಿಸುವ ಮೌಲ್ಯಗಳನ್ನು ಗಟ್ಟಿಗೊಳಿಸಲು ಹಾಗೂ ಕಾರ್ಯ ನಿರ್ವಹಣೆಯನ್ನು ಉತ್ತಮಗೊಳಿಸಿ ಸಾಧನೆ ಮಾಡಲು ಎಲ್ಲರಿಗೂ ಸ್ಫೂರ್ತಿ ನೀಡಲಿದ್ದಾರೆ. ಈ ಸಹಭಾಗಿತ್ವವು ನಾವು ಭವಿಷ್ಯದ ಕಡೆಗೆ ಮುನ್ನಡೆಯುವಾಗ ನಮಗೆ ಉತ್ತಮವಾದ ಪ್ರಚೋದನೆಯನ್ನು ನೀಡಿ ಮುನ್ನಡೆಸಲಿದೆ ಎಂದು ನಾವು ನಂಬುತ್ತೇವೆ ಎಂದು ಹೇಳಿದರು. ಈ ಸಹಭಾಗಿತ್ವದ ಕುರಿತು ಮಾತನಾಡಿದ ಕ್ರಿಕೆಟ್ ದಿಗ್ಗಜ ಸೌರವ್ ಗಂಗೂಲಿ, ವೀಡಾಲ್ ಜೊತೆಗಿನ ನನ್ನ ಒಡನಾಟವು ಶ್ರೇಷ್ಠತೆ, ನಾವೀನ್ಯತೆ ಮತ್ತು ವಿಶ್ವಾಸಾರ್ಹತೆ ಕಡೆಗಿನ ಬದ್ಧತೆಯನ್ನು ಪ್ರತಿನಿಧಿಸುತ್ತದೆ. ವಾಹನೋದ್ಯಮದಲ್ಲಿ ಅಥವಾ ಅಟೋಮೋಟಿವ್ ಇಂಡಸ್ಟ್ರಿಯಲ್ಲಿ ಉತ್ತಮ-ಗುಣಮಟ್ಟಕ್ಕೆ ಮತ್ತು ಕಾರ್ಯಕ್ಷಮತೆಗಾಗಿ ಸಾಕ್ಷಿಯಾಗಿದೆ ವೀಡಾಲ್ ನಿಂತಿದೆ. ನಾನು ಈ ಮೌಲ್ಯಗಳನ್ನು ನನ್ನ ಕೆಲಸಗಳ ಪ್ರತಿ ಅಂಶದಲ್ಲೂ ಕಾರ್ಯಗತಗೊಳಿಸಲು ಬದ್ಧನಾಗಿದ್ದೇನೆ. ಇಬ್ಬರೂ ಜೊತೆಯಾಗಿ ನಮ್ಮಲ್ಲಿರುವ ಅತ್ಯುತ್ತಮವಾದ ಉತ್ಪನ್ನವನ್ನು ಪ್ರದರ್ಶಿಸುವ ಮೂಲಕ ನಮ್ಮ ಗ್ರಾಹಕರನ್ನು ಸಂಪರ್ಕಿಸಲು ಮತ್ತು ಅವರನ್ನು ಪ್ರೇರೇಪಿಸಲು ನಾವು ಪ್ರಯತ್ನಿಸುತ್ತೇವೆ ಎಂದು ಹೇಳಿದರು.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ದೈವಾನುಗ್ರಹದಿಂದ ಅನುಕೂಲ, ವ್ಯಾಪಾರ ವ್ಯವಹಾರಗಳಲ್ಲಿ ಚೇತರಿಕೆ, ಆಹಾರ ಸೇವನೆಯಲ್ಲಿ ಎಚ್ಚರ, ಅಧಿಕ ಖರ್ಚು.

**ವೃಷಭ:** ಮನಸ್ಸಿನಲ್ಲಿ ದುಷ್ಟ ಪರಿಣಾಮ, ಸ್ಥಳ ಬದಲಾವಣೆ, ಆಂತರಿಕ ಕಲಹ, ಸ್ಥಿರಾಸ್ತಿ ಮಾರಾಟ, ದಂಡ ಕಟ್ಟುವಿರಿ.

**ಮಿಥುನ:** ಬೇಡದ ವಿಷಯಗಳಿಂದ ದೂರವಿರಿ, ಸಾಲಭಾದೆ, ಮನಕ್ಲೇಶ, ಸಾಮಾನ್ಯ ಸೌಖ್ಯಕ್ಕೆ ದಕ್ಕೆ

**ಕಟಕ:** ಕಮಿಷನ್ ಏಜೆಂಟ್‌ಗಳಿಗೆ ಹೆಚ್ಚಿನ ಕೆಲಸ, ವಾಹನ ರಿಪೇರಿ, ಶತ್ರು ಭಾದೆ, ಅತಿಯಾದ ನೋವು, ವೈದ್ಯರ ಭೇಟಿ

**ಸಿಂಹ:** ಸ್ತ್ರೀ ಸಮಾನ ವ್ಯಕ್ತಿಯಿಂದ ಶುಭ, ಗಣ್ಯ ವ್ಯಕ್ತಿಗಳ ಭೇಟಿ, ಸುಖ ಭೋಜನ, ಊರೂರು ಸುತ್ತಾಟ, ಭೋಗ ವಸ್ತು ಪ್ರಾಪ್ತಿ.

**ಕನ್ಯಾ:** ಯತ್ನ ಕಾರ್ಯಾನುಕೂಲ, ಚಂಚಲ ಸ್ವಭಾವ, ಪರರ ಮಾತಿಗೆ ಕಿವಿ ಕೊಡಬೇಡಿ, ದಾಂಪತ್ಯದಲ್ಲಿ ನೆಮ್ಮದಿ

**ತುಲಾ:** ಮಾಡುವ ಕೆಲಸಗಳಲ್ಲಿ ವಿಳಂಬ, ಆಲಸ್ಯ ಮನೋಭಾವ, ಮನಕ್ಲೇಶ, ವಿದ್ಯಾರ್ಥಿಗಳಲ್ಲಿ ಹಿನ್ನಡೆ, ಕೋಪ ಜಾಸ್ತಿ.

**ವೃಶ್ಚಿಕ:** ಕುತಂತ್ರದಿಂದ ಹಣ ಸಂಪಾದನೆ, ಉದ್ಯೋಗದಲ್ಲಿ ಕಿರಿಕಿರಿ, ಗೆಳೆಯರಿಂದ ಅನರ್ಥ, ಸಲ್ಲದ ಅಪವಾದ ಎಚ್ಚರ.

**ಧನಸ್ಸು:** ಮಿತ್ರರೊಡನೆ ವಿಶೇಷ ಸಂವಾದ,ನಿಮ್ಮ ಪ್ರಯತ್ನಗಳಿಗೆ ಉತ್ತಮ ಫಲ, ಅಲ್ಪ ಆದಾಯ ಅಧಿಕ ಖರ್ಚು

**ಮಕರ:** ಸಜ್ಜನರ ಸಹವಾಸದಿಂದ ಕೀರ್ತಿ, ಮಾತಾಪಿತರರಲ್ಲಿ ಪ್ರೀತಿ ವಾತ್ಸಲ್ಯ, ಧರ್ಮಕಾರ್ಯ, ಉದ್ಯೋಗದಲ್ಲಿ ಅಭಿವೃದ್ಧಿ.

**ಕುಂಭ:** ಸರ್ಕಾರಿ ಕೆಲಸಗಳಲ್ಲಿ ಪ್ರಗತಿ, ಅಕಾಲ ಭೋಜನ, ದಿನಸಿ ವ್ಯಾಪಾರಿಗಳಿಗೆ ಲಾಭ, ಹಿತ ಶತ್ರು ಭಾದೆ

**ಮೀನ:** ಅನಿರೀಕ್ಷಿತ ಖರ್ಚು, ಉದರಭಾದೆ, ಆರ್ಥಿಕ ಪರಿಸ್ಥಿತಿ ಬಿಕಟ್ಟು, ಹೇಳಲಾರದಂತಹ ಸಂಕಟ, ಮಾತಿನ ಚಕಮಕಿ.

## ವಿಶ್ವಕ್ರೀಡಾ ಪತ್ರಕರ್ತರ ದಿನ

ವಿಶ್ವ ಕ್ರೀಡಾ ಪತ್ರಕರ್ತರ ದಿನವನ್ನು ಪ್ರತಿ ವರ್ಷ ಜುಲೈ 2 ರಂದು ಆಚರಿಸಲಾಗುತ್ತದೆ. ಅಂತರಾಷ್ಟ್ರೀಯ ಕ್ರೀಡಾ ಪತ್ರಕರ್ತರ ದಿನ ಎಂದೂ ಕರೆಯಲಾಗುತ್ತದೆ, ಈ ರಜಾದಿನವನ್ನು 1994 ರಲ್ಲಿ ಇಂಟರ್ನ್ಯಾಷನಲ್ ಸ್ಪೋರ್ಟ್ಸ್ ಪ್ರೆಸ್ ಅಸೋಸಿಯೇಷನ್ ತನ್ನ 70 ನೇ ವಾರ್ಷಿಕೋತ್ಸವವನ್ನು ಆಚರಿಸಲು ರಚಿಸಿತು. ಕ್ರೀಡಾ ಪತ್ರಿಕೋದ್ಯಮವು 1800 ರ ದಶಕದಲ್ಲಿ ಅಭಿವೃದ್ಧಿ ಹೊಂದಿತು ಆದರೆ ಗಣ್ಯ ಕ್ರೀಡೆಗಳ ಮೇಲೆ ಕೇಂದ್ರೀಕೃತವಾಗಿತ್ತು ಮತ್ತು ಕ್ರೀಡಾ ಘಟನೆಗಳ ಸಾಮಾಜಿಕ ಸಂದರ್ಭವನ್ನು ವರದಿ ಮಾಡುವಲ್ಲಿ ಹೆಚ್ಚು ಕೇಂದ್ರೀಕೃತವಾಗಿತ್ತು. 1920 ರ ದಶಕದಲ್ಲಿ, ವೃತ್ತಪತ್ರಿಕೆಗಳು ಕ್ರೀಡಾ ಪತ್ರಿಕೋದ್ಯಮಕ್ಕೆ ಹೆಚ್ಚು ಸಮಯ ಮತ್ತು ಸ್ಥಳವನ್ನು ಮೀಸಲಿಟ್ಟದ್ದರಿಂದ ವೃತ್ತಿಯು ರೂಪುಗೊಂಡಿತು.

1994 ರಲ್ಲಿ, ಇಂಟರ್‌ನ್ಯಾಷನಲ್ ಸ್ಪೋರ್ಟ್ಸ್ ಪ್ರೆಸ್ ಅಸೋಸಿಯೇಷನ್ ತನ್ನ 70 ನೇ ವಾರ್ಷಿಕೋತ್ಸವದ ಗೌರವಾರ್ಥವಾಗಿ ಮೊದಲ ಬಾರಿಗೆ ವಿಶ್ವ ಕ್ರೀಡಾ ಪತ್ರಕರ್ತರ ದಿನವನ್ನು ಆಚರಿಸಿತು. 1924 ರಲ್ಲಿ, ಎ.ಐ.ಪಿ.ಎಸ್. ಐ' Association Internationale de la Presse Sportive ಆಗಿ ಫ್ರಾನ್ಸ್‌ನ ಪ್ಯಾರಿಸ್‌ನಲ್ಲಿ ಸ್ಥಾಪಿಸಲಾಯಿತು. ಆದಾಗ್ಯೂ, ಸಂಘವು ಈಗ ಸ್ವಿಟ್ಜರ್ಲೆಂಡ್ನ ಒಲಂಪಿಕ್ ರಾಜಧಾನಿ ಲೌಸನ್ನೆಯಲ್ಲಿ ಪ್ರಧಾನ ಕಛೇರಿಯನ್ನು ಹೊಂದಿದೆ. ಎ.ಐ.ಪಿ.ಎಸ್. ಇದು 160 ಸದಸ್ಯ ಸಂಘಗಳನ್ನು ಹೊಂದಿರುವ ಸ್ವತಂತ್ರ ಸಂಸ್ಥೆಯಾಗಿದ್ದು, ಸದಸ್ಯತ್ವ ಶುಲ್ಕಗಳು ಮತ್ತು ಇತರ ಅಂತರರಾಷ್ಟ್ರೀಯ ಸಂಸ್ಥೆಗಳು ಮತ್ತು ಒಕ್ಕೂಟಗಳ ಕೊಡುಗೆಗಳ ಮೂಲಕ ಹಣವನ್ನು ಪಡೆಯುತ್ತದೆ.

ಅದರ ವೆಬ್ಸೈಟ್ ಪ್ರಕಾರ, A.I.P.S ನ ಗುರಿ ಕ್ರೀಡೆಯನ್ನು ರಕ್ಷಿಸುವಲ್ಲಿ ಅದರ ಸದಸ್ಯ ಸಂಘಗಳ ನಡುವಿನ ಸಹಕಾರ ಮತ್ತು ಸದಸ್ಯರ ವೃತ್ತಿಪರ ಹಿತಾಸಕ್ತಿಗಳನ್ನು ಹೆಚ್ಚಿಸಲು, ಎಲ್ಲಾ ರಾಷ್ಟ್ರಗಳ ಕ್ರೀಡಾ ಪತ್ರಕರ್ತರ ನಡುವಿನ ಸ್ನೇಹ, ಒಗ್ಗಟ್ಟು ಮತ್ತು ಸಾಮಾನ್ಯ ಹಿತಾಸಕ್ತಿಗಳನ್ನು ಬಲಪಡಿಸಲು ಮತ್ತು ಸದಸ್ಯರಿಗೆ ಸಾಧ್ಯವಾದಷ್ಟು ಉತ್ತಮ ಕೆಲಸದ ಪರಿಸ್ಥಿತಿಗಳನ್ನು ಖಚಿತಪಡಿಸಿಕೊಳ್ಳಲು.

ಕ್ರೀಡಾ ಪತ್ರಿಕೋದ್ಯಮವು ಕ್ರೀಡಾ-ಕೇಂದ್ರಿತ ವಿಷಯಗಳ ಮೇಲೆ ಕೇಂದ್ರೀಕರಿಸುವ ಒಂದು ರೀತಿಯ ಬರವಣಿಗೆಯಾಗಿದೆ. ಕ್ರೀಡಾ ಪತ್ರಿಕೋದ್ಯಮವು 1800 ರ ದಶಕದಲ್ಲಿ ವಿಶೇಷವಾಗಿ 1820 ಮತ್ತು 1830 ರ ದಶಕಗಳಲ್ಲಿ ಅಭಿವೃದ್ಧಿಗೊಂಡಿತು. ಆರಂಭದಲ್ಲಿ, ವರದಿಗಾರಿಕೆಯು ಮುಖ್ಯವಾಗಿ ಕುದುರೆ ರೇಸಿಂಗ್ ಮತ್ತು ಬಾಕ್ಸಿಂಗ್ನಂತಹ ಗಣ್ಯ ಕ್ರೀಡೆಗಳ ಮೇಲೆ ಕೇಂದ್ರೀಕೃತವಾಗಿತ್ತು, ಮುಖ್ಯವಾಗಿ ಮೇಲ್ವರ್ಗದವರನ್ನು ಗುರಿಯಾಗಿಸಿಕೊಂಡಿದೆ ಏಕೆಂದರೆ ಪತ್ರಿಕೆಗಳು ಜನಸಾಮಾನ್ಯರ ವ್ಯಾಪ್ತಿಯನ್ನು ಮೀರಿವೆ. ಆದಾಗ್ಯೂ, ಪೆನ್ನಿ ಪ್ರೆಸ್ನ ಅಭಿವೃದ್ಧಿಯು ಕೈಗೆಟುಕುವ ದರದಲ್ಲಿ ಪತ್ರಿಕೆ ಉತ್ಪಾದನೆಗೆ ಬಾಗಿಲು ತೆರೆಯಿತು, ಅಂತಿಮವಾಗಿ ಅವುಗಳನ್ನು ಸಮಾಜದ ಕೆಳಗಿನ ಸ್ತರಗಳಿಗೆ ಹೆಚ್ಚು ಪ್ರವೇಶಿಸುವಂತೆ ಮಾಡಿತು. 20 ನೇ ಶತಮಾನವು ಕ್ರೀಡಾ ಪತ್ರಿಕೋದ್ಯಮದ ಜನಪ್ರಿಯತೆಯಲ್ಲಿ ಭಾರಿ ಉತ್ಕರ್ಷಕ್ಕೆ ಸಾಕ್ಷಿಯಾಯಿತು. 1880 ರಲ್ಲಿ, ಪತ್ರಿಕೆಗಳಲ್ಲಿ ಕೇವಲ 0.4% ಜಾಗವನ್ನು ಕ್ರೀಡೆಗಳಿಗೆ ಮೀಸಲಿಡಲಾಗಿತ್ತು. 1920 ರ ಹೊತ್ತಿಗೆ ಈ ಅಂಕಿ ಅಂಶವು 20% ಕ್ಕೆ ಏರಿತು, ಏಕೆಂದರೆ ಪತ್ರಿಕೆಗಳು ಕ್ರೀಡಾ ಪ್ರಸಾರಕ್ಕಾಗಿ ಪ್ರತ್ಯೇಕವಾಗಿ ವರದಿಗಾರರನ್ನು ನೇಮಿಸಿಕೊಳ್ಳಲು ಪ್ರಾರಂಭಿಸಿದವು.

# ರಾಹುಲ್ ಭಾಷಣದ ವಿರುದ್ಧ ಸಿಡಿದೆದ್ದ ಕೇಂದ್ರ ಸಚಿವ ರಿಜಿಜು



**ನವದೆಹಲಿ:** ಹಿಂದುತ್ವ ಎಂದರೆ ದ್ವೇಷ, ಸುಳ್ಳುಗಳನ್ನು ಹರಡುವುದಲ್ಲ ಎಂದು ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಇಂದು ಸಂಸತ್ನಲ್ಲಿ ಅಬ್ಬರದ ಭಾಷಣ ಮಾಡಿದರು. ಕೇಂದ್ರ ಸರ್ಕಾರದ ವಿರುದ್ಧ ರಾಹುಲ್ ತೀಕ್ಷ್ಣವಾಗ್ದಾಳಿ ನಡೆಸಿದರು.

ರಾಹುಲ್ ಭಾಷಣದ ವಿರುದ್ಧ ಕೇಂದ್ರ ಸಚಿವ ಕಿರಣ್ ರಿಜಿಜು ರಾಹುಲ್ ಕಿಡಿಕಾರಿದ್ದು, ಸಂಸತ್ ನಲ್ಲಿ ಹಿಂದೂಗಳನ್ನು ಅವಮಾನಿಸುವುದು ಕಾಂಗ್ರೆಸ್ನ ಸಂಸ್ಕೃತಿಯಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಸಂಸತ್ನಲ್ಲಿ ಹೇಗೆ ಮಾತನಾಡಬೇಕು ಎಂದು ಕಾಂಗ್ರೆಸ್ ನ ಕೆಲ ಹಿರಿಯ ನಾಯಕರು ರಾಹುಲ್ ಗಾಂಧಿಗೆ ತಿಳುವಳಿಕೆ ಹೇಳಬೇಕು ಎಂದು ಒತ್ತಾಯಿಸಿದರು.

ಲೋಕಸಭೆ ಕಲಾಪ, ನಿಯಮಗಳ ಬಗ್ಗೆ ರಾಹುಲ್ ಗೆ ಕಿಂಚತ್ತೂ ತಿಳುವಳಿಕೆ ಇಲ್ಲ. ಸಂಸತ್ ನಲ್ಲಿ ರಾಷ್ಟ್ರಪತಿ ಅವರಿಗೆ ವಂದನಾ ನಿರ್ಣಯದ ವೇಳೆ ಔಪಚಾರಿಕವಾಗಿಯೂ ರಾಹುಲ್ ಧನ್ಯವಾದ ಹೇಳಿಲ್ಲ ಎಂದು ಟೀಕಿಸಿದರು.

ಕಡತದಿಂದ ರಾಹುಲ್ ಗಾಂಧಿಯ ಭಾಷಣವನ್ನು ತೆಗೆದು ಹಾಕುವಂತೆಯೂ ಆಡಳಿತರೂಢ ನಾಯಕರು ಒತ್ತಾಯಿಸಿದ್ದಾರೆ. ನೀಟ್, ಅಗ್ನಿವೀರ್, ಮಣಿಪುರ, ಹಿಂದುತ್ವ ಮುಂತಾದ ವಿಚಾರಗಳ ಕುರಿತು ರಾಹುಲ್ ಪ್ರಖರವಾಗಿ ಭಾಷಣ ಮಾಡಿದ್ದರು.

# ಟರ್ಕಿಯ ರೆಸ್ಟೋರೆಂಟ್‌ನಲ್ಲಿ ಟ್ಯಾಂಕ್ ಸ್ಫೋಟ



**ಟರ್ಕಿ:** ಟರ್ಕಿಯ ಇಜ್ಮಿರ್ನ್ ನಲ್ಲಿರುವ ರೆಸ್ಟೋರೆಂಟ್ ಒಂದರಲ್ಲಿ ಭೀಕರ ಸ್ಫೋಟ ಸಂಭವಿಸಿದ ಪರಿಣಾಮ ಕನಿಷ್ಠ ಐವರು ಮೃತಪಟ್ಟಿದ್ದು 63 ಜನರು ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಗಾಯಗೊಂಡ ಎಲ್ಲರನ್ನು ಹತ್ತಿರದ ಆಸ್ಪತ್ರೆಗೆ ದಾಖಲಿಸಲಾಗಿದೆ. ಸಾವಿನ ಸಂಖ್ಯೆ ಹೆಚ್ಚಾಗುವ ಸಾಧ್ಯತೆ ಇದೆ ಎನ್ನಲಾಗುತ್ತಿದೆ.

ಗಾಯಗೊಂಡವರಲ್ಲಿ ಹಲವರ ಸ್ಥಿತಿ ಗಂಭೀರವಾಗಿದೆ ಎಂದು ಹೇಳಲಾಗಿದೆ. ರೆಸ್ಟೋರೆಂಟ್ ನಲ್ಲಿದ್ದ ಟ್ಯಾಂಕ್ ನಲ್ಲಿ ದೊಡ್ಡ ಸ್ಫೋಟ ಸಂಭವಿಸಿದೆ. ಘಟನೆಯಲ್ಲಿ ಐವರು ಮೃತಪಟ್ಟು, 63 ಮಂದಿ ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಈ ಘಟನೆಯು ರೆಸ್ಟೋರೆಂಟ್ ಲ್ಲಿ ಅಳವಡಿಸಲಾದ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಸ್ಫೋಟವು ಎಷ್ಟು ತೀವ್ರವಾಗಿತ್ತೆಂದರೆ, ರಸ್ತೆಯೂ ಹಾನಿಗೊಳಗಾಗಿತ್ತು ಮತ್ತು ಸುತ್ತಲೂ ದೊಡ್ಡ ಸ್ಫೋಟದ ಶಬ್ದದಿಂದಾಗಿ ಜನರು ಭಯಭೀತರಾಗಿದ್ದರು. ಆದಾಗ್ಯೂ, ಹತ್ತಿರದ ಕಟ್ಟಡಗಳಿಗೆ ಸಣ್ಣ ಹಾನಿ ಮಾತ್ರ ಸಂಭವಿಸಿದೆ. 20 ರಕ್ಷಣಾ ಕಾರ್ಯಕರ್ತರನ್ನು ತಕ್ಷಣ ಘಟನಾ ಸ್ಥಳಕ್ಕೆ ಕಳುಹಿಸಲಾಗಿದೆ ಎಂದು ಟರ್ಕಿಯ ಆಂತರಿಕ ಸಚಿವ ಅಲಿ ಯೆರ್ಲಿಕಾಯಾ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

ಇಜ್ಮಿರ್ ಗವರ್ನರ್ ಸುಲೇಮಾನ್ ಎಲ್ಬನ್ ಆಸ್ಪತ್ರೆಯಲ್ಲಿ ಗಾಯಗೊಂಡವರನ್ನು ಭೇಟಿಯಾದರು. ಗಾಯಗೊಂಡವರಲ್ಲಿ 40 ಜನರನ್ನು ಚಿಕಿತ್ಸೆಯ ನಂತರ ಬಿಡುಗಡೆ ಮಾಡಲಾಗಿದೆ ಎಂದು ಹೇಳಿದರು.

# ಕತಾರ್ ಪ್ರಧಾನಿ ಅಲ್ ಥಾನಿ ಭೇಟಿ ಮಾಡಿದ ವಿದೇಶಾಂಗ ಸಚಿವ ಜೈಶಂಕರ್

**ಕತಾರ್:** ವಿದೇಶಾಂಗ ಸಚಿವ ಎಸ್ ಜೈಶಂಕರ್ ಅವರು ಕತಾರ್ ಪ್ರಧಾನಿ ಮೊಹಮ್ಮದ್ ಬಿನ್ ಅಬ್ದುಲ್ರಹ್ಮಾನ್ ಬಿನ್ ಜಸ್ಸಿಮ್ ಅಲ್ ಥಾನಿ ಅವರನ್ನು ದೋಹಾದಲ್ಲಿ ಭೇಟಿ ಮಾಡಿದರು. ಈ ವೇಳೆ ವ್ಯಾಪಾರ, ಹೂಡಿಕೆ, ಇಂಧನ, ತಂತ್ರಜ್ಞಾನ, ಸಂಸ್ಕೃತಿ ಮತ್ತು ಜನರ ನಡುವಿನ ಸಂಬಂಧಗಳು ಸೇರಿದಂತೆ ದ್ವಿಪಕ್ಷೀಯ ಸಂಬಂಧಗಳ ಕುರಿತು ಚರ್ಚಿಸಿದರು ಎನ್ನಲಾಗಿದೆ. ಒಂದು ದಿನದ ಭೇಟಿಗಾಗಿ ದೋಹಾಗೆ ಆಗಮಿಸಿದ ಜೈಶಂಕರ್ ಅವರು ಶೇಖ್ ಮೊಹಮ್ಮದ್ ಅವರೊಂದಿಗೆ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಬಗ್ಗೆ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು. ಜೈಶಂಕರ್ ಅವರು 'ಎಕ್ಸ್'ನಲ್ಲಿ ಪೋಸ್ಟ್ ಮಾಡಿದ್ದು ಕತಾರ್ನ ಪ್ರಧಾನ ಮಂತ್ರಿ ಮತ್ತು ವಿದೇಶಾಂಗ ಸಚಿವ ಥಾನಿ ಅವರನ್ನು ದೋಹಾದಲ್ಲಿ ಭೇಟಿಯಾಗಲು ಸಂತೋಷವಾಗಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಶುಭ ಹಾರೈಕೆಗಳನ್ನು ಅಮೀರ್ ಅವರಿಗೆ ತಿಳಿಸಿದರು ಎಂದು ಬರೆದುಕೊಂಡಿದ್ದಾರೆ.ನಾವು ರಾಜಕೀಯ, ವ್ಯಾಪಾರ, ಹೂಡಿಕೆ, ಇಂಧನ, ತಂತ್ರಜ್ಞಾನ, ಸಂಸ್ಕೃತಿ ಮತ್ತು ಜನರ ನಡುವಿನ ಸಂಬಂಧಗಳ ಮೇಲೆ ಕೇಂದ್ರೀಕರಿಸುವ ದ್ವಿಪಕ್ಷೀಯ ಸಂಬಂಧಗಳನ್ನು ಪರಿಶೀಲಿಸಿದ್ದೇವೆ ಎಂದು ಅವರು ಹೇಳಿದರು. ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು. ಗಾಜಾ ಪರಿಸ್ಥಿತಿ ಕುರಿತಂತೆ ಚರ್ಚೆ ನಡೆಸಿದರು.ವಿದೇಶಾಂಗ ಸಚಿವರು, ಭಾರತ-ಕತಾರ್ ಸಂಬಂಧಗಳನ್ನು ಮತ್ತಷ್ಟು ಸುಧಾರಿಸಲು ನಾವು ಎದುರು ನೋಡುತ್ತಿದ್ದೇವೆ ಮತ್ತು ಪರಸ್ಪರ ಹಿತಾಸಕ್ತಿಯ ವಿಷಯಗಳ ಕುರಿತು ಮಾತುಕತೆಯನ್ನು ಮುಂದುವರಿಸುತ್ತೇವೆ ಎಂದು ಹೇಳಿದರು



# ವಿರೋಧ ಪಕ್ಷದ ನಾಯಕನನ್ನು ಗಂಭೀರವಾಗಿ ಪರಿಗಣಿಸಬೇಕು: ಪ್ರಧಾನಿ ನರೇಂದ್ರ ಮೋದಿ



**ನವದೆಹಲಿ:** ನಾನು ವಿರೋಧ ಪಕ್ಷದನಾಯಕನನ್ನು ಗಂಭೀರವಾಗಿ ಪರಿಗಣಿಸಬೇಕಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಇಂದು ಲೋಕಸಭೆಯಲ್ಲಿ ಹೇಳಿದ್ದು, ಈ ವೇಳೆ ಬಿಜೆಪಿ ನಾಯಕರು ನಗೆಗಡಲಿನಲ್ಲಿ ತೇಲಾಡಿದ್ದಾರೆ.

ವಿಪಕ್ಷ ನಾಯಕ ರಾಹುಲ್ ಗಾಂಧಿ ತಮ್ಮನ್ನು ಹಿಂದೂಗಳು ಎಂದು ಕರೆದುಕೊಳ್ಳುವವರು ಹಿಂಸೆಯ ಬಗ್ಗೆ ಮಾತ್ರ ಮಾತನಾಡುತ್ತಾರೆ ಎಂದು ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಈ ಹೇಳಿಕೆ ಲೋಕಸಭೆಯಲ್ಲಿ ಗದ್ದಲಕ್ಕೆ ಕಾರಣವಾಯಿತು.

ಈ ಸಂದರ್ಭ ಮಾತನಾಡಿದ ಮೋದಿ, ನಾನು ವಿರೋಧ ಪಕ್ಷದ ನಾಯಕನನ್ನು ಗಂಭೀರವಾಗಿ ಪರಿಗಣಿಸಬೇಕು ಎಂಬುದನ್ನು ಪ್ರಜಾಪ್ರಭುತ್ವ ಮತ್ತು ಸಂವಿಧಾನ ನನಗೆ ಕಲಿಸಿದೆ ಎಂದು ಗೇಲಿ ಮಾಡಿದ್ದಾರೆ. ಈ ಸಂದರ್ಭ ಸ್ಪೀಕರ್ ಸೇರಿದಂತೆ ಬಿಜೆಪಿ ನಾಯಕರು ಕಾಂಗ್ರೆಸ್ ಹಾಗೂ ರಾಹುಲ್ ಗಾಂಧಿ ವಿರುದ್ಧ ನಸುನಕ್ಕಿದ್ದಾರೆ.

# ದಕ್ಷಿಣ ಸ್ವಿಟ್ಜರ್‌ಲೆಂಡ್‌ನಲ್ಲಿ ಪ್ರವಾಹ

**ಸ್ವಿಟ್ಜರ್‌ಲೆಂಡ್:** ದಕ್ಷಿಣ ಸ್ವಿಟ್ಜರ್‌ಲೆಂಡ್‌ನಲ್ಲಿ ಸಂಭವಿಸಿದ ಭೀಕರ ಪ್ರವಾಹದಲ್ಲಿ ನಾಲ್ಕಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದು ಹಲವರು ಕಾಣೆಯಾಗಿದ್ದಾರೆ ಎಂದು ಸ್ಥಳೀಯ ಪೊಲೀಸರು ಮತ್ತು ಸ್ವಿಸ್ ರಾಜ್ಯ ಮಾಧ್ಯಮಗಳನ್ನು ಉಲ್ಲೇಖಿಸಿ ಸಿಎನ್‌ಎನ್ ವರದಿ ಮಾಡಿದೆ.

ಮ್ಯಾಗಿ ಕಣಿವೆಯಲ್ಲಿ ಸಂಭವಿಸಿದ ಭೂಕುಸಿತದಲ್ಲಿ ಮೂವರು ಸಾವನ್ನಪ್ಪಿದ್ದಾರೆ, ಸಾಸ್-ಗ್ರಂಡ್ನ ಹೋಟೆಲ್ನಲ್ಲಿ ಇನ್ನೊಬ್ಬ ವ್ಯಕ್ತಿಯ ಶವ ಪತ್ತೆಯಾಗಿದೆ ಎಂದು ಸ್ವಿಟ್ಜರ್ಲೆಂಡ್ನ ವಾಲೈಸ್ ಕ್ಯಾಂಟನ್ ಪೊಲೀಸರು ತಿಳಿಸಿದ್ದಾರೆ, ಆರಂಭಿಕ ಸಂಶೋಧನೆಗಳು ವೇಗವಾಗಿ ಏರುತ್ತಿರುವ ನೀರಿನಿಂದ ಅವರು ಭಯಭೀತರಾಗಿದ್ದರು ಎಂದು ಸೂಚಿಸಿದೆ ಎಂದು ಸಿಎನ್‌ಎನ್ ವರದಿ ಮಾಡಿದೆ.

ಇದಲ್ಲದೆ, ಶನಿವಾರ ಸಂಜೆಯಿಂದ ಬಿನ್ ಗ್ರಾಮದಲ್ಲಿ ಕಾಣೆಯಾದ 52 ವರ್ಷದ ವ್ಯಕ್ತಿಗಾಗಿ ಶೋಧ ನಡೆಯುತ್ತಿದೆ ಎಂದು ವಲೈಸ್ ಕ್ಯಾಂಟೋನಲ್ ಪೊಲೀಸರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಬಿನ್ ನಲ್ಲಿ ಕಾಣೆಯಾದ ವ್ಯಕ್ತಿ ಮತ್ತು ಸಾಸ್-ಗ್ರಂಡ್ ನಲ್ಲಿ ಶವವಾಗಿ ಪತ್ತೆಯಾದ ವ್ಯಕ್ತಿಯ ಪ್ರಕರಣದ ಬಗ್ಗೆ ಪಬ್ಲಿಕ್ ಪ್ರಾಸಿಕ್ಯೂಟರ್ ಕಚೇರಿ ತನಿಖೆ ಆರಂಭಿಸಿದೆ ಎಂದು ಪೊಲೀಸರು ತಿಳಿಸಿದ್ದಾರೆ.



# ಹರಿಯಾಣದಲ್ಲಿ ಕಾಂಗ್ರೆಸ್ ನಾಯಕನ ಸಹೋದರನ ಗುಂಡಿಕ್ಕಿ ಹತ್ಯೆ

**ನವದೆಹಲಿ:** ಜಮೀನು ವಿವಾದದ ವಿಚಾರವಾಗಿ ಹರಿಯಾಣದ ಫರಿದಾಬಾದ್‌ನಲ್ಲಿ ಕಾಂಗ್ರೆಸ್ ಮುಖಂಡರೊಬ್ಬರ ಸಹೋದರನನ್ನು ಗುಂಡಿಕ್ಕಿ ಹತ್ಯೆ ಮಾಡಲಾಗಿದೆ. ಹತ್ಯೆಗೀಡಾದ ವ್ಯಕ್ತಿಯನ್ನು ಕುನಾಲ್ ಭದನಾ ಎಂದು ಗುರುತಿಸಲಾಗಿದೆ. ಮಸೀದಿ ಚೌಕ್ ಬಳಿ ಕುನಾಲ್ ನಿಂತಿದ್ದಾಗ ದುಷ್ಕರ್ಮಿಗಳು ಅವರ ಸಮೀಪ ಬಂದು ಗಲಾಟೆ ಮಾಡಿದ್ದಾರೆ. ಬಳಿಕ ಅವರನ್ನು ಗುಂಡಿಕ್ಕಿ ಹತ್ಯೆಗೈದಿದ್ದಾರೆ. ಹತ್ಯೆಗೈದ ದೃಶ್ಯ ಸಿಸಿಟಿವಿಯಲ್ಲಿ ದಾಖಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಕುನಾಲ್ ಸ್ಥಳೀಯ ಕಾಂಗ್ರೆಸ್ ನಾಯಕ ಜ್ಯೋತೇಂದರ್ ಭದಾನ ಅವರ ಸಹೋದರ. ವಿಜಯ್ ಎಂಬ ವ್ಯಕ್ತಿಯೊಂದಿಗೆ ಫೋನ್‌ನಲ್ಲಿ ಕೆಲವು ವಿಷಯದ ಕುರಿತು ಅವರು ಮಾತನಾಡಿದ್ದಾರೆ. ನಂತರ ವಿಜಯ್ ಅವರ ಸಹೋದರ ಬಿಲ್ಲು ಮತ್ತು ಇತರ ಇಬ್ಬರು ಸಹಚರರು ಅವರನ್ನು ಕೊಲೆ ಮಾಡಿದ್ದಾರೆ ಎಂದು ಘಟನೆಯ ಸಮಯದಲ್ಲಿ ಕುನಾಲ್ ಜೊತೆಗಿದ್ದ ಸ್ನೇಹಿತ ಪೊಲೀಸರಿಗೆ ತಿಳಿಸಿದ್ದಾನೆ.

# ನೀರಿನ ಟ್ಯಾಂಕ್ ಕುಸಿದು ಭಾರೀ ದುರಂತ



**ಉತ್ತರ ಪ್ರದೇಶ:** ವಸತಿ ಕಾಲೋನಿಯಲ್ಲಿದ್ದ ನೀರಿನ ಟ್ಯಾಂಕ್ ಕುಸಿದು ಇಬ್ಬರು ಸಾವನ್ನಪ್ಪಿದ್ದು, 13 ಮಂದಿ ಗಂಭೀರವಾಗಿ ಗಾಯಗೊಂಡಿರುವ ಘಟನೆ ಉತ್ತರಪ್ರದೇಶದ ಮಥುರಾದಲ್ಲಿ ನಡೆದಿದೆ.

ಆವಾಸ್ ವಿಕಾಸ್ ಪರಿಷತ್ ಅಭಿವೃದ್ಧಿಪಡಿಸಿದ ಕೃಷ್ಣ ವಿಹಾರ್ ಕಾಲೋನಿಯಲ್ಲಿ ಭಾನುವಾರ (ಜೂನ್ 30) ಸಂಜೆ 6 ಗಂಟೆ ಸುಮಾರಿಗೆ ಈ ಘಟನೆ ನಡೆದಿದೆ.

ಪೊಲೀಸ್ ಸಿಬ್ಬಂದಿ, ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ, ಅಗ್ನಿಶಾಮಕ ದಳ, ಮುನ್ಸಿಪಲ್ ಕಾರ್ಪೊರೇಷನ್ ಮತ್ತು ಆರೋಗ್ಯ ಇಲಾಖೆಯ ತಂಡಗಳು ಕಾರ್ಯಾಚರಣೆ ನಡೆಸಿ ಗಾಯಾಳುಗಳನ್ನು ಚಿಕಿತ್ಸೆಗಾಗಿ ಜಿಲ್ಲಾಸ್ಪತ್ರೆಗೆ ದಾಖಲಿಸಿದ್ದಾರೆ.

ಹೆಚ್ಚುವರಿ ಜಿಲ್ಲಾ ಮ್ಯಾಜಿಸ್ಟ್ರೇಟ್ ಯೋಗೇಂದ್ರ ಪಾಂಡೆ ಇಬ್ಬರು ವ್ಯಕ್ತಿಗಳು ಸಾವನ್ನಪ್ಪಿದ್ದಾರೆ ಎಂದು ಖಚಿತಪಡಿಸಿದ್ದಾರೆ.

ನೀರಿನ ಟ್ಯಾಂಕ್ ಸುತ್ತಲೂ ಇರುವ ಮನೆಗಳಿಗೂ ಹಾನಿಯುಂಟಾಗಿದ್ದು ಹಲವು ಮನೆಗಳು ಕುಸಿಯುವ ಭೀತಿಯಲ್ಲಿದೆ.

ಘಟನೆಯ ಕುರಿತು ಮಾಹಿತಿ ಪಡೆದಿರುವ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ನೀರಿನ ಟ್ಯಾಂಕ್ ಕಟ್ಟಿಸಿದ ಕಾಂಟ್ರಾಕ್ಟರ್ ವಿರುದ್ಧ ಎಫ್‌ಐಆರ್ ದಾಖಲಿಸುವಂತೆ ಸೂಚಿಸಿದ್ದಾರೆ।

# ರಾಹುಲ್ ಗಾಂಧಿ ಒಳ್ಳೆಯ ಸ್ಟ್ಯಾಂಡಪ್ ಕಾಮಿಡಿಯನ್ ಆಕ್ಟ್ ಮಾಡಿದ್ದಾರೆ: ಕಂಗನಾ

**ನವದೆಹಲಿ:** ರಾಹುಲ್ ಗಾಂಧಿ ಒಳ್ಳೆಯ ಸ್ಟ್ಯಾಂಡಪ್ ಕಾಮಿಡಿಯನ್ ಆಕ್ಟ್ ಮಾಡಿದ್ದಾರೆ ಎಂದು ಮಂಡಿ ಕ್ಷೇತ್ರದ ಸಂಸದೆ ಕಂಗನಾ ರಣಾವತ್ ಲೇವಡಿ ಮಾಡಿದ್ದಾರೆ.ಲೋಕಸಭೆ ಮೊದಲ ದಿನದ ಅಧಿವೇಶನದ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಕಂಗನಾ, ರಾಹುಲ್ ಗಾಂಧಿ ಒಳ್ಳೆಯ ಸ್ಟ್ಯಾಂಡ್ ಅಪ್ ಕಾಮಿಡಿಯನ್ ಆಕ್ಟ್ ಮಾಡಿದ್ದಾರೆ.



ಏಕೆಂದರೆ ನಮ್ಮ ಎಲ್ಲಾ ದೇವಾನುದೇವತೆಗಳನ್ನ ಬ್ರಾಂಡ್ ಅಂಬಾಸಿಡರ್ ಆಗಿ ಮಾಡಿಕೊಂಡಿದ್ದಾರೆ. ಶಿವನು ಆಶೀರ್ವಾದ ಮಾಡಿ ಎತ್ತಿದ ಕೈ ಕಾಂಗ್ರೆಸ್‌ನ ಕೈ ಎಂಬುದು ಅವರ ವಾದವಾಗಿತ್ತು. ಹಾಗಾಗಿ ನಾವು ಕೊನೇವರೆಗೂ ನಗುತ್ತಲೇ ಇದ್ದೆವು ಎಂದು ವ್ಯಂಗ್ಯವಾಡಿದ್ದಾರೆ.ರಾಜಕುಮಾರ ಬಂದಾಗ ಪ್ರಧಾನಿ ಮೋದಿ ಸ್ವಾಗತಿಸಲಿಲ್ಲ ಎಂಬುದು ಅವರ ಪ್ರಮುಖ ದೂರು ಆಗಿತ್ತು. ಆದ್ದರಿಂದ ಅವರು ಎಂತಹ ಸ್ಟ್ಯಾಂಡ್‌ಅಪ್ ಕಾಮಿಡಿ ಮಾಡಿದರು ಅಂತಾ ನೀವು ಅರ್ಥಮಾಡಿಕೊಳ್ಳಬಹುದು ಎಂದರಲ್ಲದೇ ರಾಹುಲ್ ಗಾಂಧಿ ತಮ್ಮ ಹೇಳಿಕೆಗೆ ಕ್ಷಮೆಯಾಚಿಸಬೇಕು ಎಂದು ಆಗ್ರಹಿಸಿದರು. ರಾಹುಲ್ ಗಾಂಧಿ ಹಿಂದೂ ದೇವರು, ಹಿಂದೂ ಧರ್ಮ, ಹಿಂದೂ ಧರ್ಮ ಅನುಸರಿಸುವವರನ್ನು ಅವಮಾನಿಸಿದ್ದಾರೆ. ಹಿಂಸಾತ್ಮಕ ಭಾವನೆಯನ್ನು ಪ್ರಚೋಸಿದಿದ್ದಾರೆ. ಅವರು ತಮ್ಮ ಹೇಳಿಕೆಗಳಿಗಾಗಿ ಕ್ಷಮೆಯಾಚಿಸಬೇಕು ಎಂದು ಒತ್ತಾಯಿಸಿದ್ದಾರೆ.

# ವಿಶ್ವಸುಂದರಿಯಾಗಿ ಹೊರಹೊಮ್ಮಿದ ಶಿರಸಿ ಮೂಲದ ಡಾ.ಶೃತಿ ಹೆಗಡೆ

**ದೆಹಲಿ:** ಶಿರಸಿ ತಾಲೂಕಿನಲ್ಲಿರುವ ಹುಬ್ಬಳ್ಳಿ ಮೂಲದ ಡಾ.ಶೃತಿ ಹೆಗಡಿ 2024 ವಿಶ್ವಸುಂದರಿ ಪಟ್ಟಕ್ಕೇರಿದ್ದಾರೆ. ಹುಬ್ಬಳ್ಳಿಯಲ್ಲಿ ನೆಲೆಸಿರುವ ಕೃಷ್ಣಾ ಹೆಗಡೆ, ಕಮಲಾ ದಂಪತಿಯ ಪುತ್ರಿ ಡಾ.ಶೃತಿ ಹೆಗಡೆ ಈ ಬಾರಿ ವಿಶ್ವಸುಂದರಿಯ ಕಿರೀಟ ಧರಿಸಿದ್ದಾರೆ. ಇವರು ಈ ಮೊದಲು ಮಿಸ್ ಕರ್ನಾಟಕ ರನ್ನರ್ ಅಪ್, ಮಿಸ್ ಸೌತ್ ಇಂಡಿಯಾ ಆಗಿದ್ದರು. ಅಲ್ಲದೇ ಮಿಸ್ ಏಷ್ಯಾ ಇಂಟರ್ನ್ಯಾಷನಲ್ ಇಂಡಿಯಾ ಪ್ರಶಸ್ತಿಗೂ ಭಾಜನರಾಗಿದ್ದ ಶೃತಿ, ಇದೀಗ ಅಮೆರಿಕದಲ್ಲಿ ನಡೆಸ ವಿಶ್ವಸುಂದರಿ ಸ್ಪರ್ಧೆಯಲ್ಲಿ ವಿಜೇತರಾಗಿದ್ದಾರೆ. 10 ದೇಶಗಳ ಸುಂದರಿಯರೊಂದಿಗೆ ಶೃತಿ ಪೈಪೋಟಿ ನಡೆಸಿದ್ದು, ಹಲವು ಸ್ಪರ್ಧೆಗಳಲ್ಲಿ ಉತ್ತಮ ಪ್ರದರ್ಶನ ನೀಡಿದ್ದಾರೆ. ಹುಬ್ಬಳ್ಳಿಯಲ್ಲಿ ಶೃತಿ ಎಂಬಿಬಿಎಸ್ ಮುಗಿಸಿದ್ದು, ಚರ್ಮ ರೋಗ ತಜ್ಞೆಯಾಗಬೇಕೆಂದು, ತುಮಕೂರಿನಲ್ಲಿ ಎಂ.ಡಿ. ಮಾಡುತ್ತಿದ್ದಾರೆ.



# ಫ್ರಾನ್ಸ್ ಶಾಸಕಾಂಗ ಚುನಾವಣೆ: ಬಲಪಂಥೀಯ ಪಕ್ಷ ಮುನ್ನಡೆ



**ಪ್ಯಾರಿಸ್:** ಫ್ರಾನ್ಸ್ ನಲ್ಲಿ ಶಾಸಕಾಂಗ ಚುನಾವಣೆಯ ಪ್ರಥಮ ಸುತ್ತಿನಲ್ಲಿ ಬಲಪಂಥೀಯ 'ನ್ಯಾಷನಲ್ ರ್‍ಯಾಲಿ' ಪಕ್ಷ ಮುನ್ನಡೆ ಸಾಧಿಸಿದ್ದು ಅಧಿಕಾರ ಪಡೆಯುವುದು ಬಹುತೇಕ ಖಚಿತವಾಗಿದೆ ಎಂದು ಉನ್ನತ ಮೂಲಗಳನ್ನು ಉಲ್ಲೇಖಿಸಿದ ವರದಿ ಹೇಳಿದೆ.ಅಧಿಕಾರ ಉಳಿಸಿಕೊಳ್ಳುವ ಅಧ್ಯಕ್ಷ ಇಮ್ಯಾನುವೆಲ್ ಮ್ಯಾಕ್ರೋನ್ ಅವರ ಆಶಯಕ್ಕೆ ಮತದಾರ ತಣ್ಣೀರೆರಚಿರುವ ಸೂಚನೆ ಪ್ರಾಥಮಿಕ ಫಲಿತಾಂಶದಿಂದ ವ್ಯಕ್ತವಾಗಿದ್ದು ಮ್ಯಾಕ್ರೋನ್ ಅವರ 'ಸೆಂಟ್ರಿಸ್ಟ್ ಗ್ರೂಫ್' ಪಕ್ಷ ತೃತೀಯ ಸ್ಥಾನಕ್ಕೆ ಕುಸಿದಿದೆ.ರವಿವಾರ ಎರಡನೇ ಸುತ್ತಿನ ಮತದಾನ ನಡೆಯಲಿದ್ದು ಅದಕ್ಕೂ ಮುನ್ನ ಎಲ್ಲಾ ರಾಜಕೀಯ ಪಕ್ಷಗಳು ಬಿರುಸಿನ ಪ್ರಚಾರ ನಡೆಸುವ ಮೂಲಕ ಮತದಾರರ ಮನ ಗೆಲ್ಲಲು ಮತ್ತೊಂದು ಪ್ರಯತ್ನ ನಡೆಸಲಿದ್ದಾರೆ. ಇದೀಗ ನ್ಯಾಷನಲ್ ರ್‍ಯಾಲಿ ಪಕ್ಷ ಸ್ಪಷ್ಟ ಬಹುಮತ ಪಡೆಯುವುದನ್ನು ತಪ್ಪಿಸಲು ಮ್ಯಾಕ್ರೋನ್ ಅವರ ಪಕ್ಷ ಹಾಗೂ ಎಡಪಂಥೀಯ 'ದಿ ನ್ಯೂ ಪಾಪ್ಯುಲರ್ ಫ್ರಂಟ್' ಶತಪ್ರಯತ್ನ ನಡೆಸುವುದು ನಿಶ್ಚಿತವಾಗಿದೆ. ನ್ಯಾಷನಲ್ ರ್‍ಯಾಲಿ ಪಕ್ಷ ಬಹುಮತ ಸಾಧಿಸಿ ಫ್ರಾನ್ಸ್ ನಲ್ಲಿ ಎರಡನೇ ವಿಶ್ವಯುದ್ಧದ ಬಳಿಕದ ಪ್ರಥಮ ಬಲಪಂಥೀಯ ಸರಕಾರ ಸ್ಥಾಪಿಸುತ್ತದೆಯೇ ಎಂಬ ಪ್ರಶ್ನೆಗೆ ರವಿವಾರ ನಡೆಯುವ ಎರಡನೇ ಸುತ್ತಿನ ಮತದಾನದ ಫಲಿತಾಂಶ ಉತ್ತರ ನೀಡಲಿದೆ.

# ಮದುವೆಯಲ್ಲಿ ಆತ್ಮಾಹುತಿ ಬಾಂಬ್ ಸ್ಫೋಟ; 18 ಮಂದಿ ಸಾವು

**ನೈಜೀರಿಯಾ:** ನೈಜೀರಿಯಾದ ಈಶಾನ್ಯ ರಾಜ್ಯ ಬಾರ್ನೊದಲ್ಲಿ ಸಂಭವಿಸಿದ ಆತ್ಮಾಹುತಿ ಸರಣಿ ಬಾಂಬ್ ಸ್ಫೋಟದಲ್ಲಿ ಕನಿಷ್ಠ 18 ಮಂದಿ ಮೃತಪಟ್ಟಿದ್ದು, 48 ಮಂದಿ ಗಾಯಗೊಂಡಿದ್ದಾರೆ ಎಂದು ಅಲ್ಲಿನ ತುರ್ತು ಸೇವೆ ನಿರ್ವಹಣಾ ಸಂಸ್ಥೆಯನ್ನು ಉಲ್ಲೇಖಿಸಿ ಸಿಎನ್‌ಎನ್ ವರದಿ ಮಾಡಿದೆ ಎಂದು ಸುದ್ದಿ ಸಂಸ್ಥೆ ಎಎನ್‌ಐ ತಿಳಿಸಿದೆ. ಮದುವೆ ಸಮಾರಂಭ ನಡೆಯುತ್ತಿದ್ದ ಸಂದರ್ಭ ಶನಿವಾರ 3 ಗಂಟೆ ಸುಮಾರಿಗೆ ಮೊದಲ ಸ್ಫೋಟ ಸಂಭವಿಸಿದೆ. ಗ್ವೋಜಾ ಸರ್ಕಾರಿ ಆಸ್ಪತ್ರೆಯಲ್ಲಿ ಎರಡನೇ ಸ್ಫೋಟ ಮತ್ತು ಅಂತ್ಯಸಂಸ್ಕಾರದ ವೇಳೆ 3ನೇ ಸ್ಫೋಟ ಸಂಭವಿಸಿದೆ. ಬಾರ್ನೊ ರಾಜ್ಯದ ತುರ್ತು ಸೇವೆಗಳ ನಿರ್ವಹಣಾ ಸಂಸ್ಥೆಯ (ಎಸ್ಇಎಂಎ) ಡಿಜಿ ಬರ್ಕಿಂಡೋ ಮುಹಮ್ಮದ್ ಸೈದು ಅವರು ಗ್ವೋಜಾ ಪಟ್ಟಣದ ಸ್ಫೋಟದ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮೃತರಲ್ಲಿ ಮಹಿಳೆಯರು, ಪುರುಷರು ಮತ್ತು ಮಕ್ಕಳು ಸೇರಿದ್ದಾರೆ. ಇದುವರೆಗೆ, ಮಕ್ಕಳು, ಪುರುಷರು, ಮಹಿಳೆಯರು ಮತ್ತು ಗರ್ಭಿಣಿಯರನ್ನು ಒಳಗೊಂಡಂತೆ 18 ಸಾವುಗಳು ವರದಿಯಾಗಿವೆ ಎಂದು ಏಜೆನ್ಸಿಯ ಮುಖ್ಯಸ್ಥ ಬರ್ಕಿಂಡೋ ಸೈದು ತಿಳಿಸಿದ್ದಾರೆ. ಗಂಭೀರವಾಗಿ ಗಾಯಗೊಂಡ ಹತ್ತೊಂಬತ್ತು ಜನರನ್ನು ಪ್ರಾದೇಶಿಕ ರಾಜಧಾನಿ ಮೈದುಗುರಿಗೆ ಕರೆದೊಯ್ಯಲಾಯಿತು, ಇತರ 23 ಜನರು ಸ್ಥಳಾಂತರಿಸುವಿಕೆಗೆ ಕಾಯುತ್ತಿದ್ದಾರೆ ಎಂದು ಸೈದು ವರದಿಯಲ್ಲಿ ತಿಳಿಸಿದ್ದಾರೆ.

# ಇಸ್ರೇಲ್ ಪ್ರಧಾನಿ ನೆತನ್ಯಾಹು ರಾಜೀನಾಮೆಗೆ ಆಗ್ರಹಿಸಿ ಪ್ರತಿಭಟನೆ

**ಇಸ್ರೇಲ್:** ಗಾಝಾದಲ್ಲಿ ಯುದ್ಧ ಸಾರಿರುವ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ವಿರುದ್ಧ ಸಾವಿರಾರು ಮಂದಿ ಇಸ್ರೇಲ್ ಪ್ರಜೆಗಳು ಟೆಲ್ ಅವೀವ್ ನಲ್ಲಿ ಭಾನುವಾರ ಬೃಹತ್ ಪ್ರತಿಭಟನೆ ನಡೆಸಿದರು.

ಹಮಾಸ್ ವಿರುದ್ಧದ ದಾಳಿಯನ್ನು ತಕ್ಷಣ ಸ್ಥಗಿತಗೊಳಿಸುವಂತೆ ಪ್ರತಿಭಟನಾಕಾರರು ಇಸ್ರೇಲಿ ಸರ್ಕಾರವನ್ನು ಒತ್ತಾಯಿಸಿದರು.

2023ರ ಅಕ್ಟೋಬರ್ ನಲ್ಲಿ ಇಸ್ರೇಲ್-ಹಮಾಸ್ ನಡುವೆ ಯುದ್ಧ ಆರಂಭವಾದ ಬಳಿಕ ಪ್ಯಾಲೆಸ್ತೀನ್ ನಲ್ಲಿ ಈ ಯುದ್ಧಕ್ಕೆ ಹಲವು ಜೀವಗಳು ಬಲಿಯಾಗಿವೆ. ಆರು ತಿಂಗಳ ಹಿಂದೆ ಹಮಾಸ್ ವಶಕ್ಕೆ ಪಡೆದಿದ್ದ ಒತ್ತೆಯಾಳುಗಳನ್ನು ತಕ್ಷಣ ಬಿಡುಗಡೆ ಮಾಡುವಂತೆಯೂ ಪ್ರತಿಭಟನಾಕಾರರು ಆಗ್ರಹಿಸಿದರು. ಇದರ ಜೊತೆಗೆ ಗಾಝಾದ ಪ್ರಸ್ತುತ ಪರಿಸ್ಥಿತಿಗೆ ಕಾರಣರಾದ ಇಸ್ರೇಲ್ ಪ್ರಧಾನಿ ನೆತನ್ಯಾಹು ರಾಜೀನಾಮೆಗೂ ಆಗ್ರಹಿಸಿದರು




# ಲೋನಾವಾಲಾ ಜಲಪಾತ ದುರಂತ; 4 ಮಕ್ಕಳು ಸೇರಿ ಐವರು ನೀರುಪಾಲು

**ಪುಣೆ:** ಪ್ರಸಿದ್ಧ ಪ್ರವಾಸಿ ಸ್ಥಳವಾಗಿರುವ ಲೋನಾವಾಲಾದ ಭೂಶಿ ಅಣೆಕಟ್ಟಿನ ಬಳಿ ಭಾನುವಾರ ಮಧ್ಯಾಹ್ನ ನಾಲ್ಕು ಮಕ್ಕಳು ಮತ್ತು ಮಹಿಳೆ ಸೇರಿದಂತೆ ಐದು ಜನರು ನೀರಿನಲ್ಲಿ ಕೊಚ್ಚಿಕೊಂಡು ಹೋಗಿ ಮೃತಪಟ್ಟಿದ್ದಾರೆ. ಇದರ ವಿಡಿಯೋ ವೈರಲ್ ಆಗಿದ್ದು, ಮೂವರ ಮೃತದೇಹ ಪತ್ತೆಯಾಗಿದೆ ಎಂದು ಸ್ಥಳೀಯ ಪೊಲೀಸರು ತಿಳಿಸಿದ್ದಾರೆ.

ಭಾರಿ ಮಳೆ ಮತ್ತು ಭೂಶಿ ಅಣೆಕಟ್ಟು ಪ್ರದೇಶದಲ್ಲಿ ಸೀಮಿತ ಬೆಳಕಿನ ನಂತರ ಶೋಧ ಕಾರ್ಯಾಚರಣೆಯನ್ನು ನಿಲ್ಲಿಸಲಾಗಿತ್ತು.

ಪೊಲೀಸ್ ಮಾಹಿತಿಯ ಪ್ರಕಾರ, ಮೃತರನ್ನು ಸಾಹಿಸ್ತಾ ಲಿಯಾಕತ್ ಅನ್ಸಾರಿ (36), ಅಮಿಮಾ ಆದಿಲ್ ಅನ್ಸಾರಿ (13), ಉಮೇರಾ ಅಲಿಯಾಸ್ ಸಲ್ಮಾನ್ ಆದಿಲ್ ಅನ್ಸಾರಿ (8) ಎಂದು ಗುರುತಿಸಲಾಗಿದ್ದು, ಕಾಣೆಯಾದ ಅದ್ನಾನ್ ಶಬತ್ ಅನ್ಸಾರಿ (4) ಮತ್ತು ಮರಿಯಾ ಅನ್ಸಾರಿ (9) ಅವರ ಶೋಧ ಸೋಮವಾರ ಬೆಳಿಗ್ಗೆ ಪುನರಾರಂಭಗೊಂಡಿದೆ.

ಪುಣೆಯ ಹಡಪ್ಸರ್ನ ಲಿಯಾಕತ್ ಅನ್ಸಾರಿ ಮತ್ತು ಯೂನುಸ್ ಖಾನ್ ಅವರ ಕುಟುಂಬ ಸದಸ್ಯರು ಭೂಶಿ ಅಣೆಕಟ್ಟೆಗೆ ಭೇಟಿ ನೀಡಲು ಯೋಜಿಸಿದ್ದರು. ಅದರಂತೆ ಭಾನುವಾರ ಅಪರಾಹ್ನ 3 ಗಂಟೆ ಸುಮಾರಿಗೆ 17-18 ಕುಟುಂಬ ಸದಸ್ಯರು ಭೂಶಿ ಅಣೆಕಟ್ಟಿನ ಹಿಂಭಾಗದ ಜಲಪಾತವನ್ನು ತಲುಪಿದರು. ನಿರಂತರ ಮಳೆಯಿಂದಾಗಿ ನೀರಿನ ಮಟ್ಟವು ಹಠಾತ್ ಏರಿಕೆಯಾಗಿತ್ತು. ಕಡಿಮೆ ನೀರಿದ್ದಾಗ ಜಲಪಾತದ ನಡುವೆ ಹೋಗಿದ್ದ ಕುಟುಂಬದ 10 ಸದಸ್ಯರು ನೀರಿನ ತೊರೆಗಳಲ್ಲಿ ಸಿಲುಕಿ ಮುಳುಗಲು ಪ್ರಾರಂಭಿಸಿದರು. ಆದಾಗ್ಯೂ, ಅವರಲ್ಲಿ ಐವರು ನೀರಿನ ತೊರೆಯಿಂದ ತಪ್ಪಿಸಿಕೊಳ್ಳುವಲ್ಲಿ ಯಶಸ್ವಿಯಾದರು. ಉಳಿದ ಐದು ಮಂದಿ ನೀರಿನಲ್ಲಿ ಕೊಚ್ಚಿ ಹೋಗಿದ್ದರು.



ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ತಮಿಳಿನ ಹೊಸ ಚಿತ್ರಕ್ಕೆ ಗ್ರೀನ್ ಸಿಗ್ನಲ್ ಕೊಟ್ಟ ತ್ರಿಷಾ



ಸೌತ್ ಬ್ಯೂಟಿ ತ್ರಿಷಾ ಈಗ ಹೊಸ ಸಿನಿಮಾದ ಆಫರ್ ಒಪ್ಪಿಕೊಂಡಿದ್ದಾರೆ. ಅಜಿತ್ ಕುಮಾರ್ ಜೊತೆ ಡ್ಯುಯೆಟ್ ಹಾಡೋಕೆ ರೆಡಿಯಾಗಿದ್ದಾರೆ. ಸದ್ಯ ಈ ಸುದ್ದಿ ಕೇಳಿ ಅಭಿಮಾನಿಗಳು ಥ್ರಿಲ್ ಆಗಿದ್ದಾರೆ.

ಈಗಾಗಲೇ ಅಜಿತ್ ಕುಮಾರ್ ಮತ್ತು ತ್ರಿಷಾ ಎರಡ್ಮೂರು ಸಿನಿಮಾಗಳಲ್ಲಿ ಜೊತೆಯಾಗಿ ನಟಿಸಿದ್ದಾರೆ. ಹಲವು ವರ್ಷಗಳ ನಂತರ ಈ ಜೋಡಿ ಮತ್ತೆ ಒಂದಾಗುತ್ತಿದೆ. ಬಹುನಿರೀಕ್ಷಿತ 'ವಿದಾಮುಯರ್ಚಿ' ಸಿನಿಮಾದಲ್ಲಿ ಜೊತೆಯಾಗಿ ಕಾಣಿಸಿಕೊಳ್ಳಿದ್ದಾರೆ.

ಕಾರಣಾಂತರಗಳಿಂದ 'ವಿದಾಮುಯರ್ಚಿ' ಸಿನಿಮಾ ರಿಲೀಸ್‌ಗೆ ತಡವಾಗುತ್ತಲೇ ಇದೆ. ಈಗ ಸಿನಿಮಾದ ಕೊನೆಯ ಶೆಡ್ಯೂಲ್ ಬಾಕಿಯಿದ್ದು, ಜುಲೈ 2ರಿಂದ ತ್ರಿಷಾ ಭಾಗದ ಶೂಟಿಂಗ್ ನಡೆಯಲಿದೆ ಎನ್ನಲಾಗಿದೆ. ಆಗಸ್ಟ್ ಒಳಗೆ ಸಿನಿಮಾ ಶೂಟಿಂಗ್ ಕೆಲಸ ಮುಗಿಸಿ ಈ ವರ್ಷ ದೀಪಾವಳಿಗೆ ಚಿತ್ರ ರಿಲೀಸ್ ಮಾಡಲು ಚಿತ್ರತಂಡ ಪ್ಲ್ಯಾನ್ ಮಾಡಿದೆ.

ಇನ್ನೂ ಚಿರಂಜೀವಿ ನಟನೆಯ 'ವಿಶ್ವಾಂಭರ' ಸಿನಿಮಾದಲ್ಲಿ ತ್ರಿಷಾ ನಾಯಕಿಯಾಗಿದ್ದಾರೆ. ಇದರ ಜೊತೆಗೆ ಹಲವು ಪ್ರಾಜೆಕ್ಟ್‌ಗಳು ನಟಿಯ ಕೈಯಲ್ಲಿವೆ.

# ಪತ್ತೆದಾರಿ ಸಿನಿಮಾದಲ್ಲಿ ಆಲಿಯಾ ಭಟ್



ಬಾಲಿವುಡ್ ಬೆಡಗಿ ಆಲಿಯಾ ಭಟ್ ಮಗಳು ರಾಹಾ ಆರೈಕೆಯ ನಡುವೆ ಹೊಸ ಚಿತ್ರಕ್ಕಾಗಿ ತಯಾರಿ ಶುರು ಮಾಡಿಕೊಂಡಿದ್ದಾರೆ. ಇದೇ ಜುಲೈ 15ರಿಂದ ಹೊಸ ಚಿತ್ರದ ಶೂಟಿಂಗ್ ನಿಗದಿಯಾಗಿದೆ. ಈ ಮೂಲಕ ಅಭಿಮಾನಿಗಳಿಗೆ ನಟಿ ಸಿಹಿಸುದ್ದಿ ನೀಡಿದ್ದಾರೆ.

ಕೆಲತಿಂಗಳುಗಳ ಹಿಂದೆಯೇ ಯಶ್ ರಾಜ್ ಫಿಲ್ಮ್ಸ್ ನಿರ್ಮಾಣದ ಪತ್ತೆದಾರಿ ಸಿನಿಮಾದಲ್ಲಿ ಆಲಿಯಾ ಭಟ್ ನಟಿಸುತ್ತಾರೆ ಎಂದು ಘೋಷಣೆ ಆಗಿತ್ತು. ಆ ನಂತರ ಚಿತ್ರ ಬಗ್ಗೆ ಯಾವುದೇ ಮಾಹಿತಿ ಸಿಕ್ಕಿರಲಿಲ್ಲ. ಈಗ ಅಪ್‌ಡೇಟ್ ಸಿಕ್ಕಿದೆ. ಜುಲೈ 15ರಿಂದ ಮುಂಬೈ ನಗರದ ಹಲವೆಡೆ ಚಿತ್ರೀಕರಣ ಮಾಡಲು ತಂಡ ಯೋಚಿಸಿದೆ.

ಫೀಮೇಲ್ ಓರಿಯೇಟೆಂಡ್ ಸಿನಿಮಾದಲ್ಲಿ ಶಾರ್ವರಿ ವಾಘ್ ಜೊತೆ ಆಲಿಯಾ ಲೀಡ್ ರೋಲ್‌ನಲ್ಲಿ ನಟಿಸುತ್ತಿದ್ದಾರೆ. ಮೊದಲ ಬಾರಿಗೆ ಪತ್ತೆದಾರಿ ಪಾತ್ರಕ್ಕೆ ಆಲಿಯಾ ಜೀವತುಂಬಲಿದ್ದಾರೆ.

ಅಂದಹಾಗೆ, ಆಲಿಯಾ ಕಡೆಯದಾಗಿ 2023ರಲ್ಲಿ 'ರಾಕಿ ಔರ್ ರಾಣಿ ಕೀ ಪ್ರೇಮ್ ಕಹಾನಿ' ಸಿನಿಮಾದಲ್ಲಿ ರಣ್‌ವೀರ್ ಸಿಂಗ್ ನಾಯಕಿಯಾಗಿ ನಟಿಸಿದರು.



# ಹ್ಯಾಟ್ರಿಕ್ ಹೀರೋ ಶಿವಣ್ಣ ಫ್ಯಾನ್ಸ್‌ಗೆ ಸಿಹಿಸುದ್ದಿ- ಏನದು?

ಹ್ಯಾಟ್ರಿಕ್ ಹೀರೋ ಶಿವರಾಜ್‌ಕುಮಾರ್ ಅಭಿಮಾನಿಗಳಿಗೆ ಇದೀಗ ಸಿಹಿಸುದ್ದಿ ಸಿಕ್ಕಿದೆ. ಬ್ಯಾಕ್ ಟು ಬ್ಯಾಕ್ ಸಿನಿಮಾಗಳಲ್ಲಿ ಬ್ಯುಸಿಯಿರುವ ಶಿವಣ್ಣ ಸದ್ಯ 'ಭೈರತಿ ರಣಗಲ್' ಚಿತ್ರೀಕರಣದಲ್ಲಿ ತೊಡಗಿಸಿಕೊಂಡಿದ್ದಾರೆ. ಜುಲೈ 12ರಂದು ಶಿವಣ್ಣ ಹುಟ್ಟುಹಬ್ಬದಂದು ಫ್ಯಾನ್ಸ್‌ಗೆ ಬಿಗ್ ಸರ್ಪ್ರೈಸ್ ನೀಡಲು ಚಿತ್ರತಂಡ ಸಜ್ಜಾಗಿದೆ.

ಬಹುನಿರೀಕ್ಷಿತ ಸಿನಿಮಾ 'ಭೈರತಿ ರಣಗಲ್' ಸಿನಿಮಾದ ಅಪ್‌ಡೇಟ್‌ಗಾಗಿ ಫ್ಯಾನ್ಸ್ ಎದುರು ನೋಡಿದ್ದಾರೆ. ಮತ್ತೊಂದೆಡೆ ಶಿವಣ್ಣ 62ನೇ ವರ್ಷದ ಜನ್ಮದಿನ ಆಚರಣೆ ಭರ್ಜರಿ ಪ್ಲ್ಯಾನ್ ಕೂಡ ನಡೆಯುತ್ತಿದೆ.

ಹಾಗಾಗಿ ಜುಲೈ 12ರಂದು ಶಿವಣ್ಣ ಪಾತ್ರದ ಟೀಸರ್ ಬಿಡುಗಡೆ ಮಾಡುವ ಮೂಲಕ ಚಿತ್ರತಂಡ ವಿಶೇಷವಾಗಿ ಶುಭಕೋರಲಿದೆಯಂತೆ. ಚಿತ್ರದ ಅಪ್‌ಡೇಟ್‌ಗಾಗಿ ಕಾಯುತ್ತಿದ್ದ ಅಭಿಮಾನಿಗಳಿಗೆ ಶಿವಣ್ಣ ಖದರ್ ನೋಡಲು ಅವಕಾಶ ಸಿಗಲಿದೆ. ಈ ಮೂಲಕ ಫ್ಯಾನ್ಸ್‌ಗೆ ಸರ್ಪ್ರೈಸ್ ಸಿಗಲಿದೆ.

ಅಂದಹಾಗೆ, ಗೀತಾ ಪಿಕ್ಚರ್ಸ್ ಬ್ಯಾನರ್‌ನ 'ಭೈರತಿ ರಣಗಲ್' ಸಿನಿಮಾ




ನಿರ್ಮಾಣವಾಗುತ್ತಿದೆ. ಗೀತಾ ಶಿವರಾಜ್ ಕುಮಾರ್ ಹುಟ್ಟುಹಬ್ಬಕ್ಕೆ ಚಿತ್ರತಂಡ ಸ್ಪೆಷಲ್ ಮೇಕಿಂಗ್ ವೀಡಿಯೋ ರಿಲೀಸ್ ಮಾಡಿ ಶುಭಕೋರಿದೆ. ಮಫ್ತಿಗಿಂತ ಬಹಳ ಅದ್ಧೂರಿಯಾಗಿ ಪ್ರೀಕ್ವೆಲ್ ಬರಲಿದೆ. ಮಾಫಿಯಾ ಡಾನ್ 'ಭೈರತಿ ರಣಗಲ್' ಹಿನ್ನೆಲೆ ಏನು ಎನ್ನುವುದನ್ನು ಈ ಚಿತ್ರದಲ್ಲಿ ಕಟ್ಟಿಕೊಡುವ ಪ್ರಯತ್ನ ಮಾಡಿದ್ದಾರೆ.

ವಕೀಲನಾಗಿದ್ದ ಭೈರತಿ ರಣಗಲ್ ದೊಡ್ಡ ಡಾನ್ ಆಗಿ ಬದಲಾಗಿದ್ದು ಯಾಕೆ ಎನ್ನುವ ಪ್ರಶ್ನೆಗೆ ಚಿತ್ರಮಂದಿರದಲ್ಲೇ ಉತ್ತರ ಸಿಗಲಿದೆ. ನೂರಾರು ಜನ ಕಲಾವಿದರು, ತಂತ್ರಜ್ಞರು ಚಿತ್ರಕ್ಕಾಗಿ ಹಗಳಿರುಲು ಕೆಲಸ ಮಾಡುತ್ತಿದ್ದಾರೆ. ಇಲ್ಲೂ ಗಣಿ ಪ್ರದೇಶ, ಹೆಲಿಕ್ಯಾಪ್ಟರ್ ಶಾಟ್ಸ್ ಇದೆ. ಇನ್ನೂ ಪೊಲೀಸ್ ಠಾಣೆಯನ್ನೇ ರಣಗಲ್ ಸುಟ್ಟು ಬಿಡುವ ಸನ್ನಿವೇಶ ಕೂಡ ಚಿತ್ರದಲ್ಲಿರುವಂತೆ ಕಾಣುತ್ತಿದೆ. ಒಟ್ನಲ್ಲಿ ಈ ವಿಡಿಯೋ ನೋಡಿ ಫ್ಯಾನ್ಸ್ ಚಿಂದಿ ಆಗಿದೆ ಎಂದು ಹಾಡಿಹೊಗಳಿದ್ದಾರೆ.

ಶಿವರಾಜ್‌ಕುಮಾರ್‌ಗೆ ಜೋಡಿಯಾಗಿ ರುಕ್ಮಿಣಿ ವಸಂತ್ ಚಿತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ರಾಹುಲ್ ಬೋಸ್, ದೇವರಾಜ್, ಛಾಯಾ ಸಿಂಗ್, ಮಧು ಗುರುಸ್ವಾಮಿ, ವಸಿಷ್ಠ ಸಿಂಹ ಚಿತ್ರದ ಮುಖ್ಯ ಪಾತ್ರಗಳಲ್ಲಿ ಕಾಣಿಸಿಕೊಳ್ಳಲಿದ್ದಾರೆ. ನವೀನ್ ಕುಮಾರ್ ಛಾಯಾಗ್ರಹಣ, ರವಿ ಬಸ್ರೂರು ಸಂಗೀತ ಚಿತ್ರಕ್ಕಿದೆ. ಅಂದಹಾಗೆ, ಆಗಸ್ಟ್ 15ರಂದು ಸಿನಿಮಾ ರಿಲೀಸ್ ಆಗಲಿದೆ.

ಆಫ್ರಿಕಾ ವಿರುದ್ಧ 10 ವಿಕೆಟ್‌ಗಳ ಜಯ

# ಭಾರತದ ವನಿತೆಯರಿಗೆ ಕಿರೀಟ!

ಶಫಾಲಿ ವರ್ಮಾ, ಸ್ಮೃತಿ ಮಂಧಾನ ಅವರ ಬ್ಯಾಟಿಂಗ್ ನೆರವು ಹಾಗೂ ಸ್ನೇಹ್ ರಾಣಾ ಅವರ ಅಮೋಘ ಬೌಲಿಂಗ್ ಪ್ರದರ್ಶನದಿಂದ ಟೀಂ ಇಂಡಿಯಾ ಮಹಿಳಾ ತಂಡವು ದಕ್ಷಿಣಾ ಆಫ್ರಿಕಾ ಮಹಿಳಾ ತಂಡದ ವಿರುದ್ಧ ಏಕೈಕ ಟೆಸ್ಟ್ ಪಂದ್ಯದಲ್ಲಿ 10 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ. ಮೂರು ಪಂದ್ಯಗಳ ಏಕದಿನ ಸರಣಿಯಲ್ಲಿ ಕ್ಲೀನ್ ಸ್ವೀಪ್ ಸಾಧನೆ ಮಾಡಿದ್ದ ವನಿತೆಯರು ಇದೀಗ ಟೆಸ್ಟ್ ಕ್ರಿಕೆಟ್‌ನಲ್ಲಿ ಗೆಲುವು ಸಾಧಿಸಿದ್ದಾರೆ. ಚೆನ್ನೈನ ಚೆಪಾಕ್ ಕ್ರೀಡಾಂಗಣದಲ್ಲಿ ನಡೆದ ಏಕೈಕ ಟೆಸ್ಟ್ ಪಂದ್ಯದ 2ನೇ ಇನ್ನಿಂಗ್ಸ್‌ನಲ್ಲಿ 37 ರನ್ ಗುರಿ ಪಡೆದ ಭಾರತ ಮಹಿಳಾ ತಂಡ 9.2 ಓವರ್‌ಗಳಲ್ಲೇ ಗುರಿ ತಲುಪಿ ಗೆಲುವು ಸಾಧಿಸಿದೆ. ಶಫಾಲಿ ವರ್ಮಾ ಮತ್ತೆ 24 ರನ್, ಶುಭಾ ಸತೀಶ್ 13 ಅಜೇಯರಾಗಿ ಉಳಿದರು.

ಟಾಸ್ ಗೆದ್ದು ಮೊದಲ ಬ್ಯಾಟ್ ಮಾಡಿದ ಹರ್ಮನ್ ಪ್ರೀತ್ ಕೌರ್ ಬಳಗ ಮೊದಲ ಇನ್ನಿಂಗ್ಸ್‌ನಲ್ಲಿ ಬೃಹತ್ ಮೊತ್ತ ಪೇರಿಸಿತ್ತು. 115.1 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 603 ರನ್ ಗಳಿಸಿ ಡಿಕ್ಲೇರ್ ಮಾಡಿಕೊಂಡಿತ್ತು. ಪ್ರತಿಯಾಗಿ ಆಡಿದ್ದ ದಕ್ಷಿಣ ಆಫ್ರಿಕಾ ವನಿತೆಯರ ತಂಡ ಮೊದಲ ಇನ್ನಿಂಗ್ಸ್‌ನಲ್ಲಿ 84.3 ಓವರ್‌ಗಳಿಗೆ 266 ರನ್ ಗಳಿಸಿ ಆಲೌಟ್ ಆಯಿತು. ಬಳಿಕ ಫಾಲೋ ಆನ್ ಗುರಿಯೊಂದಿಗೆ 2ನೇ ಇನ್ನಿಂಗ್ಸ್ ಆರಂಭಿಸಿದ ದಕ್ಷಿಣ ಆಫ್ರಿಕಾ ತಂಡ 154.4 ಓವರ್‌ಗಳಲ್ಲಿ 373 ಗಳಿಸಿ ಆಲೌಟ್ ಆಯಿತು. ಇದರಿಂದ ಭಾರತ ತಂಡ 37 ರನ್‌ಗಳ ಗುರಿ ಪಡೆದು ಸುಲಭ ಜಯ ದಾಖಲಿಸಿತು.



**ಮೊದಲ ಇನ್ನಿಂಗ್ಸ್‌ನಲ್ಲಿ ಮಿಂಚಿದ ಬ್ಯಾಟರ್ಸ್:** ಮೊದಲ ಇನ್ನಿಂಗ್ಸ್‌ನಲ್ಲಿ ಭಾರತದ ಆರಂಭಿಕ ಆಟಗಾರ್ತಿಯರಾದ ಶಫಾಲಿ ವರ್ಮಾ ಸ್ಫೋಟಕ ದ್ವಿಶತಕ ದಾಖಲಿಸಿದರು. ಇದರೊಂದಿಗೆ ಸ್ಮೃತಿ ಮಂಧಾನ ಅಮೋಘ ಶತಕ ಸಿಡಿಸಿದರು. ಮೊದಲ ವಿಕೆಟ್‌ಗೆ ಈ ಜೋಡಿ 292 ರನ್‌ಗಳ ಜತೆಯಾಟ ನೀಡಿತ್ತು. ಸ್ಮೃತಿ ಮಂಧಾನ 161 ಎಸೆತಗಳಲ್ಲಿ 26 ಬೌಂಡರಿ, 1 ಸಿಕ್ಸರ್ ಸಹಿತ 149 ರನ್ ಗಳಿಸಿ ಔಟಾದರೆ. ಶಫಾಲಿ 197 ಎಸೆತಗಳಲ್ಲಿ 23 ಬೌಂಡರಿ, 8 ಸಿಕ್ಸರ್ ಸಹಿತ ದಾಖಲೆಯ ದ್ವಿಶತಕ ಸಿಡಿಸಿದರು. ಬಳಿಕ ಜೆಮಿಮಾ ರೋಡ್ರಿಗ್ಸ್ 55 ರನ್, ಹರ್ಮನ್ ಪ್ರೀತ್ ಕೌರ್ 69 ರನ್, ರಿಚಾ ಘೋಷ್ 86 ರನ್ ಸಿಡಿಸಿ ಮಿಂಚಿದರು.

**ಸ್ನೇಹ್ ರಾಣಾ ದಾಳಿಗೆ ಆಫ್ರಿಕಾ ತತ್ತರ:** ಮೊದಲ ಇನ್ನಿಂಗ್ಸ್ ಬ್ಯಾಟ್ ಮಾಡಿದ ದಕ್ಷಿಣ ಆಫ್ರಿಕಾ ತಂಡ ಸ್ನೇಹ್ ರಾಣಾ ಬೌಲಿಂಗ್ ದಾಳಿಗೆ ತತ್ತರಿಸಿತು. ಇದರ ನಡುವೆಯೂ ಸುನೆ ಲುಸ್ 65 ರನ್ ಮತ್ತು ಮರಿಜಾನ್ನೆ ಕಪ್ 74 ರನ್ ಗಳಿಸಿ ಬ್ಯಾಟಿಂಗ್ ಬಲ ನೀಡಿದ್ದರು. ಇದರೊಂದಿಗೆ ದೀಪ್ತಿ ಶರ್ಮಾ 2 ವಿಕೆಟ್ ಪಡೆದರೆ, ಸ್ನೇಹ್ ರಾಣಾ 8 ವಿಕೆಟ್ ಕಿತ್ತರು.

**ವೋಲ್ವರ್ತ್ ಮತ್ತು ಸುನೆ ಲೂಸ್ ಶತಕ:** 337 ರನ್‌ಗಳ ಹಿನ್ನಡೆ ಅನುಭವಿಸಿದ ಪ್ರವಾಸಿ 2ನೇ ಇನ್ನಿಂಗ್ಸ್‌ನಲ್ಲಿ ಉತ್ತಮ ಪ್ರದರ್ಶನ ನೀಡಿತು. ನಾಯಕಿ ಲಾರಾ ವೋಲ್ವರ್ತ್ ಮತ್ತು ಸುನೆ ಲುಸ್ ಶತಕ ಸಿಡಿಸಿ ಗಮನ ಸೆಳೆದರು. ಲಾರಾ 16 ಬೌಂಡರಿ ಸಹಿತ 122 ರನ್ ಬಾರಿಸಿದರೆ ಲುಸ್ 203 ಎಸೆತಗಳಲ್ಲಿ 18 ಬೌಂಡರಿ ಸಹಿತ 109 ರನ್ ಗಳಿಸಿದರು. ನಾಡಿನ್ ಡಿ ಕ್ಲರ್ಕ್ 61 ರನ್ ಸಿಡಿಸಿದರು. ಮೊದಲ ಇನ್ನಿಂಗ್ಸ್‌ನಲ್ಲಿ 8 ವಿಕೆಟ್ ಕಿತ್ತಿದ್ದ ಸ್ನೆಹ್ ರಾಣಾ 2ನೇ ಇನ್ನಿಂಗ್ಸ್‌ನಲ್ಲಿ 2 ವಿಕೆಟ್ ಪಡೆದರು. ದೀಪ್ತಿ ಶರ್ಮಾ, ರಾಜೇಶ್ವರಿ ಗಾಯಕ್ವಾಡ್ ತಲಾ 2 ವಿಕೆಟ್ ಕಿತ್ತರು, ಶಫಾಲಿ ವರ್ಮಾ, ಹರ್ಮನ್ ಪ್ರೀತ್ ಕೌರ್ ತಲಾ 1 ವಿಕೆಟ್ ಪಡೆದು ದಕ್ಷಿಣ ಆಫ್ರಿಕಾದ ಆಟವನ್ನು ಕೊನೆಗೊಳಿಸಿದರು.

4ನೇ ದಿನದಾಟದಲ್ಲಿ 37 ರನ್‌ಗಳ ಗುರಿ ಪಡೆದ ಭಾರತ 9.2 ಓವರ್‌ಗಳಲ್ಲೇ 37 ರನ್ ಗಳಿಸಿತು.

# ನಿಖಿಲ್ ಅಭ್ಯರ್ಥಿಯಾದರೂ ಬೆಂಬಲ ನೀಡುವೆ: ಯೋಗೇಶ್ವರ್

**ನವದೆಹಲಿ:** ಚನ್ನಪಟ್ಟಣ ಉಪಚುನಾವಣೆಯಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿ ಅಭ್ಯರ್ಥಿ ಆಯ್ಕೆ ವಿಚಾರಕ್ಕೆ ಸಂಬಂಧಿಸಿ ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ ಮತ್ತು ಬಿಜೆಪಿ ನಾಯಕ ಸಿಪಿ ಯೋಗೇಶ್ವರ್ ಭಾನುವಾರ ರಾತ್ರಿ ದೆಹಲಿಯಲ್ಲಿ ಮಹತ್ವದ ಸಭೆ ನಡೆಸಿದ್ದಾರೆ. ಈ ವೇಳೆ, ಅಭ್ಯರ್ಥಿ ಆಯ್ಕೆ ಸಂಬಂಧ 1 ವಾರದಲ್ಲಿ ಸ್ಪಷ್ಟತೆ ನೀಡುವಂತೆ ಕುಮಾರಸ್ವಾಮಿ ಬಳಿ ಯೋಗೇಶ್ವರ್ ಕೇಳಿಕೊಂಡಿದ್ದಾರೆ.

ನೀವು ಸಂಪೂರ್ಣವಾಗಿ ಒಪ್ಪಿದರೆ ನಾನೇ ಅಭ್ಯರ್ಥಿ ಆಗುತ್ತೇನೆ. ಇಲ್ಲವಾದಲ್ಲಿ ನಿಖಿಲ್ ಅಭ್ಯರ್ಥಿಯಾದರೂ ನಾನು ಬೆಂಬಲ ನೀಡುತ್ತೇನೆ. ನೀವೇ ಮುಂದೆ ನಿಂತು ಉಪಚುನಾವಣೆಯನ್ನು ನಡೆಸಬೇಕು ಎಂದು ಕುಮಾರಸ್ವಾಮಿ ಬಳಿ ಯೋಗೇಶ್ವರ್ ಹೇಳಿದ್ದಾರೆ. ಚನ್ನಪಟ್ಟಣದಲ್ಲಿ ಕಾಂಗ್ರೆಸ್ ಪಕ್ಷ ತಯಾರಿ ಆರಂಭಿಸಿದೆ. ಅಭ್ಯರ್ಥಿಯನ್ನು ಬೇಗ ಘೋಷಿಸಿದರೆ ನಾವು ಸಿದ್ಧತೆ ಆರಂಭಿಸಬಹುದು ಎಂದು ಯೋಗೇಶ್ವರ್ ಹೇಳಿದ್ದಾರೆ. ಇದೇ ವೇಳೆ, ಈ ವಾರ ಬೆಂಗಳೂರಿಗೆ ಬರುತ್ತೇನೆ. ಮತ್ತೊಮ್ಮೆ ಚರ್ಚಿಸಿ ನಿರ್ಧರಿಸೋಣ ಎಂದು ಕುಮಾರಸ್ವಾಮಿ ಉತ್ತರಿಸಿದ್ದಾರೆ ಎನ್ನಲಾಗಿದೆ.

ಮತ್ತೊಂದೆಡೆ, ಕುಮಾರಸ್ವಾಮಿ ಕರ್ಮಭೂಮಿಯಲ್ಲಿ ಸೋಲಿನ ರುಚಿ ತೋರಿಸಲು ಡಿಸಿಎಂ ಡಿಕೆ ಶಿವಕುಮಾರ್ ಹಾಗೂ ಅವರ ಸಹೋದರ ಡಿಕೆ ಸುರೇಶ್ ಪಣ ತೊಟ್ಟಿದ್ದು,





ಈಗಾಗಲೇ ಕಾರ್ಯಪ್ರವೃತ್ತರಾಗಿದ್ದಾರೆ. ಹೀಗಾಗಿ ಡಿಕೆ ಸಹೋದರರ ವಿರುದ್ಧ ಚನ್ನಪಟ್ಟಣ ಮಿನಿ ಸಮರದಲ್ಲಿ ಗೆಲ್ಲಲು ಪುತ್ರ ನಿಖಿಲಗೆ ಕುಮಾರಸ್ವಾಮಿ ಜವಾಬ್ದಾರಿ ವಹಿಸಲಿದ್ದಾರೆ ಎನ್ನಲಾಗಿದೆ.

ಹೀಗಾಗಿ ಚುನಾವಣೆಯಲ್ಲಿ ಸ್ಪರ್ಧೆ ಬದಲು ಕುಮಾರಸ್ವಾಮಿ ಅನುಪಸ್ಥಿತಿಯಲ್ಲಿ ಎನ್‌ಡಿಎ ಮೈತ್ರಿ ಅಭ್ಯರ್ಥಿಯನ್ನು ಗೆಲ್ಲಿಸಲು ಕೆಲಸ ಮಾಡಲು ನಿಖಿಲ್ ಮುಂದಾಗಿದ್ದಾರೆ ಎನ್ನಲಾಗಿದೆ.

ಡಿಕೆ ಶಿವಕುಮಾರ್ ಈಗಾಗಲೆ ಚನ್ನಪಟ್ಟಣ ಉಪ ಸಮರವನ್ನು ಪ್ರತಿಷ್ಠೆಯಾಗಿ ತೆಗೆದುಕೊಂಡು ನಿರಂತರವಾಗಿ ಪ್ರವಾಸ ಆರಂಭಿಸಿದ್ದಾರೆ. ಇದರ ಬೆನ್ನಲ್ಲೇ ಭಾನುವಾರದಿಂದ ನಿಖಿಲ್ ಕೂಡ ಚನ್ನಪಟ್ಟಣ ಪ್ರವಾಸ ಆರಂಭಿಸಿದ್ದಾರೆ. ಚನ್ನಪಟ್ಟಣ ಉಪಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಿದರೆ ರಾಮನಗರ ಜಿಲ್ಲೆಯಲ್ಲಿ ಇದ್ದ ಒಂದು ಕ್ಷೇತ್ರವನ್ನ ಜೆಡಿಎಸ್ ಕಳೆದುಕೊಳ್ಳಬೇಕಾಗುತ್ತದೆ. ಕುಮಾರಸ್ವಾಮಿ ಕೇಂದ್ರ ಸಚಿವರಾಗಿದ್ದರೂ ಇಡೀ ಜಿಲ್ಲೆಯ ಹಿಡಿತ ಕಡೆದುಕೊಳ್ಳಬೇಕಾಗುತ್ತದೆ. ಕುಮಾರಸ್ವಾಮಿಯ ಕರ್ಮಭೂಮಿಯಲ್ಲಿ ಸೋಲಾದರೆ ಕಾರ್ಯಕರ್ತರು ಚದುರುವ ಸಾಧ್ಯತೆ ಹೆಚ್ಚಾಗಿದೆ. ಹೀಗಾಗಿ ಚನ್ನಪಟ್ಟಣ ಉಪಚುನಾವಣೆಯಲ್ಲಿ ಗೆಲ್ಲುವ ಅನಿವಾರ್ಯತೆ ಇದೆ.

# ಭೀಕರ ಚಂಡಮಾರುತ: ಬಾರ್ಬಡೋಸ್‌ನಲ್ಲೇ ಬೀಡುಬಿಟ್ಟ ಟೀಂ ಇಂಡಿಯಾ!

17 ವರ್ಷಗಳ ಬಳಿಕ ಟಿ20 ವಿಶ್ವಕಪ್ ಗೆದ್ದ ಟೀಂ ಇಂಡಿಯಾಗೆ ತವರಿನಲ್ಲಿ ಭರ್ಜರಿ ಸ್ವಾಗತ ನೀಡಲು ತಯಾರಿಗಳು ನಡೆದಿವೆ. ಆದ್ರೆ, ಅಭಿಮಾನಿಗಳ ಆಸೆಗೆ ಬಾರ್ಬಡೋಸ್‌ಗೆ ಅಪ್ಪಳಿಸಿದ ಭೀಕರ ಚಂಡಮಾರುತ ತಣ್ಣೀರು ಎರಚಿದೆ. ಹಾಗಾಗಿ ಟೀಂ ಇಂಡಿಯಾ ತವರಿನಲ್ಲಿ ವಿಜಯೋತ್ಸವ ಆಚರಿಸಲು ಇನ್ನೂ ಮೂರ್ನಾಲ್ಕು ದಿನ ಕಾಯಬೇಕಿದೆ.

ಕೆರೀಬಿಯನ್ ದ್ವೀಪಗಳಲ್ಲಿ ಸೋಮವಾರ (ಜು.1) ಬೆಳಗ್ಗಿನ ಜಾವದಲ್ಲಿ ಕೆಟಗಿರಿ-4 ಚಂಡಮಾರುತ ಬೀಸುತ್ತಿರುವುದರಿಂದ ವಿಮಾನಯಾನವೂ ಸೇರಿದಂತೆ ಎಲ್ಲ ನಾಗರಿಕ ಸೇವೆಗಳನ್ನು ಸ್ಥಗಿತಗೊಳಿಸಲಾಗಿದೆ. ಮುಖ್ಯ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲೂ ಸದ್ಯಕ್ಕೆ ಸೇವೆ ಸ್ಥಗಿತಗೊಳಿಸಲಾಗಿದೆ.

ಬಾರ್ಬಡೋಸ್ ಮತ್ತು ಸುತ್ತಮುತ್ತಲಿನ ದ್ವೀಪಗಳಲ್ಲಿ ಬಿರುಗಾಳಿಯ ತೀವ್ರತೆಯೂ ಹೆಚ್ಚಾಗಿದ್ದು, ಅಪಾಯಮಟ್ಟದಲ್ಲಿದೆ. 3 ಲಕ್ಷ ಜನಸಂಖ್ಯೆ ಹೊಂದಿರುವ ದ್ವೀಪದಲ್ಲಿ ಭಾನುವಾರ




ಸಂಜೆಯಿಂದಲೇ ಲಾಕ್‌ಡೌನ್ ವಿಧಿಸಲಾಗಿದೆ. ಹೀಗಾಗಿ ಟೀಂ ಇಂಡಿಯಾ ಆಟಗಾರರು ಬಾರ್ಬಡೋಸ್‌ನ ಹೋಟೆಲ್‌ಗೆ ಸೀಮಿತ ಆಗಿದ್ದಾರೆ. ಅವರು ಸ್ವದೇಶಕ್ಕೆ ವಾಪಸ್ ಆಗೋದು ಇನ್ನೂ ಮೂರು ದಿನ ತಡವಾಗಬಹುದು ಎಂದು ಹೇಳಲಾಗಿದೆ.

ಇನ್ನೂ ಈ ಕುರಿತು ಮಾಹಿತಿ ಹಂಚಿಕೊಂಡಿರುವ ಜಯ್ ಶಾ, ನಾವಿಲ್ಲಿ ಸಿಕ್ಕಿಹಾಕಿಕೊಂಡಿದ್ದೇವೆ. ಮೊದಲಿಗೆ ಆಟಗಾರರು ಮತ್ತಿತರರನ್ನು ಸುರಕ್ಷಿತವಾಗಿರುವಂತೆ ನೋಡಿಕೊಳ್ಳುವುದು ಆದ್ಯತೆಯಾಗಿದೆ. ಸ್ವದೇಶಕ್ಕೆ ಹೋದ ನಂತರ ಸನ್ಮಾನದ ಬಗ್ಗೆ ಯೋಚಿಸಬಹುದು ಎಂದು ಹೇಳಿದ್ದಾರೆ.

ಸ್ವದೇಶಕ್ಕೆ ಆಗಮಿಸಿದ ನಂತರ ಮುಂಬೈ ಏರ್‌ಪೋರ್ಟ್‌ನಿಂದ ಬಿಸಿಸಿಐ ಕಚೇರಿವರೆಗೆ ಮೆರವಣಿಗೆ ನಡೆಸಲು ಬಿಸಿಸಿಐ ಆಲೋಚಿಸಿದೆ. ಇತ್ತ, ಸಂಸತ್‌ನ ಉಭಯ ಸದನಗಳಲ್ಲಿ ವಿಶ್ವಕಪ್ ಗೆದ್ದ ಟೀಂ ಇಂಡಿಯಾ ಆಟಗಾರರನ್ನು ಅಭಿನಂದಿಸಲಾಗಿದೆ.

# ಡಿಕೆಶಿ ಮುಖ್ಯಮಂತ್ರಿ ಆಗ್ಲೇಬೇಕು, ಆಗಿಯೇ ಆಗ್ತಾರೆ

**ಬಳ್ಳಾರಿ:** ಡಿಕೆ ಶಿವಕುಮಾರ್ ಮುಖ್ಯಮಂತ್ರಿ ಆಗಲೇಬೇಕು. ಆಗಿಯೇ ಆಗುತ್ತಾರೆ ಎಂದು ಚೆನ್ನಗಿರಿ ಶಾಸಕ ಶಿವಗಂಗಾ ಬಸವರಾಜ್ ಮತ್ತೊಮ್ಮೆ ಪುನರುಚ್ಚರಿಸಿದ್ದಾರೆ.

ವಿಜಯನಗರ ಜಿಲ್ಲೆಯ ಕೊಟ್ಟೂರಿನಲ್ಲಿ ಮಾತನಾಡಿದ ಅವರು, ತಳಮಟ್ಟದಿಂದ ಪಕ್ಷ ಸಂಘಟನೆ ಮಾಡಿದ್ದು ಡಿಕೆ ಶಿವಕುಮಾರ್. ಹೀಗಾಗಿ ಡಿಕೆ ಶಿವಕುಮಾರ್ ರಾಜ್ಯದ ಮುಖ್ಯಮಂತ್ರಿ ಆಗಬೇಕು. ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರಲು ಮತ್ತು ಲೋಕಸಭಾ ಚುನಾವಣೆಯಲ್ಲಿ ಒಂದರಿದ ಒಂಭತ್ತು ಸ್ಥಾನ ಗೆಲ್ಲಲು ಡಿಕೆಶಿಯೇ ಕಾರಣ. ಡಿಸಿಎಂ ಡಿಕೆ ಶಿವಕುಮಾರ್ ಮುಖ್ಯಮಂತ್ರಿ ಆಗುವುದು ಖಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಡಿಕೆ ಶಿವಕುಮಾರ್ ಅವರನ್ನು ಸಿಎಂ ಮಾಡಿದ ಬಳಿಕ ಡಜನ್ ವ್ಯಕ್ತಿಗಳನ್ನು ಡಿಸಿಎಂ ಮಾಡಲಿ. ಕೆಪಿಸಿಸಿ ಅಧ್ಯಕ್ಷರನ್ನೇ ಸಿಎಂ ಮಾಡುವುದು ಕಾಂಗ್ರೆಸ್‌ನಲ್ಲಿ ನಡೆದು ಬಂದ ಪದ್ಧತಿ. ಈ ಬಾರಿ ಕೆಲ ಕಾರಣಕ್ಕಾಗಿ ಸಿದ್ದರಾಮಯ್ಯರನ್ನು ಹೈಕಮಾಂಡ್ ಸಿಎಂ ಮಾಡಿದೆ. ಡಿಕೆ ಶಿವಕುಮಾರ್ ಅಧ್ಯಕ್ಷರಾದ ನಂತರ ತಳ



ಮಟ್ಟದಿಂದ ಪಕ್ಷ ಸಂಘಟಿಸಿದ್ದಾರೆ ಎಂದು ಮೆಚ್ಚುಗೆಯ ಮಾತನ್ನು ಆಡಿದರು.

ಡಿಸಿಎಂ ಹುದ್ದೆಗಾಗಿ ಸಚಿವ ರಾಜಣ್ಣ ಬಹಿರಂಗ ಚರ್ಚೆ ವಿಚಾರಕ್ಕೂ ಪ್ರತಿಕ್ರಿಯಿಸಿದ ಅವರು, ಡಿಸಿಎಂ ಹುದ್ದೆ ಬೇಕೆಂದವರು ಪಕ್ಷದ ಹೈಕಮಾಂಡ್ ಬಳಿ ತೆರಳಿ ಚರ್ಚಿಸಬೇಕು. ಹಿರಿಯರು, ಅನುಭವಿಗಳು, ನಮ್ಮಂತ ಕಿರಿಯ ಶಾಸಕರಿಗೆ ಮಾದರಿ ಆಗಬೇಕು. ಅಧ್ಯಕ್ಷರು ಎಚ್ಚರಿಕೆ ಸಂದೇಶ ನೀಡಿದ್ದರೂ ಅದನ್ನು ಮೀರಿ ಮತ್ತೆ ಮಾತನಾಡುತ್ತಿದ್ದಾರೆ. ಡಿಕೆಶಿ ಶ್ರಮದಿಂದ ಪಕ್ಷ ಸದೃಢವಾಗಿದೆ. ಈಗ ಬಂದು ರಾಜ್ಯಾಧ್ಯಕ್ಷರಾಗಲು ಸಿದ್ಧ ಅಂತಿದ್ದಾರೆ. ಪಕ್ಷ ಕಷ್ಟದ ಕಾಲದಲ್ಲಿದ್ದಾಗ ರಾಜಣ್ಣ ಮಾತನಾಡಲಿಲ್ಲ. ಆಗ ಕಾಂಗ್ರೆಸ್ ಪಕ್ಷ ಗಟ್ಟಿಗೊಳಿಸಿದ್ದು ಡಿಕೆ ಶಿವಕುಮಾರ್ ಎಂದು ತಿರುಗೇಟು ನೀಡಿದರು.

ಡಿಕೆಶಿ ಸಿಎಂ ಆಗಲಿ ಎಂದು ಒಕ್ಕಲಿಗ ಸ್ವಾಮೀಜಿ ಅಂತ ಹೇಳಿರೋದ್ರಲ್ಲಿ ತಪ್ಪೇನಿಲ್ಲ. ರಾಜ್ಯದ ಜನರ ಭಾವನೆಗಳಿಗೆ, ಭಕ್ತರ ಆಶಯವನ್ನ ಸ್ವಾಮೀಜಿ ವ್ಯಕ್ತಪಡಿಸಿದ್ದಾರೆ ಅಷ್ಟೇ. ಸಿಎಂ, ಡಿಸಿಎಂ ಹುದ್ದೆಗಳಿಗೆ ನಮ್ಮ ಪಕ್ಷದೊಳಗೆ ಮಾತುಗಳು ಕೇಳಿ ಬರುತ್ತಿವೆ. ಹಿಂಬಾಗಿಲಿಂದ ಅಧಿಕಾರ ಹಿಡಿಯಲು ಬಿಜೆಪಿ ದೊಡ್ಡದಾಗಿ ಬಿಂಬಿಸಿ ಪ್ರಚಾರ ಮಾಡುತ್ತಿದೆ. ಬಿಜೆಪಿ ಅಧಿಕಾರ ಹಿಡಿಯುವ ಕನಸು ಕಾಣೋದನ್ನ ಬಿಡಬೇಕು. ಕಾಂಗ್ರೆಸ್ಸೇ ಐದು ವರ್ಷ ಅಧಿಕಾರ ನಡೆಸುತ್ತದೆ ಎಂದರು.

ಚನ್ನಗಿರಿ ಕ್ಷೇತ್ರದ ಕಾಂಗ್ರೆಸ್ ಶಾಸಕ ಶಾಸಕ ಬಸವರಾಜ್ ಶಿವಗಂಗಾ ಅವರು ಡಿಸಿಎಂ ಡಿ.ಕೆ. ಶಿವಕುಮಾರ್ ಹೆಸರಿನ ಮೇಲೆ ವಿಧಾನಸಭೆಯಲ್ಲಿ ಪ್ರಮಾಣವಚನ ಸ್ವೀಕರಿಸಿದ್ದರು. 8 ತಿಂಗಳ ಹಿಂದೆ ಮುಂದಿನ ಎರಡೂವರೆ ವರ್ಷದ ಬಳಿಕ ಅವರು ಮುಖ್ಯಮಂತ್ರಿಯಾಗಲಿದ್ದಾರೆ ಎಂದು ಹೇಳಿ ಸಂಚಲನ ಮೂಡಿಸಿದ್ದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com